ಸಂಪುಟ: ೦೭/ ಸಂಚಿಕೆ: ೨೦೦/ ರವಿವಾರ ದಿನಾಂಕ : ೨೮-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 200/SUNDAY Date : 28-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



ನವರಾತ್ರಿ ಉತ್ಸವ ಆರನೆಯ ದಿನವಾದ ಶನಿವಾರ ಧಾರವಾಡ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿಗೆ ಶ್ರೀ ಶಾಖಾಂಭರಿ ದೇವಿ ಅಲಂಕಾರ.

## ರಸ್ತೆಗುಂಡಿ ಮುಚ್ಚಲು ಗಡುವು

### ಇಂಜಿನಿಯರ್ ಅಮಾನತ್ತಿಗೆ ಮುಖ್ಯಮಂತ್ರಿ ಆದೇಶ

**ಬೆಂಗಳೂರು:** ಬೆಂಗಳೂರಿನಲ್ಲಿ ಮಳೆಯಿಂದಾಗಿ ರಸ್ತೆ ಗುಂಡಿಗಳು ಹೆಚ್ಚಾಗಿದ್ದು ಗುಂಡಿ ಮುಚ್ಚುವಂತೆ ರಾಜ್ಯ ಸರ್ಕಾರ ನವೆಂಬರ್ ತಿಂಗಳ ಡೆಡ್ ಲೈನ್ ಹಾಕಿಕೊಂಡಿದೆ. ಈ ಮಧ್ಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಸಿಟಿ ರೌಂಡ್ಸ್ ನಡೆಸಿದರು.

ಅಧಿಕೃತ ನಿವಾಸ ಕಾವೇರಿಯಿಂದ ಹೊರಟ ಸಿದ್ದರಾಮಯ್ಯ ವಿಂಡ್ಸರ್ ಮ್ಯಾನರ್ ಸಮೀಪ ರಸ್ತೆಯ ಮೇಲೆ ಮಳೆ ನೀರು ಸಂಗ್ರಹವಾಗುತ್ತಿದ್ದ ಸ್ಥಳಕ್ಕೆ ಭೇಟಿ ನೀಡಿ, ಅಧಿಕಾರಿಗಳಿಂದ ನೀರು ನಿಲ್ಲಲು ಕಾರಣವೇನು ಎಂಬ ಬಗ್ಗೆ ಮಾಹಿತಿ ಪಡೆದರು. ಬಳಿಕ ವಿಬ್ ಗಯಾರ್ ರಸ್ತೆಗೆ ಭೇಟಿ ನೀಡಿ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯ ಪರಿಶೀಲನೆ ನಡೆಸಿದರು. ಆ ನಂತರ ಹೆಣ್ಣೂರಿನ ಬಾಗಲೂರು ರಸ್ತೆಯ ವೈಟ್ ಟಾಪಿಂಗ್ ಕಾಮಗಾರಿಯನ್ನು ಪರಿಶೀಲನೆ ನಡೆಸಿದ ಸಿದ್ದರಾಮಯ್ಯ, ರಸ್ತೆ ಗುಂಡಿಗಳಿಗೆ ಜಲ್ಲಿ ಹಾಕಿ ಬಿಡೋದಲ್ಲ. ಸರಿಯಾಗಿ ನಿರ್ವಹಿಸಬೇಕು. ವೇಗವಾಗಿ ಕಾಮಗಾರಿ ನಡೆಸುವಂತೆ ಸೂಚಿಸಿದರು.

ಮಳೆಗಾಲದಲ್ಲಿ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಇವುಗಳನ್ನು ದುರಸ್ತಿಗೊಳಿಸಿ, ರಸ್ತೆಗಳನ್ನು ಸಂಚಾರ ಯೋಗ್ಯವಾಗಿಸಲು ಒಂದು ತಿಂಗಳ ಕಾಲಾವಕಾಶವನ್ನು ನೀಡಲಾಗಿದೆ. ಪಣತ್ತೂರು ಟಿ ಕ್ರಾಸ್ ಬಳಿ ರಸ್ತೆಯುದ್ದಕ್ಕೂ ಕಟ್ಟಡ ನಿರ್ಮಾಣದ ತ್ಯಾಜ್ಯ, ಸಿಸಿಟಿವಿ ಅಳವಡಿಸಿ ಕ್ರಮ ಕೈಗೊಳ್ಳಲು ಮತ್ತು ಬಿಬಿಎಂಪಿ ಮಾರ್ಷಲ್ ಗಳನ್ನು ಕರ್ತವ್ಯಕ್ಕೆ ನಿಯೋಜಿಸಿ ತ್ಯಾಜ್ಯ ಸುರಿಯುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಥಳದಲ್ಲಿದ್ದ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಮತ್ತು ಬಿಬಿಎಂಪಿ ಆಯುಕ್ತರಿಗೆ ಸೂಚಿಸಿದರು. ನಗರದ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲು ಸೂಚನೆ ನೀಡಲಾಗಿದ್ದು, ಈ ಕಾರ್ಯ



ಗುಣಮಟ್ಟದಿಂದ ಕೂಡಿರಬೇಕು. ಕರ್ತವ್ಯದಲ್ಲಿ ನಿರ್ಲಕ್ಷ್ಯದ ಕಾರಣ ಹೆಣ್ಣೂರು ಬಾಗಲೂರು ವಿಭಾಗದ ಎಕ್ಸಿಕ್ಯೂಟಿವ್ ಇಂಜಿನಿಯರ್ ನ್ನು ಅಮಾನತ್ತುಗೊಳಿಸಲಾಗಿದೆ. ಗುಂಡಿ ಮುಚ್ಚಲು ಕೇವಲ ಜಲ್ಲಿ ಹಾಕಿ ಟಾರ್ ಹಾಕದೇ ಹಾಗೇ ಬಿಟ್ಟಿದ್ದ ಕಾರಣ, ಅವರ ಮೇಲೆ ಕ್ರಮ ಕೈಗೊಳ್ಳಲಾಗಿದೆ. ಹೆಣ್ಣೂರು ರಸ್ತೆ ವೈಟ್ ಟಾಪಿಂಗ್ ಕಾಮಗಾರಿ ನಡೆಯುತ್ತಿದ್ದು, ರಸ್ತೆಯ ನಿರ್ವಹಣೆಯನ್ನು ಸಂಬಂಧಪಟ್ಟ ಗುತ್ತಿಗೆದಾರರ ಜವಾಬ್ದಾರಿಯಾಗಿರುತ್ತದೆ. 5 ಕಿ.ಮೀ ರಸ್ತೆ ಕಾಮಗಾರಿಯನ್ನು ಕಿ.ಮೀ. ಒಂದಕ್ಕೆ 13 ಕೋಟಿಗಳನ್ನು ಸರ್ಕಾರ ವ್ಯಯಿಸುತ್ತಿದೆ. ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲು ಒಂದು ತಿಂಗಳ ಕಾಲಾವಕಾಶವನ್ನು ನೀಡಲಾಗಿದೆ. ರಸ್ತೆಗಳಲ್ಲಿ ಯಾವುದೇ ಗುಂಡಿಗಳಿಲ್ಲದಂತೆ ಮುಚ್ಚಬೇಕೆಂದು ಸೂಚನೆ ನೀಡಲಾಗಿದೆ.

## ಪಂಚ ಗ್ಯಾರಂಟಿ ಯೋಜನೆಗಳು

### ಭವಿಷ್ಯದ ಕಾಂಗ್ರೆಸ್ ಸರ್ಕಾರವನ್ನು ಕಾಪಾಡಲಿವೆ

**ರಾಮನಗರ:** "ಭವಿಷ್ಯದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಪಂಚ ಗ್ಯಾರಂಟಿ ಯೋಜನೆಗಳೆ ಕಾಪಾಡುತ್ತವೆ ಎನ್ನುವ ವಿಶ್ವಾಸ ನನಗಿದೆ. ಗ್ಯಾರಂಟಿ ಯೋಜನೆಗಳು ಸಮಾಜದಲ್ಲಿ ದೊಡ್ಡ ಸಾಮಾಜಿಕ ಬದಲಾವಣೆಯನ್ನು ಉಂಟು ಮಾಡಿವೆ. ಆರ್ಥಿಕವಾದ ಶಕ್ತಿ ನೀಡಿವೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಅಭಿಪ್ರಾಯಪಟ್ಟಿದ್ದಾರೆ.

ರಾಮನಗರದಲ್ಲಿ ಶನಿವಾರ ನಡೆದ ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿಗಳ ಪದಾಧಿಕಾರಿಗಳ ಸಭೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಮಾತನಾಡಿದರು.

"ಬಿಜೆಪಿ ಮತ್ತು ಜನತಾದಳದವರು ಮುಂದಿನ ದಿನಗಳಲ್ಲಿ ಹೇಗಾದರೂ ಮಾಡಿ ಈ ಗ್ಯಾರಂಟಿ ಯೋಜನೆಗಳನ್ನು ಯಾರಿಗೂ ಸಿಗದಂತೆ ಮಾಡಬೇಕೆನ್ನುವ ಷಡ್ಯಂತ್ರ ಮಾಡುತ್ತಿದ್ದಾರೆ. ಐದು ಗ್ಯಾರಂಟಿಗಳು ಉಳಿಯಬೇಕು ಎಂದರೆ ಕಾಂಗ್ರೆಸ್ ಸರ್ಕಾರ ಶಾಶ್ವತವಾಗಿ ಇರಬೇಕು. ಈ ನಿಟ್ಟಿನಲ್ಲಿ ನೀವುಗಳು ಕೆಲಸ ಮಾಡಬೇಕು" ಎಂದರು.

"ಚನ್ನಪಟ್ಟಣ ಉಪಚುನಾವಣೆಯಲ್ಲಿ ಯೋಗೇಶ್ವರ್ ಅವರು ಗೆಲ್ಲಲು ಗ್ಯಾರಂಟಿ ಯೋಜನೆಗಳ ಯಶಸ್ಸೇ ಕಾರಣ. ಮಹಿಳೆಯರು ಮಾಡಿದ ಉಪಕಾರವನ್ನು ಎಂದಿಗೂ ಮರೆಯುವುದಿಲ್ಲ ಉಪಕಾರ ಸ್ಮರಣೆಯನ್ನು ಅವರು ಹೊಂದಿರುತ್ತಾರೆ. ಯಾವುದೇ ರಾಜ್ಯಕ್ಕೆ ಹೋದರು, ಕರ್ನಾಟಕದ ಗ್ಯಾರಂಟಿ ಯೋಜನೆಗಳ ಬಗ್ಗೆ ಹೊಗಳುತ್ತಿದ್ದಾರೆ. ಜನರಿಗೆ ದೊಡ್ಡ ಉಪಕಾರ ಮಾಡಿದ್ದೀರಿ ಎಂದು ನನ್ನ ಬಳಿ ಹೇಳುತ್ತಿದ್ದಾರೆ" ಎಂದರು. ಯುವಕರ ಗುಂಪು ರಚಿಸಿ ಅವರಿಗೆ ಈ ಯೋಜನೆಗಳ ಬಗ್ಗೆ ಜ್ಞಾನ ಕೊಡಬೇಕು. ಸಾಮಾಜಿಕ ಜಾಲತಾಣಗಳ ಮೂಲಕ ಇದರ ಉಪಯೋಗವನ್ನು ಪ್ರಚಾರ ಮಾಡಬೇಕು. ಗೃಹಲಕ್ಷ್ಮೀ ಹಣದಿಂದ ಮಹಿಳೆಯರು ಗಂಡನಿಗೆ ಟ್ರ್ಯಾಕ್ಟರ್, ಬೈಕ್



**ಫಲಾನುಭವಿಗಳ ಸಮಾವೇಶ ನಡೆಸಿ**

"ಗ್ಯಾರಂಟಿ ಅನುಷ್ಠಾನ ಸಮಿತಿ ಗಳಿಂದ ಪ್ರತಿ ಪಂಚಾಯಿತಿ ಮಟ್ಟದಲ್ಲಿ ಗ್ಯಾರಂಟಿ ಫಲಾನುಭವಿಗಳ ಸಮಾವೇಶ ಹಮ್ಮಿಕೊಳ್ಳಬೇಕು. ಗ್ಯಾರಂಟಿ ಯೋಜನೆಗಳನ್ನು ಉತ್ತಮ ರೀತಿಯಲ್ಲಿ ಬಳಸಿಕೊಳ್ಳುತ್ತಿರುವ ಮೂರು ನಾಲ್ಕು ಜನರನ್ನು ಗುರುತಿಸಿ ಸನ್ಮಾನಿಸಬೇಕು. ಬೃಹತ್ ಸಮಾವೇಶ ನಡೆಸದೆ, ಚಿಕ್ಕದಾದ ಚೊಕ್ಕದಾದ ಸಮಾವೇಶ ನಡೆಸಬೇಕು" ಎಂದು ಸಲಹೆ ನೀಡಿದರು.

ತೆಗೆದುಕೊಟ್ಟಿದ್ದಾರೆ. ಸ್ವಂತ ಉದ್ಯಮ ತೆರೆದು ಸ್ವಾವಲಂಬಿಯಾಗಿದ್ದಾರೆ. ಇದೆಲ್ಲವನ್ನು ಜನರಿಗೆ ಹೆಚ್ಚು, ಹೆಚ್ಚು ತಿಳಿಸಬೇಕು" ಎಂದರು.ಗ್ಯಾರಂಟಿ ಯೋಜನೆಗಳಿಂದ ಬದುಕು ಹೇಗೆ ಬದಲಾಯಿತು ಎಂದು ಫಲಾನುಭವಿಗಳಿಂದ ಅಭಿಪ್ರಾಯವನ್ನು ಹೇಳಿಸಬೇಕು. ಈ ಕಾರ್ಯ ಕ್ರಮವನ್ನು ಮಾದರಿಯಾಗುವಂತೆ ರೂಪಿಸಬೇಕು" ಎಂದು ತಿಳಿಸಿದರು. ಸಮಾಜದಿಂದ ಪಡೆದ ಹಣವನ್ನು ಸ್ವಾಹ ಮಾಡದೇ ಶಾಲೆ, ಆಸ್ಪತ್ರೆಗಳನ್ನು ನಿರ್ಮಾಣ ಮಾಡಿ ಎಂದು ಸಾಯಿಬಾಬಾ ಅವರು ಬಾಲಗಂಗಾಧರನಾಥ ಸ್ವಾಮೀಜಿ ಹಾಗೂ ದೇವೇಗೌಡರ ಸಮ್ಮುಖದಲ್ಲಿ ಹೇಳಿದ್ದರು. ಅದಕ್ಕೆ ನಾವು ಗ್ಯಾರಂಟಿ ಯೋಜನೆಗಳ ಮೂಲಕ ಜನರಿಗೆ ಒಂದು ಲಕ್ಷ ಕೋಟಿಗೂ ಹೆಚ್ಚು ಹಣ ಹಂಚಿದ್ದೇವೆ" ಎಂದರು.

## ಬೈಲಹೊಂಗಲದಲ್ಲಿ ಭಾರೀ ಮಳೆಗೆ ಜನಜೀವನ ಅಸ್ತವ್ಯಸ್ತ



**ಬೈಲಹೊಂಗಲ:** ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ತಾಲೂಕಿನಾದ್ಯಂತ ಜನಜೀವನ ಅಸ್ತವ್ಯಸ್ತಗೊಂಡಿದೆ. ನಿರಂತರ ಮಳೆಯಿಂದ ತಗ್ಗು ಪ್ರದೇಶಗಳಲ್ಲಿ ಮನೆಗಳಿಗೆ ನೀರು ನುಗ್ಗಿ ಜನರು ತೊಂದರೆ ಅನುಭವಿಸುತ್ತಿದ್ದಾರೆ.

ಬೈಲಹೊಂಗಲ ಪಟ್ಟಣದ ಹುಡೇದ ಬಾವಿ, ಹರಳಯ್ಯ ಕಾಲೋನಿ ಸೇರಿದಂತೆ ಅನೇಕ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದೆ.ಗ್ರಾಮೀಣ ಭಾಗದಲ್ಲೂ ಪರಿಸ್ಥಿತಿ ಗಂಭೀರವಾಗಿದೆ. ಬೈಲವಾಡ ಗ್ರಾಮದ ಹತ್ತಿರದ ಹಳ್ಳ ತುಂಬಿ ನೇಸರಗಿ–ಬೈಲಹೊಂಗಲ ರಸ್ತೆ ಬಂದ್ ಕಾರಣ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದೆ. ಇದೇ ರೀತಿ ಹೊಸೂರ ಹತ್ತಿರ ಹಳ್ಳ ಉಕ್ಕಿ ಹರಿದು ಬೈಲಹೊಂಗಲ– ಮುನವಳ್ಳಿ ಮುಖ್ಯ ರಸ್ತೆ ಬಂದ್ ಆಗಿದೆ. ರಸ್ತೆಯ ಎರಡೂ ಬದಿಯಲ್ಲಿ ವಾಹನಗಳು ಸಿಲುಕಿಕೊಂಡಿದ್ದು, ಬಸ್ ಹಾಗೂ ಕಾರುಗಳಲ್ಲಿ ಪ್ರಯಾಣಿಸುತ್ತಿದ್ದವರು ಪರ್ಯಾಯ ಮಾರ್ಗ ಹಿಡಿದು ತಲುಪಬೇಕಾದ ಪರಿಸ್ಥಿತಿ ಎದುರಾಗಿದೆ. ಅತಿವೃಷ್ಟಿಯಿಂದ ಕೃಷಿ ಕ್ಷೇತ್ರಕ್ಕೂ ತೀವ್ರ ಹಾನಿಯ ಭೀತಿ ಎದುರಾಗಿದೆ. ವಿಶೇಷವಾಗಿ ಸೋಯಾಬಿನ್ ಹಾಗೂ ಹಂಗಾಮಿನ ಬೆಳೆಗಳು ನೀರಿನಲ್ಲಿ ಕೊಚ್ಚಿ ಹೋಗುವ ಸಾಧ್ಯತೆ ಹೆಚ್ಚಿರುವುದರಿಂದ ರೈತರು ಆತಂಕದಲ್ಲಿದ್ದಾರೆ.

## ಅನುಚಿತ ವರ್ತನೆ: ವ್ಯಕ್ತಿ ಬಂಧನ

**ಬೆಂಗಳೂರು:** ಕುಡಿದು ವಾಹನ ಚಾಲನೆ ತಪಾಸಣೆ ವೇಳೆ ಮಹಿಳಾ ಪೊಲೀಸ್ ಅಧಿಕಾರಿಯೊಂದಿಗೆ ಅನುಚಿತವಾಗಿ ವರ್ತಿಸಿದ ಹಾಗೂ ಬ್ರೀತ್ ಅನಲೈಸರ್ ಪರೀಕ್ಷೆಗೆ ಒಳಗಾಗಲು ನಿರಾಕರಿಸಿದ ಆರೋಪದ ಮೇಲೆ 29 ವರ್ಷದ ಯುವಕನನ್ನು ಶನಿವಾರ ಬಂಧಿಸಲಾಗಿದೆ.

ಇಂದಿರಾ ನಗರದ ಪಬ್ ವೊಂದರ ಬಳಿ ಸೆಪ್ಟೆಂಬರ್ 26 ರಂದು ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯನ್ನು ಆದಿತ್ಯ ಅಗರ್ವಾಲ್ ಎಂದು ಗುರುತಿಸಲಾಗಿದ್ದು, ಪರೀಕ್ಷೆಗೆ ನಿಲ್ಲಿಸಿದಾಗ ಮದ್ಯದ ಅಮಲಿನಲ್ಲಿದ್ದ ಎನ್ನಲಾಗಿದೆ. ಆತ ಬ್ರೀತ್ ಅನಲೈಸರ್ ಪರೀಕ್ಷೆ ನಿರಾಕರಿಸುವ ಮೂಲಕ ಪೊಲೀಸ್ ಅಧಿಕಾರಿಯೊಂದಿಗೆ ಅನುಚಿತವಾಗಿ ವರ್ತಿಸಿದ್ದು, ಕನ್ನಡದ ಬದಲಿಗೆ ಹಿಂದಿ ಅಥವಾ ಇಂಗ್ಲಿಷ್‌ನಲ್ಲಿ ಮಾತನಾಡಬೇಕೆಂದು ಒತ್ತಾಯಿಸಿದ್ದಾನೆ.

## ಸಮೀಕ್ಷೆ ತಾಂತ್ರಿಕ ಸಮಸ್ಯೆ ಪರಿಹಾರಕ್ಕೆ ಮುಖ್ಯಮಂತ್ರಿಗೆ ಮನವಿ

**ಬೆಂಗಳೂರು:** 'ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ' ಸಂದರ್ಭದಲ್ಲಿ ಗಣತಿದಾರರಿಗೆ ಆಗುತ್ತಿರುವ ಸಮಸ್ಯೆಗಳು ಹಾಗೂ ಆಪ್, ನೆಟ್‌ವರ್ಕ್ ಸೇರಿದಂತೆ ತಾಂತ್ರಿಕ ತೊಂದರೆಗಳನ್ನು ನಿವಾರಿಸಬೇಕು ಎಂದು ಕೋರಿ ಬಿಜೆಪಿ ರಾಷ್ಟ್ರೀಯ ಮಾಜಿ ಪ್ರಧಾನ ಕಾರ್ಯದರ್ಶಿ ಹಾಗೂ ಪರಿಷತ್ ಸದಸ್ಯ ಸಿ.ಟಿ.ರವಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿದ್ದಾರೆ.

ಗಣತಿದಾರ ಶಿಕ್ಷಕರಾದ ಎಲ್ಲರಿಗೂ ತಾಂತ್ರಿಕ ಜ್ಞಾನ ಇರುವುದು, ಮೊಬೈಲ್‌ಫೋನ್ ಬಳಕೆಯಲ್ಲಿ ತಾಂತ್ರಿಕ ಜ್ಞಾನದ ಸಮಸ್ಯೆಯೂ ಕೆಲವೆಡೆ ಕಂಡುಬಂದಿದೆ. ಒಂದು ಮನೆಯಲ್ಲಿ ನಾಲ್ಕೈದು ಜನರಿದ್ದರೆ, ಎರಡರಿಂದ ಎರಡೂವರೆ ಗಂಟೆ ಬೇಕಾಗುತ್ತದೆ. ದಿನಕ್ಕೆ ಆರರಿಂದ 8ಮನೆ ಸಮೀಕ್ಷೆ ಮಾಡಲಷ್ಟೇ ಸಾಧ್ಯವಿದೆ. ಹೆಚ್ಚುವರಿ ಮನೆ ನೀಡಿದ್ದರ ಬಗ್ಗೆ ಪರಿಶೀಲಿಸಬೇಕಿದೆ. ಅಲ್ಲದೆ, ಒಟಿಪಿಯೂ ಬರುತ್ತಿಲ್ಲ ಎಂಬ ದೂರುಗಳಿದ್ದು ಎಲ್ಲ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಅವರು ಕೋರಿದ್ದಾರೆ.

ಸಮೀಕ್ಷೆಯನ್ನು ಮಾಡದೇ ಇದ್ದರೆ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗಣತಿಗಾರರಿಗೆ ಧಮ್ಕಿ ಹಾಕಿದ್ದಾರೆ. ಆದರೆ, ಗಣತಿದಾರರ ಸಮಸ್ಯೆ ಬಗೆಹರಿಸುವ ಪ್ರಯತ್ನವಾದರೂ ಏನು ಮಾಡಿದ್ದೀರಿ?. ನೆಟ್‌ವರ್ಕ್ ಸಮಸ್ಯೆ ವ್ಯಾಪಕವಾಗಿದೆ. ಇವರು ಕೊಟ್ಟ ಆಪ್ ಸಮಸ್ಯಾತ್ಮಕವಾಗಿದೆ. ಮಾಹಿತಿ ಅಪ್‌ಲೋಡ್



ಮಾಡಲಾಗುತ್ತಿಲ್ಲ ಎಂದು ಅವರು ಆಕ್ಷೇಪಿಸಿದ್ದಾರೆ. ಮನೆಗಳ ಸಂಖ್ಯೆಯನ್ನು ಸರಿಯಾಗಿ ಕೊಟ್ಟಿಲ್ಲ. ಒಂದು ಮನೆ ಒಂದೆಡೆ, ನಂತರದ ಮನೆ ಇನ್ನೆಲ್ಲೋ ಎಂಬಂತೆ ಸಂಖ್ಯೆ ಕೊಟ್ಟಿದ್ದಾರೆ. ಒಂದು ಶಾಲೆ ಶಿಕ್ಷಕರನ್ನು ಇನ್ನೊಂದು ಪ್ರದೇಶಕ್ಕೆ ಹಾಕಿದ್ದಾರೆ. ಇದರಿಂದಲೂ ಸಮಸ್ಯೆ ಆಗುತ್ತಿದೆ. ಶಿಕ್ಷಕರ ಜೊತೆ ನೀವು ಮಾತನಾಡಿದರೆ ಸಮಸ್ಯೆ ಏನೆಂದು ಅರ್ಥವಾಗುತ್ತದೆ ಎಂದು ಅವರು ತಿಳಿಸಿದ್ದಾರೆ. ಪ್ರಾಯೋಗಿಕ ಸಮೀಕ್ಷೆ ಮಾಡಿಲ್ಲ: ಸಮೀಕ್ಷೆಗೆ ಮೊದಲು ಪೂರ್ವತಯಾರಿ ಮಾಡಬೇಕು. ಅಗತ್ಯ ತರಬೇತಿ ನೀಡಬೇಕು. ಕೆಲವು ಪ್ರದೇಶಗಳಲ್ಲಿ ಮೊದಲೇ ಪ್ರಾಯೋಗಿಕ ಸಮೀಕ್ಷೆ ಮಾಡಬೇಕಿತ್ತು. ಅಲ್ಲಿ ಬರುವ ಸಮಸ್ಯೆಗಳನ್ನು ಗಮನಿಸಿ ಪರಿಹರಿಸಬೇಕಿತ್ತು. ಆಮೇಲೆ ಸಮೀಕ್ಷಾ ಮಾದರಿ ಮಾಡಿ ಅದನ್ನು ವಿಸ್ತರಿಸಬೇಕು. ಇಲ್ಲಿ ಪ್ರಾಯೋಗಿಕ ಸಮೀಕ್ಷೆ ಮಾಡಿಲ್ಲ. ಸೂಕ್ತ ತರಬೇತಿ ನೀಡಿಲ್ಲ ಎಂದು ಅವರು ದೂರಿದ್ದಾರೆ.

### ಬಿಎಸ್‌ಎನ್‌ಎಲ್ 4ಜಿ ಸೇವೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

## ಡಬಲ್ ಇಂಜಿನ್ ಸರ್ಕಾರದಲ್ಲಿ ಅಭಿವೃದ್ಧಿ ವೇಗ

**ಜಾರ್ಸುಗುಡ (ಒಡಿಶಾ):** ಟೆಲಿಕಮ್ಯೂನಿಕೇಷನ್ ಮೂಲ ಸೌಕರ್ಯಗಳಿಗೆ ಪ್ರಮುಖ ಉತ್ತೇಜನ ನೀಡುವ ನಿಟ್ಟಿನಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಶನಿವಾರ ಬಿಎಸ್‌ಎಲ್‌ಎನ್ ಸ್ವದೇಶಿ 4ಜಿ ನೆಟ್‌ವರ್ಕ್ ಸೇವೆ ಸೇರಿದಂತೆ ವಿವಿಧ ಪ್ರಮುಖ ಕ್ಷೇತ್ರಗಳಲ್ಲಿ 60,000 ಕೋಟಿ ರೂ.ಗಳಿಗೆ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿದರು.

ಜಾರ್ಸುಗುಡದ ಅಮ್ಲಿಪಾಲಿ ಮೈದಾನದಲ್ಲಿ ಮಾತನಾಡಿದ ಅವರು, ಡಬಲ್ ಎಂಜಿನ್ ಸರ್ಕಾರವು ರಾಜ್ಯದಲ್ಲಿ ಅಭಿವೃದ್ಧಿಯ ವೇಗವನ್ನು ಹೆಚ್ಚಿಸಲು ಬದ್ಧವಾಗಿದೆ. ಒಡಿಶಾವನ್ನು ಸಮೃದ್ಧಿಯತ್ತ ಕೊಂಡೊಯ್ಯಲು ನಮ್ಮ ಸರ್ಕಾರ ಬದ್ಧವಾಗಿದೆ. ಒಡಿಶಾವು ನೈಸರ್ಗಿಕವಾಗಿ ಅಪಾರ ಕೊಡುಗೆಯನ್ನು ಪಡೆದಿದೆ. ಹಲವು ದಶಕಗಳ ಕಾಲ ರಾಜ್ಯವು ಬಳಲಿದೆ. ಆದರೆ, ಕಳೆದ ಕೆಲವು ದಿನದಿಂದ ಸಮೃದ್ಧಿ ಕಡೆಗೆ ಕೆಲಸ ಮಾಡುತ್ತಿದ್ದು, ಇತ್ತೀಚಿಗೆ ಕೇಂದ್ರ ಸರ್ಕಾರವು ಎರಡು ಸೆಮಿಕಂಡಕ್ಟರ್ ಘಟಕಗಳ ಸ್ಥಾಪನೆಗೆ ಅನುಮೋದಿಸಿದ್ದು, ಒಡಿಶಾದಲ್ಲಿ ಸೆಮಿಕಂಡಕ್ಟರ್ ಪಾರ್ಕ್ ನಿರ್ಮಾಣ ಮಾಡಲಾಗುವುದು ಎಂದು ಹೇಳಿದರು.



ಇದೆ ವೇಳೆ ಪ್ರಧಾನಿ ಬರ್ಹಾಂಪುರ–ಉದ್ನಾ ಅಮೃತ್ ಭಾರತ್ ರೈಲಿಗೆ ಚಾಲನೆ ನೀಡಿದ್ದು, ಇದು ಗುಜರಾತ್‌ನ ಒಡಿಯಾ ಜನರಿಗೆ ಪ್ರಯೋಜನವನ್ನು ನೀಡಲಿದೆ ಎಂದರು.

**4ಜಿ ಸೇವೆ:** ಭಾರತ್ ಸಂಚಾರ್ ನಿಗಮ್ ಲಿಮಿಟೆಡ್‌ನ ಬೆಳ್ಳಿ ಮಹೋತ್ಸವದ ಸಂದರ್ಭದಲ್ಲಿ 97,500 ಕ್ಕೂ ಹೆಚ್ಚು ಮೊಬೈಲ್ 4ಜಿ ಟವರ್‌ಗಳನ್ನು ಕಾರ್ಯಾರಂಭ ಮಾಡಿದರು. ಇದರಲ್ಲಿ ಟೆಲಿಕಾಂ ಸೇವಾ ಪೂರೈಕೆದಾರರ 92,600 4ಜಿ ತಂತ್ರಜ್ಞಾನ ತಾಣಗಳು ಇದೆ. ಈ ಟವರ್‌ಗನ್ನು ಸ್ವದೇಶಿ ತಂತ್ರಜ್ಞಾನದ ಜೊತೆಯಲ್ಲಿ 37 ಸಾವಿರ ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ.

ಸ್ವದೇಶಿ 4ಜಿ ಸ್ಟಾಕ್ ಉದ್ಘಾಟನೆ ಮೂಲಕ ಭಾರತವು ಟೆಲಿಕಾಂ ಉತ್ಪಾದಿಸುವ ಮತ್ತು ತಯಾರಿಸುವ ದೇಶಗಳ ಸಾಲಿಗೆ ಸೇರಲಿದೆ. ಈಗಾಗಲೇ ಡೆನ್ಮಾರ್ಕ್, ಸ್ವೀಡನ್, ದಕ್ಷಿಣ ಕೊರಿಯಾ ಮತ್ತು ಚೀನಾ ಸ್ವದೇಶಿ ಟೆಲಿಕಾಂ ಉಪಕರಣಗಳನ್ನು ಹೊಂದಿದ್ದು, ಭಾರತ ಕೂಡ ಇದಕ್ಕೆ ಸೇರ್ಪಡನೆಗೊಳ್ಳಲಿದೆ.. ಭಾರತದ ನೆಟ್‌ವರ್ಕ್‌ಗಳು ಕ್ಲೌಡ್ ಆಧಾರಿತ, ಭವಿಷ್ಯ ಸಿದ್ಧತೆ ಮತ್ತು 5ಜಿಗೆ ಅಪ್‌ಗ್ರೇಡ್ ಮಾಡಬಹುದಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

ಡಿಜಿಟಲ್ ಇಂಡಿಯಾದ ಪ್ರಧಾನಿ ಮೋದಿಯವರ ದೃಷ್ಟಿಯಂತೆ ಈ ಸ್ವದೇಶಿ 4ಜಿ ನೆಟ್‌ವರ್ಕ್ ಡಿಜಿಟಲ್ ಇಂಡಿಯಾದ ದೃಷ್ಟಿಕೋನಕ್ಕೆ ಅನುಗುಣವಾಗಿ ಒಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ. ಡಿಜಿಟಲ್ ಅಂತರವನ್ನು ಕಡಿಮೆ ಮಾಡುತ್ತದೆ ಮತ್ತು ಗ್ರಾಮೀಣ ಸಮುದಾಯಗಳನ್ನು ಸಬಲೀಕರಣಗೊಳಿಸುತ್ತದೆ. ಇದನ್ನು ಸುಲಭವಾಗಿ ಬಿಎಸ್‌ಎನ್‌ಎಲ್ 5ಜಿಗೆ ಅಪ್‌ಗ್ರೇಡ್ ಹಾಗೂ ಅಳವಡಿಕೆ ಮಾಡಬಹುದಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಈ ಸಂಪರ್ಕ ಸೇವೆಯು ಒಡಿಶಾದ 2,472 ಸೇರಿದಂತೆ ಸಂಪರ್ಕವಿಲ್ಲದ 26,700ಕ್ಕೂ ಹೆಚ್ಚು ಹಳ್ಳಿಗಳಿಗೆ ಸಂಪರ್ಕ ಒದಗಿಸಲಿದೆ. ಇದು 20 ಲಕ್ಷ ಹೊಸ ಚಂದಾದಾರರನ್ನು ಪಡೆಯಲಿದೆ ಎಂದು ಕೂಡ ತಿಳಿಸಲಾಗಿದೆ.

## ಭೀಮಾನದಿ ಪ್ರವಾಹ ಪೀಡಿತ ಗ್ರಾಮಗಳಿಗೆ ಭೇಟಿ, ಪರಿಶೀಲನೆ

**ವಿಜಯಪುರ:** ಭೀಮಾನದಿ ಪ್ರವಾಹಕ್ಕೆ ಒಳಗಾಗಿರುವ ಸಿಂದಗಿ ಮತಕ್ಷೇತ್ರದ ವಿವಿಧ ಗ್ರಾಮಗಳಿಗೆ ಕ್ಷೇತ್ರದ ಶಾಸಕರಾದ ಅಶೋಕ ಮನಗೂಳಿ, ವಿಜಯಪುರ ಜಿಲ್ಲಾಧಿಕಾರಿ ಡಾ.ಆನಂದ ಕೆ. ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿ, ಸಂತ್ರಸ್ಥರ ಸಮಸ್ಯೆಗಳನ್ನು ಆಲಿಸಿದರು.

ಶನಿವಾರ ಭೀಮಾನದಿ ಪ್ರವಾಹ ಪೀಡಿತ ವಿವಿಧ ಗ್ರಾಮಗಳಿಗೆ ಭೇಟಿ ನೀಡಿದ ಅವರು, ಪ್ರವಾಹಕ್ಕೊಳಗಾಗಿರುವ ಪ್ರದೇಶಗಳಲ್ಲಿ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದ ಶಾಸಕರು, ಈ ಕಾರ್ಯವನ್ನು ಪ್ರಥಮಾದ್ಯತೆ ಮೇಲೆ ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿ ಪರಿಹಾರ ಕಾರ್ಯ ಕೈಗೊಳ್ಳುವಂತೆ ಅವರು ತಿಳಿಸಿದರು. ಈ ಸಂದರ್ಭದಲ್ಲಿ ವಿವಿಧ ಸಂತ್ರಸ್ಥರ ಸಮಸ್ಯೆಗಳನ್ನು ಆಲಿಸಿ, ಪರಿಹಾರಕ್ಕೆ ಭರವಸೆ ನೀಡಿದರು.

ತಾಲೂಕಿನ ದೇವರನಾವದಗಿ ಗ್ರಾಮ ಪಂಚಾಯತಿಯ ಕುಮಸಗಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಮತ್ತು ಶ್ರೀ ಕಲ್ಲಾಲಿಂಗೇಶ್ವರ ಪ್ರಾಥಮಿಕ ಶಾಲೆಯಲ್ಲಿ ಹಾಗೂ ದೇವಣಗಾವ ಪ್ರಾಥಮಿಕ ಶಾಲೆಯಲ್ಲಿ ತೆರೆಯಲಾದ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ, ಕಾಳಜಿ ಕೇಂದ್ರಗಳಲ್ಲಿ ಕಲ್ಪಿಸಿರುವ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು. ಅಲ್ಲಿನ ಸಂತ್ರಸ್ಥರೊಂದಿಗೆ ಮಾತನಾಡಿ, ಕಾಳಜಿ ಕೇಂದ್ರಗಳಲ್ಲಿ



ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ.ಯಾರು ಸಹ ಭಯ ಪಡುವ ಅವಶ್ಯಕತೆ ಇಲ್ಲ. ಜಿಲ್ಲಾಡಳಿತ ನಿಮ್ಮ ಜೊತೆಗಿದ್ದು, ಅಗತ್ಯ ಸಹಕಾರ ಒದಗಿಸುವಂತೆ ಕೋರಿ, ಸಂತ್ರಸ್ಥರಿಗೆ ಧೈರ್ಯ ತುಂಬಿದ ಜಿಲ್ಲಾಧಿಕಾರಿಗಳು, ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸನ್ನದ್ಧರಾಗಿದ್ದು, ಯಾವದೇ ಜನ ಮತ್ತು ಜಾನುವಾರಗಳ ಪ್ರಾಣ ಹಾನಿಯಾಗದಂತೆ ಎಲ್ಲಾ ರೀತಿಯ ಸಕಲ ಸುರಕ್ಷತಾ ಕ್ರಮಗಳನ್ನು ಜಿಲ್ಲಾಡಳಿತದಿಂದ ಕೈಗೊಳ್ಳಲಾಗಿದೆ. ಈವರೆಗೆ ಜಿಲ್ಲೆಯ ಆಲಮೇಲ ತಾಲೂಕಿನಲ್ಲಿ 09, ಇಂಡಿ ತಾಲೂಕಿನಲ್ಲಿ 07 ಸೇರಿದಂತೆ ಒಟ್ಟು 16 ಕಾಳಜಿ ಕೇಂದ್ರಗಳನ್ನು ತೆರೆಯಲಾಗಿದ್ದು, ಈ ಕಾಳಜಿ ಕೇಂದ್ರಗಳಲ್ಲಿ 867 ಜನರಿಗೆ ಆಶ್ರಯ ಒದಗಿಸಲಾಗಿದೆ. ಆಯಾ ಕಾಳಜಿ ಕೇಂದ್ರಗಳಿಗೆ ಓರ್ವ ನೊಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಪ್ರವಾಹ ಪರಿಸ್ಥಿತಿಯನ್ನು ಎಲ್ಲರೂ ಒಟ್ಟಾಗಿ ಸಮರ್ಥವಾಗಿ ಎದುರಿಸಲು, ಅಧಿಕಾರಿಗಳು ಸಹ ಜವಾಬ್ದಾರಿಯುತವಾಗಿ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚನೆ ನೀಡಿದರು. ಸುಮಾರು 53 ವರ್ಷದ ಹಳೆಯದಾದ ದೇವಣಗಾವ ಬ್ರಿಡ್ಜಗೆ ಭೇಟಿ ನೀಡಿ, ಈ ಬ್ರಿಡ್ಜ್ ಹಳೆಯದಾಗಿರುವದರಿಂದ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ದುರಸ್ತಿಗೆ ಸಾರ್ವಜನಿಕರು ಒತ್ತಾಯಿಸಿದ ಹಿನ್ನಲೆಯಲ್ಲಿ ಶೀಘ್ರವೇ ದುರಸ್ತಿ ಕಾರ್ಯ ಕೈಗೊಳ್ಳುವುದಾಗಿ ಶಾಸಕರು ಭರವಸೆ ನೀಡಿದರು.

ನಿರಂತರವಾಗಿ ಸುರಿದ ಮಳೆಯಿಂದಾಗಿ ಅನೇಕ ಮನೆ ಮತ್ತು ಬೆಳೆಹಾನಿ ಸಂಭವಿಸಿರುವ ಕುರಿತು ಸಾರ್ವಜನಿಕರು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಾಗ, ಕೂಡಲೇ ಬೆಳೆ ಸಮೀಕ್ಷೆ ಕಾರ್ಯ ಕೈಗೊಂಡು ಸಮೀಕ್ಷಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಈ ಸಂದರ್ಭದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಇಂಡಿ ಉಪವಿಬಾಗಾಧಿಕಾರಿ ಅನುರಾಧಾ ವಸ್ತ್ರದ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಾಮು ಜಿ ಅಗ್ನಿ, ಕರೆಪ್ಪ ಬೆಳ್ಳಿ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು, ಸಂತ್ರಸ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಸೊನ್ನ ಬ್ಯಾರೇಜಿಗೆ ಭೇಟಿ

ಸೊನ್ನ ಬ್ಯಾರೇಜಿಗೆ ಭೇಟಿ ನೀಡಿ ನೀರಿನ ಪ್ರವಾಹ ಪರಿಸ್ಥಿತಿ ಮಾಹಿತಿ ಪಡೆದುಕೊಂಡರು ಜಿಲ್ಲಾಡಳಿತದೊಂದಿಗೆ ಸತತ ಸಂಪರ್ಕದಲ್ಲಿದ್ದು ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಡಾ.ಆನಂದ ಕೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ರಿಷಿ ಆನಂದ, ಜಂಟಿ ಕೃಷಿ ನಿರ್ದೇಶಕರಾದ ಶಿವನಗೌಡ ಪಾಟೀಲ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಳೆಗೆ ಬೆಳಗಾವಿ ತತ್ತರ

### ನವಿಲು ತೀರ್ಥ ಜಲಾಶಯ ಸಂಪೂರ್ಣ ಭರ್ತಿ

### ನದಿ ಪಾತ್ರದ ಗ್ರಾಮಗಳಲ್ಲಿ ಪ್ರವಾಹದ ಭೀತಿ

**ಬೆಳಗಾವಿ:** ಬೆಳಗಾವಿ ಜಿಲ್ಲೆಯಲ್ಲಿ "ಉತ್ತರಾ ಮಳೆ" ಆರ್ಭಟಿಸುತ್ತಿದ್ದು, ಶುಕ್ರವಾರ ಮಧ್ಯಾಹ್ನದಿಂದ ನಿರಂತರವಾಗಿ ಸುರಿಯುತ್ತಿರುವ ಪರಿಣಾಮ ಜನ ಹೈರಾಣಾಗಿದ್ದಾರೆ. ಇನ್ನು ಮಲಪ್ರಭಾ, ಘಟಪ್ರಭಾ ನದಿ ಜಲಾಶಯಗಳಲ್ಲಿ ನೀರಿನ ಹರಿವು ಹೆಚ್ಚಾಗಿದೆ.

ಹೌದು, ಕಳೆದ ಒಂದು ತಿಂಗಳಿನಿಂದ ಶಾಂತವಾಗಿದ್ದ ಮಳೆರಾಯ ಮತ್ತೆ ಅಬ್ಬರಿಸಲು ಶುರು ಮಾಡಿದ್ದಾನೆ. ಪಶ್ಚಿಮಘಟ್ಟ ಪ್ರದೇಶ ಮತ್ತು ಬೆಳಗಾವಿ ನಗರ ಸೇರಿ ಜಿಲ್ಲೆಯಾದ್ಯಂತ ಸತತ ಮಳೆ ಆಗುತ್ತಿದೆ. ಈಗಾಗಲೇ ಸೋಯಾಬಿನ್ ಸೇರಿ ಮತ್ತಿತರ ಬೆಳೆಗಳು ಕೊಯ್ಲಿಗೆ ಬಂದಿದ್ದವು. ಈ ಸಂದರ್ಭದಲ್ಲೆ ಮಳೆ ಬೀಳುತ್ತಿರುವುದರಿಂದ ಕೈಗೆ ಬಂದ ತುತ್ತು ಬಾಯಿಗೆ ಬರದಂತೆ ಆಗಿದೆ. ನವಿಲು ತೀರ್ಥ ಜಲಾಶಯ ಸಂಪೂರ್ಣ ಭರ್ತಿ: ಮಲಪ್ರಭಾ ನದಿಗೆ ನೀರಿನ ಹರಿವು ಹೆಚ್ಚಾಗಿದ್ದು, ಸವದತ್ತಿ ತಾಲೂಕಿನ ಮುನವಳ್ಳಿ ಬಳಿ ಇರುವ 2079.50 ಅಡಿ ಸಾಮರ್ಥ್ಯದ ನವಿಲು ತೀರ್ಥ ಜಲಾಶಯ ಸಂಪೂರ್ಣ ಭರ್ತಿಯಾಗಿದೆ. ಜಲಾಶಯದ ಸುರಕ್ಷತೆ ದೃಷ್ಟಿಯಿಂದ ಜಲಾಶಯ ಅಧಿಕಾರಿಗಳು ಶನಿವಾರ ಮಧ್ಯಾಹ್ನದಿಂದ 5 ಸಾವಿರ ಕ್ಯೂಸೆಕ್ ನೀರು ಹೊರಗೆ ಬಿಟ್ಟಿದ್ದಾರೆ. ಇದರಿಂದ ರಾಮದುರ್ಗ, ಬಾದಾಮಿ ತಾಲೂಕಿನ ನದಿ ಪಾತ್ರದ ಗ್ರಾಮಗಳಲ್ಲಿ ಪ್ರವಾಹದ ಭೀತಿ ಉಂಟಾಗಿದೆ. ಹಾಗಾಗಿ, ಈ ಭಾಗದ ಜನರು ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳು ತಿಳಿಸಿದ್ದಾರೆ.ನಿರಂತರ ಮಳೆಗೆ ಗೋಕಾಕ ನಗರದ ರಸ್ತೆಗಳಿಗೆ ನೀರು ನುಗ್ಗಿದೆ. ಆರ್‌ಟಿಓ ಕಚೇರಿ ಬಳಿಯ ಮಾಲದಿನ್ನಿ ಕ್ರಾಸ್ ರಸ್ತೆ ಸಂಪೂರ್ಣ ಜಲಾವೃತಗೊಂಡಿದೆ. ಮೊಣಕಾಲುದ್ದ ನೀರಿನಲ್ಲಿ ಸಾಲುಗಟ್ಟಿ ಬಸ್‌ಗಳು ತೆರಳುತ್ತಿವೆ. ದೊಡ್ಡ ವಾಹನಗಳು ಮಾತ್ರ ಸಂಚರಿಸುತ್ತಿದ್ದು, ಬೈಕ್ ಸವಾರರು ಮತ್ತು ಸಾರ್ವಜನಿಕರು ಪರದಾಡುತ್ತಿದ್ದಾರೆ.

# ಶಿರಸಂಗಿ ದೇಸಾಯಿ ವಾಡೆಗೆ ಸಚಿವ ಎಂ.ಬಿ.ಪಾಟೀಲ್ ಭೇಟಿ

**ವರದಿ ಈರಣ್ಣಾ ಹುಲ್ಲೂರ**



**ಯರಗಟ್ಟಿ:** ಸಮೀಪದ ಶಿರಸಂಗಿ ಗ್ರಾಮದ ಶಿರಸಂಗಿ ಲಿಂಗರಾಜರ ದೇಸಾಯಿ ವಾಡೆಗೆ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಸಚಿವ ಎಂ. ಬಿ. ಪಾಟೀಲ ಶಿರಸಂಗಿ ತ್ಯಾಗವೀರ ಲಿಂಗರಾಜ ದೇಸಾಯಿ ಅವರ ವಾಡೆ ಸಂರಕ್ಷಿಸಿ, ಅಭಿವೃದ್ಧಿಪಡಿಸಿ, ವಿಶೇಷ ಸ್ಮಾರಕವಾಗಿಸುವ ಗುರಿ ಕರ್ನಾಟಕವನ್ನು ಶೈಕ್ಷಣಿಕವಾಗಿ ಬೆಳಗಿದ ಮಹನೀಯರ ಪೈಕಿ ಪರಮಪೂಜ್ಯ ಸಿರಸಂಗಿ ಲಿಂಗರಾಜ ದೇಸಾಯಿಯವರು ಅಗ್ರ ಸಾಲಿನಲ್ಲಿ ನಿಲ್ಲುತ್ತಾರೆ. ನಮ್ಮ ಪೂರ್ವಜರಾದ ಶ್ರೀ ಸಿರಸಂಗಿ ಲಿಂಗರಾಜರ ವ್ಯಕ್ತಿತ್ವ ದೇಶಕ್ಕೇ ಮಾದರಿಯಾಗಿದೆ.

ಲಿಂಗರಾಜ ದೇಸಾಯಿ ಅವರು ಲಿಂಗಾಯತ – ವೀರಶೈವ ಸಮಾಜದ ಸಾಮಾಜಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗಾಗಿ ಪೂಜ್ಯ ಹಾನಗಲ್ಲ ಕುಮಾರ ಸ್ವಾಮಿಗಳ ಸಾನಿಧ್ಯದಲ್ಲಿ ಅಖಿಲ ಭಾರತ ವೀರಶೈವ ಮಹಾಸಭೆಯ ಸ್ಥಾಪನೆಗೆ ನೇತೃತ್ವವಹಿಸಿ, ಅಪಾರ ಮೊತ್ತದ ದೇಣಿಗೆ ನೀಡಿದರು. ರಾಜ್ಯದಲ್ಲಿ ಅನೇಕ ಶೈಕ್ಷಣಿಕ ಸಂಸ್ಥೆಗಳ ಹುಟ್ಟಿಗೂ ಅವರು ಕಾರಣಕರ್ತರು.
ತಮ್ಮ ಸಂಸ್ಥಾನದ ಅಪಾರ ಪ್ರಮಾಣದ ಆಸ್ತಿಯನ್ನು ಸಮಾಜ ಸೇವೆಗೆ ಧಾರೆ ಎರೆದು ತ್ಯಾಗವೀರ ಎನಿಸಿಕೊಂಡಿದ್ದು ಇತಿಹಾಸವಾಗಿದೆ.

ಈ ದಿನ ಬೆಳಗಾವಿ ಜಿಲ್ಲೆಯಲ್ಲಿನ ಸಿರಸಂಗಿ ವಾಡೆಗೆ ತೆರಳಿ, ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದೆ. ಅವರ ಕಾಲದ ಐತಿಹಾಸಿಕ ಮಹತ್ವದ ಭಾವಚಿತ್ರಗಳನ್ನು, ಪೂಜ್ಯ ಸಿರಸಂಗಿ ಲಿಂಗರಾಜ ದೇಸಾಯಿ ಅವರಿಂದ ನಿರ್ಮಿತವಾಗಿರುವ ಕೋಟೆ ಕೊತ್ತಲಗಳನ್ನು, ಧರ್ಮ ಛತ್ರಗಳನ್ನು ವೀಕ್ಷಿಸಿದೆ.

ರಾಜ್ಯದ ಭವ್ಯ ಇತಿಹಾಸದ ಅವಿಭಾಜ್ಯ ಭಾಗವಾಗಿರುವ ಲಿಂಗರಾಜ ದೇಸಾಯಿ ಅವರ ವಾಡೆಯನ್ನು ಸಂರಕ್ಷಿಸಿ, ಅಭಿವೃದ್ಧಿಪಡಿಸಿ, ವಿಶೇಷ ಸ್ಮಾರಕವನ್ನಾಗಿ ರೂಪಿಸಿ, ಮುಂದಿನ ಪೀಳಿಗೆಗೂ ಅವರ ಮಾದರಿ ಕಾರ್ಯಗಳನ್ನು ಪರಿಚಯಿಸುವುದು ನಮ್ಮ ಘನ ಉದ್ದೇಶ. ಈ ಸಂಬಂಧ ಅಲ್ಲಿನ ಅಧಿಕಾರಿಗಳಿಗೆ ಸೂಕ್ತ ಸಲಹೆ ಮತ್ತು ಸೂಚನೆಗಳನ್ನು ನೀಡಿದ್ದೇನೆ. ಜೊತೆಗೆ ಪುರಾತತ್ವ ಶಾಸ್ತ್ರಜ್ಞರ ಮಾರ್ಗದರ್ಶನವನ್ನೂ ಪಡೆದುಕೊಳ್ಳಲಾಗುವುದು. ಸಂರಕ್ಷಣೆ ಮತ್ತು ಅಭಿವೃದ್ಧಿಯನ್ನು ಸಾಧಿಸುವ ಮೂಲಕ ಸಿರಸಂಗಿ ವಾಡೆ ರಾಜ್ಯದ ಐತಿಹಾಸಿಕ ಹೆಮ್ಮೆ ಹಾಗೂ ಸಾಂಸ್ಕೃತಿಕ ಆಸ್ತಿಯಾಗಿಸುತ್ತೇವೆ ಎಂದು ಹೇಳಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಹೋನಕೇರಿ, ತಹಶೀಲ್ದಾರ ಮಲ್ಲಿಕಾರ್ಜುನ ಹೆಗನ್ನವರ, ಅಶ್ವಥ್ ವೈದ್ಯ, ಸುರೇಶ ಬಡಗಿಗೌಡರ, ಮಹಾರಾಜ ಕಣವಿ, ಮಲ್ಲು ಜಕಾತಿ, ಬಿ. ಎಸ್. ಪಾಟೀಲ, ಚಂದ್ರರಡ್ಡಿ ಲಿಂಗರಡ್ಡಿ, ಶಿವಪ್ಪ ಮಾಸ್ತಿ, ಸಿದ್ದು ಪಟ್ಟೇದ, ಗದಿಗೆಪ್ಪ ಶಿರಸಂಗಿ, ಗುಡದೆಪ್ಪ ಕುರಡನ್ನವರ ಸೇರಿದಂತೆ ಅನೇಕರು ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

ಸವದತ್ತಿ ಮಾರ್ಗವಾಗಿ ಶಿರಸಂಗಿ ಗ್ರಾಮದ ಶ್ರೀ ಕಾಳಿಕಾ ದೇವಿ ದೇವಸ್ಥಾನಕ್ಕೆ ಬೇಟಿ ನೀಡಿ ದೇವಿಯ ಆಶೀರ್ವಾದ ಪಡೆದುಕೊಂಡರು. ದೇವಸ್ಥಾನದ ಅಭಿವೃದ್ಧಿ ಕೆಲಸಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಬಾಬಾಬುಡನಗಿರಿ ಹಾಗೂ ರಾಮಮಂದಿರಕ್ಕೆ ಬೇಟಿ ನೀಡಿದರು. ಟ್ರಸ್ಟ್ ನ ಆಸ್ತಿಗಳ ಕುರಿತು ಮಾಹಿತಿ ಪಡೆದುಕೊಂಡರು. ಅದರ ಪಕ್ಕದಲ್ಲಿರುವ ಹೊಂಡವನ್ನು ಅಭಿವೃದ್ಧಿ ಪಡಿಸುವ ಕುರಿತು ಚರ್ಚಿಸಿದರು.

ಲಿಂಗರಾಜ ದೇಸಾಯಿಯವರ ಸ್ಮಾರಕ ಮತ್ತು ವಾಡೆಗಳಿರುವ ಸ್ಥಳಕ್ಕೆ ಬೇಟಿ ನೀಡಿದರು. ವಾಡೆಯನ್ನು ನವೀಕರಿಸುವ ಕುರಿತು ಮಾಹಿತಿ ಪಡೆದುಕೊಂಡರು. ಸದ್ಯಯ ವಾಡೆಯನ್ನು ಸಿಮೆಂಟನಿಂದ ರಿಸ್ಟೋರ್ ಮಾಡುವ ಕೆಲಸವನ್ನು ತಕ್ಷಣವೇ ಸ್ಥಗಿತಗೊಳಿಸಲು ಸೂಚನೆ ನೀಡಿದರು. ಲಿಂಗರಾಜ ದೇಸಾಯಿಯವರ ವಾಡೆಯನ್ನು ಅದರ ಮೂಲ ಸಂರಚಣೆಗೆ ದಕ್ಕೆಯಾಗದಂತೆ

ಅಭಿವೃದ್ಧಿ ಮಾಡುವುದಾಗಿ ತಿಳಿಸಿದರು. ಇದಕ್ಕಾಗಿ ಹೈದರಾಬಾದ ಮೂಲದ ಆರ್ಕಿಟೆಕ್ಕ ರಾದಂತಹ ಅನುರಾಧರವರ ಜೊತೆಗೆ ದೂರವಾಣಿಯ ಮೂಲಕ ಮಾತನಾಡಿದರು. ಅವರು ಅಕ್ಟೋಬರ 07 ಅಥವಾ ಅಕ್ಟೋಬರ 08 ಕ್ಕೆ ಬಂದು ವಾಡೆಯನ್ನು ಪರಿಶೀಲನ ಮಾಡುವುದಾಗಿ ತಿಳಿಸಿದರು. ವಾಡೆಯ ಹಳೆಯ ಪೋಟೋಗಳನ್ನು ಸಚಿವರ ಕಾರ್ಯಾಲಯಕ್ಕೆ ಕಳುಹಿಸಲು ಸಿಬ್ಬಂದಿಗಳಿಗೆ ಸೂಚನೆ ನೀಡಿದರು. ಅಲ್ಲಿಯವರೆಗೆ ಸದ್ಯ ನಡೆಯುತ್ತಿರುವಂತಹ ನವೀಕರಣ ಕಾರ್ಯವನ್ನು ತಕ್ಷಣವೇ ಸ್ಥಗಿತಗೊಳಿಸಲು ತಿಳಿಸಿದರು. ಲಿಂಗರಾಜ ದೇಸಾಯಿ ಟ್ರಸ್ಟ್ ಹೆಸರಿನಲ್ಲಿರುವ ಆಸ್ತಿಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಎಲ್ಲ ಆಸ್ತಿಗಳ ಸ್ಯಾಟಲೈಟ ಇಮೇಜಗಳ ಮೂಲಕ ಸರ್ವೇ ಮಾಡಿಸಿ ಗಡಿ ಗುರುತು ಮಾಡಲು ಸೂಚನೆ ನೀಡಿದರು.

> ವಾಡೆಯ ಹತ್ತಿರದಲ್ಲಿ ಟ್ರಸ್ಟ ಆಸ್ತಿಯಲ್ಲಿ ರೂ 50 ಲಕ್ಷ ಅನುದಾನದಲ್ಲಿ ನಿರ್ಮಿತಿ ಕೇಂದ್ರದವರು ಮಾಡಿರುವ ಕಲ್ಯಾಣ ಮಂಟಪದ ಕುರಿತು ಸ್ಥಳೀಯರಿಂದ ಮಾಹಿತಿ ಪಡೆದುಕೊಂಡರು. ಲಿಂಗರಾಜ ದೇಸಾಯಿ ಟ್ರಸ್ಟ್‌ಗೆ ಸಂಬಂಧಿಸಿದ 34 ಗುಂಟೆಯ ಆಸ್ತಿಯಲ್ಲಿ ಬಂಡಿವಡ್ಡರ ಹಾಗೂ ಇತರರು ಮನೆ ನಿರ್ಮಿಸಿಕೊಂಡಿರುವ ಕುರಿತು ಸಿಬ್ಬಂದಿಗಳಿಂದ ಮಾಹಿತಿ ಪಡೆದುಕೊಂಡರು. ಶಿರಸಂಗಿ ಗ್ರಾಮದ ಸ್ಥಳೀಯರಿಂದ ಅವರ ಸಮಸ್ಯೆ ಹಾಗೂ ಅವಹಾಲುಗಳನ್ನು ಸ್ವೀಕರಿಸಿದರು. ಸವದತ್ತಿ ಕೋಟೆಯ ಅಭಿವೃದ್ಧಿ ಪಡಿಸುವ ಕುರಿತು ಸ್ಥಳಿಯರು ಮಾನ್ಯ ಸಚಿವರ ಗಮನಕ್ಕೆ ತಂದರು.
>
> **ಮಲ್ಲಿಕಾರ್ಜುನ ಹೆಗನ್ನವರ,**
> **ತಹಶೀಲ್ದಾರ ಸವದತ್ತಿ**



## ಗ್ರೀನ್ ಎನರ್ಜಿ ಅವಾರ್ಡ್

**ಮಹಾಲಿಂಗಪುರ:** ಸಮೀಪದ ಸಮೀರವಾಡಿಯ ಗೋದಾವರಿ ಬಯೋರಿಫೈನರೀಜ್ ಸಕ್ಕರೆ ಕಾರ್ಖಾನೆಗೆ ಗ್ರೀನ್ ಎನರ್ಜಿ ವಾರ್ಡ್ ಲಭಿಸಿದೆ. ಬಯೋ ಎನರ್ಜಿ (ಜೈವಿಕ ಶಕ್ತಿ) ಉತ್ಪಾದನೆಯಲ್ಲಿ ಮಾಡಿದ ಸಾಧನೆ ಗುರುತಿಸಿ ಇಂಡಿಯನ್ ಫೆಡರೇಶನ್ ಆಫ್ ಗ್ರೀನ್ ಎನರ್ಜಿ ಕೊಡಮಾಡುವ 5ನೇ ಗ್ರೀನ್ ಎನರ್ಜಿ ಪ್ರಶಸ್ತಿಗೆ ಸಮೀರವಾಡಿಯ ಸೋಮೈಯಾ ಸಕ್ಕರೆ ಕಾರ್ಖಾನೆ ಭಾಜನವಾಗಿದೆ. ಕಾರ್ಖಾನೆಯ ಕಶರ್ಯನಿರ್ವಾಹಕ ನಿರ್ದೇಶಕ ಬಾಲಚಂದ್ರ ಭಕ್ಷಿ ಅವರಿಗೆ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಪ್ರಶಸ್ತಿ ನೀಡಿ ಗೌರವಿಸಿದರು. ಕಾರ್ಖಾನೆಯ ಡಿಜಿಎಂ ಧೈರ್ಯಶಾಲಿ ಪಾಟೀಲ, ಪ್ರಶಾಂತ ಉತೇಕರ ಇದ್ದರು.



## ನವದುರ್ಗೆಯರ ಅವತಾರಗಳ ಅನಾವರಣ

**ಮಹಾಲಿಂಗಪುರ:** ಸ್ಥಳೀಯ ಬನಶಂಕರಿದೇವಿ ಸಾಂಸ್ಕೃತಿಕ ಉತ್ಸವ ಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬನಶಂಕರಿ ದೇವಸ್ಥಾನ ಆಡಳಿತ ಮಂಡಳಿ ಹಾಗೂ ದೇವಾಘ ಹಟಗಾರ ಯುವಕ ಮಂಡಳಿ ಆಶ್ರಯದಲ್ಲಿ ನಡೆಯುತ್ತಿರುವ ದಸರಾ ಸಾಂಸ್ಕೃತಿಕ ಉತ್ಸವ ಭಕ್ತರನ್ನು ರಂಜಿಸುತ್ತಿದೆ.

5ನೇ ದಿನ ಹೊಸಪೇಟೆಯ ನಾಟ್ಯನಾದ ಕಲಾ ಕೇಂದ್ರ ತಂಡದಿಂದ ನಡೆದ ನಾಟ್ಯ ಸಂಗೀತ ಕಾರ್ಯಕ್ರಮ ಮನಸೂರೆಗೊಂಡಿತು. ನವರಸಗಳನ್ನು ತುಂಬಿದ ಭಾವಾಭಿನಯದೊಂದಿಗೆ ನರ್ತಿಸಿದ ಕಲಾವಿದರು ನವದುರ್ಗೆಯರ ಅವತಾರಗಳ ಅನಾವರಣಗೊಳಿಸಿದರು. ಹಿಂದಿನ ದಿನ ಉಡುಪಿಯ ಪ್ರಖರ ವಾಗ್ಮಿ ಪ್ರಕಾಶ ಮಲ್ಪೆ ಮಾತನಾಡಿ ಪುರಾಣದ ನವದುರ್ಗೆಯರ ಔಚಿತ್ಯತೆ ಹಾಗೂ ಸಮಾಜದಲ್ಲಿ ಮಹಿಳೆಯರ ಪಾತ್ರ ಮತ್ತು ಮಹತ್ವದ ಬಗ್ಗೆ ಮಾತಿನ ಮೂಲಕ ವ್ಯಕ್ತಪಡಿಸಿದ್ದರು. ಮರುದಿನ ನಾಟ್ಯನಾದ ಕಲಾ ತಂಡದವರು ನಾಟ್ಯದ ಮೂಲಕ ನವದುರ್ಗೆಯರ ರೂಪ ದರ್ಶನ ಮಾಡಿಸಿದರು. ಉತ್ಸವ ಸಮಿತಿಯಿಂದ ಕಲಾವಿದರನ್ನು ಸಾಮೂಹಿಕವಾಗಿ ಸನ್ಮಾನಿಸಲಾಯಿತು. ನಂತರ ಸಹಸ್ರಾರು ಭಕ್ತರು ಸಿಹಿ ಭೋಜನ ಪ್ರಸಾದ ಸವಿದರು.

## ಹೊಸ ಜಿಎಸ್‌ಟಿ ನೀತಿ ಎಲ್ಲರಿಗೂ ವರದಾನ

**ಗೋಕಾಕ:** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಹೊಸ ಜಿಎಸ್ಟಿ ನೀತಿಯು ಬಡ ಜನರಿಗೆ ತುಂಬಾ ವರದಾನವಾಗಿದೆ ಎಂದು ಬಿಜೆಪಿ ಒಬಿಸಿ ಮೋರ್ಚಾದ ರಾಷ್ಟ್ರೀಯ ಕಾರ್ಯಕಾರಣಿ ಸದಸ್ಯರಾದ ನ್ಯಾಯವಾದಿ ಲಕ್ಷ್ಮಣ ತಪಸಿ ಅವರು ಅಭಿಪ್ರಾಯಪಟ್ಟಿದ್ದಾರೆ.



ಪತ್ರಿಕಾ ಹೇಳಿಕೆ ಮೂಲಕ ಅಭಿಪ್ರಾಯ ತಿಳಿಸಿರುವ ಅವರು, ಕೇಂದ್ರ ಸರ್ಕಾರದ ಹೊಸ ಜಿಎಸ್ಟಿ ನೀತಿಯನ್ನು ಸರಳೀಕರಿಸಿ ಒಂದು ದೇಶ ಒಂದು ತೆರಿಗೆ ಎನ್ನುವ ಸಿದ್ಧಾಂತದ ಜೊತೆಗೆ ಹೊಸ ಜಿಎಸ್‌ಟಿ ನೀತಿಯನ್ನು ಜಾರಿಗೆ ತಂದು ಸರಕು ಮತ್ತು ಸೇವಾ ಶುಲ್ಕವನ್ನು ಭಾರಿ ಪ್ರಮಾಣದಲ್ಲಿ ಇಳಿಸಿರುವ ಸಣ್ಣ ಮತ್ತು ಮಧ್ಯಮ ವರ್ಗದ ಜನರಿಗೆ ವರದಾನವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವ ಸಚಿವ ಸಂಪುಟದ ಈ ಹೊಸ ಸರಕು ಮತ್ತು ಸೇವಾ ಶುಲ್ಕನೀತಿಯನ್ನು ಸ್ವಾಗತಿಸುವುದಾಗಿ ಹೇಳಿರುವ ಅವರು ದಸರಾ ಪ್ರಾರಂಭದ ದಿನ ಜಾರಿಗೆ ತರಲಾದ ಜಿಎಸ್‌ಟಿ ಹೊಸ ನೀತಿಯಲ್ಲಿ ವಿಮೆ ಪಾವತಿ, ಲೈಫ್ ಸೇವೆ, ಕ್ಯಾನ್ಸರ್ ಔಷಧಿ, ಹಾಲು, ಹಾಲಿನ ಉತ್ಪನ್ನ, ರೊಟ್ಟಿ ,ಚಪಾತಿ, ಪರೋಟ ಈ ತರಹದ ಮುಂತಾದ ವಸ್ತುಗಳ ಮೇಲೆ ಮೊದಲಿದ್ದ ಶುಲ್ಕವನ್ನು ರದ್ದುಗೊಳಿಸಿರುವುದು ಹಾಗೂ ಕನ್ನಡಕ, ಶಾಂಪು, ಹೇರ್ ಆಯಿಲ್ ಸೇರಿದಂತೆ ಇನ್ನಿತರ ಅವಶ್ಯಕತೆಗಳ ಮೇಲೆ ಕೇವಲ ಶೇಕಡ 5% ಕೆ ಇಳಿಸಿರುವುದು ಬಡವರಿಗೆ, ರೈತರಿಗೆ, ಕೂಲಿಕಾರರಿಗೆ, ಸಣ್ಣ ವ್ಯಾಪಾರಸ್ಥರಿಗೆ ಹಾಗೂ ಮಾಧ್ಯಮ ವರ್ಗದವರನ್ನು ಒಳಗೊಂಡು ಎಲ್ಲ ವರ್ಗದವರಿಗೂ ಕೂಡ ಅನುಕೂಲವಾಗಿದೆ ಎಂದು ಲಕ್ಷ್ಮಣ ತಪಸಿ ಹೇಳಿದ್ದಾರೆ.

## 2ದಿನಗಳ ಪುನಶ್ಚೇತನ ಕಾರ್ಯಾಗಾರ

ಧಾರವಾಡ: ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರ. ಕರ್ನಾಟಕ ಉಚ್ಚ ನ್ಯಾಯಲಯ ಧಾರವಾಡ ಪೀಠದ ಕಾನೂನು ಸೇವಾ ಸಮಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಧಾರವಾಡ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಉಚ್ಚ ನ್ಯಾಯಲಯದ ಧಾರವಾಡ ಪೀಠ, ಧಾರವಾಡ ಮತ್ತು ಗದಗ ಜಿಲ್ಲೆಯ ಮಧ್ಯಸ್ಥಿಕೆಗಾರರಿಗೆ 02 ದಿನಗಳ ಪುನಶ್ಚೇತನ ಕಾರ್ಯಾಗಾರವನ್ನು ಸೆಪ್ಟೆಂಬರ 27, 2025 ರಂದು ಧಾರವಾಡದ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಆಯೋಜಿಸಲಾಗುತ್ತು.

ಕಾರ್ಯಾಗಾರದ ಉದ್ಘಾಟನೆಯನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರಾದ ಬಿ. ಎಸ್. ಭಾರತಿ ಅವರು ನೇರವೇರಿಸಿದರು ಕಾರ್ಯಗಾರವನ್ನು ಉದ್ದೇಶಿಸಿ ಮಾತನಾಡುತ್ತ 90 ದಿನಗಳು ದೇಶಕ್ಕಾಗಿ ಎಂಬ ಘೋಷವಕದೊಂದಿಗೆ ಮಧ್ಯಸ್ಥಿಕೆ ಸಂದಾನ ಪ್ರಕ್ರಿಯೆ ದೇಶದ ಎಲ್ಲಾ ನ್ಯಾಯಾಲಯಗಳಲ್ಲಿ ನಡೆಯುತ್ತಿದೆ ಅದರಲ್ಲಿ ಉತ್ಸಾಹದಿಂದ ಭಾಗವಹಿಸಿ ಯಶಸ್ವಿಗೊಳಿಸಲು ಕರೆ ನೀಡಿದರು.

ಮುಂದುವರಿದು ಮಧ್ಯಸ್ಥಿಕೆ ನ್ಯಾಯ ದಾನ ವ್ಯವಸ್ಥೆಯಲ್ಲಿ ತುಂಬಾ ಪ್ರಮುಖ ಪಾತ್ರ ವಹಿಸಿದೆ ಆದ್ದರಿಂದ ಮಧ್ಯಸ್ಥಿಕೆಗಾರರು ಪಕ್ಷಗಾರರೊಂದಿಗೆ ಪ್ರೀತಿ, ವಿಶ್ವಾಸ ಹಾಗೂ ತಾಳ್ಮೆಯಿಂದ ವಸ್ತುಸ್ಥಿತಿ ತಿಳಿದುಕೊಂಡು ಅವರಿಗೆ ತಿಳಿ ಹೇಳಿ ಪಕ್ಷಗಾರರು ತಮ್ಮ ಪ್ರಕರಣಗಳಲೀ ರಾಜಿ ಸಂಧಾನ ಮಾಡಿಸುವುದು ತುಂಬಾ ಅವಶ್ಯಕವಾಗಿದೆ ಎಂದು ತಿಳಿಸಿದರು.

ತರಬೇತಿಯಲ್ಲಿ ಹೆಚ್ಚಿನ ಅನುಭವ ಪಡೆದುಕೊಳ್ಳಲು ಮಧ್ಯಸ್ಥಿತಿಗಾರರಿಗೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಪರಶುರಾಮ ಎಸ್. ದೊಡ್ಡಮನಿ, ಕರ್ನಾಟಕ ವಕೀಲರ ಪರಿಷತ್‌ನ ಸದಸ್ಯರಾದ ಆನಂದಕುಮಾರ ಎ. ಮಗದುಮ ಹಾಗೂ ವಿ. ಡಿ. ಕಾಮರಡ್ಡಿ, ಅಶೋಕ ಏಣಗಿ, ಧಾರವಾಡ ವಕೀಲರ ಸಂಘದ ಅಧ್ಯಕ್ಷ ಲಕ್ಷ್ಮೀಶ ರಾವ್, ಬೆಂಗಳೂರು ಮಧ್ಯಸ್ಥಿಕೆ ತರಬೇತಿದಾರರಾದ ಬೀನಾ ದೇವರಾಜ ಅವರು ಭಾಗವಹಿಸಿದ್ದರು.

## ನವರಾತ್ರಿ: ಬೂದು ಬಣ್ಣ ದಿನಾಚರಣೆ



**ಬೆಳಗಾವಿ:** ನವರಾತ್ರಿಯ ಆರನೇ ದಿನದಂದು (ಷಷ್ಠಿ) ಬೂದು ಬಣ್ಣದ ವಸ್ತ್ರವನ್ನು ಧರಿಸುವುದು ಶುಭವೆಂದು ಪರಿಗಣಿಸಲಾಗಿದೆ.

ಬೂದಿ ಬಣ್ಣದ ಮಹತ್ವ ಆರನೇ ದಿನದಂದು ದುರ್ಗಾ ದೇವಿಯ ಕಾತ್ಯಾಯಿನಿ ರೂಪವನ್ನು ಪೂಜಿಸಲಾಗುತ್ತದೆ.

**ಸಂಕೇತ:** ಬೂದು ಬಣ್ಣವು ಸಮತೋಲನ, ಸಂಯಮ ಮತ್ತು ವಿವೇಕವನ್ನು ಪ್ರತಿನಿಧಿಸುತ್ತದೆ. ಇದು ಕಪ್ಪು ಮತ್ತು ಬಿಳಿ ಬಣ್ಣಗಳ ಮಧ್ಯದ ಬಣ್ಣವಾಗಿದ್ದು, ಜೀವನದಲ್ಲಿ ನಿಷ್ಪಕ್ಷಪಾತ ಮತ್ತು ತಟಸ್ಥ ಮನಸ್ಸಿನ ಮಹತ್ವವನ್ನು ಸೂಚಿಸುತ್ತದೆ.

**ಆಧ್ಯಾತ್ಮಿಕ ಅರ್ಥ:** ಬೂದು ಬಣ್ಣವು ಜೀವನದಲ್ಲಿ ಎದುರಾಗುವ ಸವಾಲುಗಳು ಮತ್ತು ಕಷ್ಟಗಳಿಂದ ಮೇಲೆದ್ದು ಬರಲು ಅಗತ್ಯವಾದ ಸ್ಥಿರತೆ ಮತ್ತು ಸಮಚಿತ್ತತೆಯನ್ನು ತರುತ್ತದೆ ಎಂದು ನಂಬಲಾಗಿದೆ. ಕಾತ್ಯಾಯಿನಿ ದೇವಿಯು ದುಷ್ಟಶಕ್ತಿಯನ್ನು ನಾಶ ಮಾಡುವ ಯೋಧೆಯ ರೂಪವಾಗಿದ್ದು, ಈ ಬೂದು ಬಣ್ಣವು ದುಷ್ಟಶಕ್ತಿಯ ವಿನಾಶ ಮತ್ತು ಜೀವನದಲ್ಲಿ ನೆಲೆಗೊಂಡಿರುವಿಕೆಯನ್ನು ಸಂಕೇತಿಸುತ್ತದೆ.

ವಿವಿಧ ಪ್ರದೇಶಗಳಲ್ಲಿ ದಿನಕ್ಕೆ ಅನುಗುಣವಾಗಿ ಬಣ್ಣಗಳಲ್ಲಿ ಸ್ವಲ್ಪ ವ್ಯತ್ಯಾಸವಿರಬಹುದು, ಆದರೆ ಸಾಂಪ್ರದಾಯಿಕವಾಗಿ ಆರನೇ ದಿನಕ್ಕೆ ಬೂದು ಬಣ್ಣವನ್ನು ಪ್ರಮುಖವಾಗಿ ಸೂಚಿಸಲಾಗುತ್ತದೆ. ಈ ಸದರ್ಭದಲ್ಲಿ ಲಕ್ಷ್ಮಿ ಸಂಗಡಿಗರು ಮಹಾಂತೇಶ್ ನಗರ ಬೆಳಗಾವಿಯ ಬೂದು ಬಣ್ಣದಲ್ಲಿ ಕಂಗೊಳಿಸಿದ ನಿಮಿತ್ಯ ಇಲ್ಲಿನ ಮಹಿಳೆಯರು ಬೂದು ಬಣ್ಣದಲ್ಲಿ ಸೀರೆ ಬಟ್ಟೆ ಧರಿಸಿ ಬೂದು ದಿನವನ್ನು ಆಚರಣೆ ಮಾಡಿ ಸಂಭ್ರಮಿಸಿದರು.

## ಶಿಕ್ಷಣದಲ್ಲಿ ರಂಗಭೂಮಿಯ ಮಹತ್ವತೆ ಕುರಿತು ಕಾರ್ಯಾಗಾರ


**ವರದಿ ಅಡಿವೇಶ ಜೋಳದ**

**ಬೆಳಗಾವಿ:** ಮಹಾಂತೇಶ ನಗರ ರಹವಾಸಿಗಳ ಸಂಘದ ಶಿಕ್ಷಣ ಮಹಾವಿದ್ಯಾಲಯದ ಕನ್ನಡ ಸಂಘ ಹಾಗೂ ಐಕ್ಯೂಎಸಿ ಅಡಿಯಲ್ಲಿ ಪಠ್ಯದಲ್ಲಿ ರಂಗ ಚಟುವಟಿಕೆಗಳು ಶಿಕ್ಷಣದಲ್ಲಿ ರಂಗಭೂಮಿಯ ಮಹತ್ವತೆ ಎಂಬ ವಿಷಯದ ಕುರಿತು ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಹಿರಿಯ ರಂಗಕರ್ಮಿ, ನಟ, ನಿರ್ದೇಶಕ ಹಾಗೂ ನಾಟಕ ರಚನಾಕಾರ ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಬಾಬಾಸಾಹೇಬ ಕಾಂಬಳೆ ಅವರು ಸ್ವಾತಂತ್ರ್ಯ ಚಳವಳಿಗಳಿಗೆ ರಂಗಭೂಮಿ ಅಪಾರ ಕೊಡುಗೆಯನ್ನು ನೀಡಿದೆ. ರಂಗಭೂಮಿಯಲ್ಲಿ ಸತ್ಯದ ಹುಡುಕಾಟ ನಡೆಯುತ್ತಿರುತ್ತದೆ.

ಈ ಹುಡುಕಾಟದ ಮಾರ್ಗವೇ ಶಿಕ್ಷಣ. ಶಿಕ್ಷಣ ಮತ್ತು ರಂಗಭೂಮಿ ಮೂಲಕ ಕ್ರಾಂತಿ ಮಾಡಿ ಪರಿಸರ ಸಂರಕ್ಷಣೆ ಮಾಡಲು ಸಾಧ್ಯವಿದೆ. ನಶಿಸಿ ಹೋಗುತ್ತಿರುವ ರಂಗಭೂಮಿ ಯ ಉಳಿಯುವಿಕೆ ಶಿಕ್ಷಣ ರಂಗದಲ್ಲಿದೆ.

ರಂಗಕಲೆ ಎನ್ನುವುದು ಕೇವಲ ವೇದಿಕೆ ಮೇಲೆ ಸಂಭಾಷಣೆ ಹೇಳುವುದಲ್ಲ. ಅದು ಜೀವನದ ಎಲ್ಲ ಕ್ಷೇತ್ರದಲ್ಲಿ ಆವರಿಸಿರುತ್ತದೆ. ಶಿಕ್ಷಕರು ಪ್ರಪಂಚದ ಎಲ್ಲ ಸ್ತರದ ವ್ಯಕ್ತಿಗಳೊಡನೆ ಸಂವಾದಿಸಬೇಕು, ಆಳವಾದ ಅಧ್ಯಯನ ವ್ಯಾಪಕವಾದ ಸಂಚಾರ ಮಾಡ ಬೇಕು . ಶಿಕ್ಷಣದ ಮೂಲ ತತ್ವ ಗಳನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸುವ




ಅದ್ಭುತ ಶಕ್ತಿ ರಂಗಭೂಮಿಗೆ ಇದೆ. ರಂಗಭೂಮಿ ಶಿಕ್ಷಕರ ನಿಜವಾದ ಬದುಕಾಗಿದೆ.

ರಂಗಭೂಮಿ ನಿಡುವ ಅಪಾರವಾದ ಸಾಹಿತ್ಯ ಹಾಗೂ ಅನುಭವವನ್ನು ಸ್ವೀಕರಿಸಿ ಒಬ್ಬ ಪರಿಪೂರ್ಣ ಶಿಕ್ಷಕರಾಗಬೇಕೆಂದು ಹೇಳಿದರು. ಶಿಕ್ಷಕರಲ್ಲಿ ಅಂತರ್ಗತವಾಗಿರುವ ಕಲಾತ್ಮಕವಾಗಿರುವ ಪ್ರತಿಭೆಯನ್ನು ಪ್ರದರ್ಶಿಸದೇ ಇದ್ದರೆ ಅವರ ಜೀವನ ಕಾರ್ಯ ನಿರರ್ಥಕವಾಗುತ್ತದೆಂದು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ, ರಂಗಕರ್ಮಿ ಹಾಗೂ ಲೇಖಕಿ ಡಾ.ನಿರ್ಮಲಾ ಜಿ. ಬಟ್ಟಲ ಅವರು, ಬಾಬಾ ಸಾಹೇಬ ಕಾಂಬಳೆ ಅವರ ಜೀವನ ಹಾಗೂ ಸಾಧನೆಗಳನ್ನು ಮುಕ್ತವಾಗಿ ಪ್ರಶಂಸಿಸಿದರು. ನಮ್ಮ ಅಂತರಂಗ ಹಾಗೂ ಬಹಿರಂಗ ಪರಿಶುದ್ಧಗೊಳ್ಳಬೇಕಾದರೆ ರಂಗಭೂಮಿಯ ಜ್ಞಾನ ಅವಶ್ಯಕ. ಶಿಕ್ಷಕರಲ್ಲಿ ಭಾಷೆ ಹಾಗೂ ಭಾವ ಪ್ರಕಾಶಿಕೆ ಸುಂದರಗೊಳ್ಳಬೇಕಾದರೆ ಶಿಕ್ಷಣದಲ್ಲಿ ರಂಗಭೂಮಿ ಮಹತ್ವ ಹೆಚ್ಚಾಗಿದೆಂದು ಹೇಳಿದರು.

ಬಾಬಾಸಾಹೇಬ ಕಾಂಬಳೆ ಅವರನ್ನು ಮಹಾವಿದ್ಯಾಲಯದ ಪರವಾಗಿ ಸನ್ಮಾನಿಸಲಾಯಿತು. ಸಂಜೆಯವರೆಗೆ ಡಾ.ನಿರ್ಮಲಾ ಬಟ್ಟಲ ರವರ ನೇತೃತ್ವದಲ್ಲಿ ರಂಗಭೂಮಿ ಕುರಿತು ಕಾರ್ಯಾಗಾರ ನಡೆಯಿತು.

ಪ್ರಶಿಕ್ಷಣಾರ್ಥಿ ಮುಸ್ಕಾನ ಲಾಡನ್ನವರು ಪ್ರಾರ್ಥಿಸಿದರು, ಡಾ.ಎಸ್.ವಿ.ವಾಲಿಶೆಟ್ಟಿ ಸ್ವಾಗತಿಸಿ ಪರಿಚಯಿಸಿದರು. ಪ್ರೊ.ಮಂಜುನಾಥ ಕಲಾಲ ನಿರೂಪಿಸಿದರು. ಪ್ರೊ.ಸೋನಲ್ ಚಿನಿವಾಲ, ಡಾ. ಗೀತಾ ದಯಣ್ಣವರ, ಪ್ರೊ. ಸುನಿಲ ಪಾಣಿ, ಪ್ರೊ.ಮಲ್ಲಿಕಾರ್ಜುನ ಜಮಖಂಡಿ ಹಾಗೂ ದ್ವಿತೀಯ, ನಾಲ್ಕನೇ ಸೆಮಿಸ್ಟರ್ ಹಾಗೂ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಎಂ.ಇಡಿ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ಸಾರ್ವಜನಿಕರಿಗೆ ಅವಕಾಶ

**ಧಾರವಾಡ:** ಧಾರವಾಡ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಸಲಾಗುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದಲ್ಲಿ ಸೆಲ್ಪ ಡಿಕ್ಲೇರೇಶನ್ ಮೂಲಕ ಸಾರ್ವಜನಿಕರು ಸಮೀಕ್ಷೆಯ ವೆಬ್ ಸೈಟ್ https:// scbcselfde claratioin.karnataka. gov.in/ ಕ್ಲಿಕ್ ಮಾಡುವುದರ ಮುಖಾಂತರ ಸಮೀಕ್ಷೆಯಲ್ಲಿ ಭಾಗವಹಿಸಲು ಆಯೋಗ ಅವಕಾಶ ಮೀಡಿದೆ.
ಸಾರ್ವಜನಿಕರು ವೆಬ್ ಸೈಟ್ ಮೂಲಕ ಭಾಗವಹಿಸಿ, ಸ್ವಯಂ ಆಗಿ ಮಾಹಿತಿ ಭರ್ತಿ ಮಾಡಬಹುದು. ಇದರಿಂದ ಸಮೀಕ್ಷಾದಾರರ ಸಮಯ ಮತ್ತು ಶ್ರಮವನ್ನು ಉಳಿಸಬಹುದಾಗಿದೆ. ಅಗತ್ಯ ಮಾಹಿತಿ ನೀಡುವ ಮೂಲಕ ಸಮೀಕ್ಷಾ ಕಾರ್ಯಕ್ಕೆ ಸಹಕಾರ ನೀಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿ, ಸಮೀಕ್ಷೆಯ ಜಿಲ್ಲಾ ಸಮನ್ವಯ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿರ್ಲಕ್ಷ್ಯ, ಉದಾಸೀನತೆ ತೋರುವವರ ವಿರುದ್ಧ ಶಿಸ್ತುಕ್ರಮ

**ಧಾರವಾಡ:** ಸಾರ್ವಜನಿಕ ಅಭಿವೃದ್ಧಿಯ ಹಿತಾಸಕ್ತಿಯಿಂದ ರಾಜ್ಯ ಸರ್ಕಾರವು ಕೈಗೊಂಡಿರುವ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ನಿಯೋಜಿಸಿರುವ ಶಾಲಾ ಶಿಕ್ಷಣ, ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಸಮೀಕ್ಷೆಗೆ ಹಾಜರಾಗಿ ಕರ್ತವ್ಯ ನಿರ್ವಹಿಸಬೇಕು. ಸಮೀಕ್ಷೆದಾರರಿಗೆ ಅಗತ್ಯವಿರುವ ತರಬೇತಿ, ಸಹಕಾರಕ್ಕೆ ಜಿಲ್ಲಾಡಳಿತ ಸಿದ್ಧವಿದೆ. ಆದರೂ ನೆಪ ಹೇಳುವ, ಕರ್ತವ್ಯದಲ್ಲಿ ನಿರ್ಲಕ್ಷ್ಯ ಮತ್ತು ಉದಾಸೀನತೆ ತೋರುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಆಯಾ ಇಲಾಖೆ ಮುಖ್ಯಸ್ಥರಿಗೆ ಹಾಗೂ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ಸಮೀಕ್ಷೆಯ ಜಿಲ್ಲಾ ಸಮನ್ವಯ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಅವರು ಶುಕ್ರವಾರ ಮಧ್ಯಾಹ್ನ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ನಿಯೋಜಿಸಿರುವ ಜಿಲ್ಲೆಯ ಎಲ್ಲ ಮೇಲ್ವಿಚಾರಕರ ಹಾಗೂ ನಿಯೋಜಿತ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ಜರುಗಿಸಿ, ಸಮೀಕ್ಷೆಯ ಪ್ರಗತಿ ಪರಿಶೀಲನೆ ಮಾಡಿ, ಮಾತನಾಡಿದರು.

ರಾಜ್ಯ ಸರ್ಕಾರದ ನಿರ್ದೇಶನದಂತೆ ಜಿಲ್ಲೆಯಲ್ಲಿ ಸೆಪ್ಟೆಂಬರ 22 ರಿಂದ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆರಂಭವಾಗಿದೆ. ಸಮೀಕ್ಷೆಯಲ್ಲಿ ಆರಂಭಿಕವಾಗಿ ತಾಂತ್ರಿಕ ಸಮಸ್ಯೆಗಳು ಕಂಡು ಬಂದರೂ, ತಕ್ಷಣ ಸಂಬಂಧಿಸಿದ ಸಿಬ್ಬಂದಿ ಹಾಗೂ ತಾಂತ್ರಿಕ



ಸಮಾಲೋಚಕರು ಪರಿಹರಿಸಿದ್ದಾರೆ. ಹಿಂದುಳಿದ ವರ್ಗಗಳ ಆಯೋಗದಿಂದ ಸಮೀಕ್ಷೆಗಾಗಿ ಹೊಸ 3.5 ಆ್ಯಪ್‌ನ್ನು ಸಹ ಬಿಡುಗಡೆ ಮಾಡಿ, ಪ್ರತಿ ಸಮೀಕ್ಷೆದಾರರು ತಮ್ಮ ಮೊಬೈಲ್‌ದಲ್ಲಿ ಅಳವಡಿಸಿಕೊಳ್ಳಲು ಅವಕಾಶ ನೀಡಲಾಗಿದೆ. ಈಗ ಯಾವುದೇ ರೀತಿಯ ಓಟಿಪಿ ಸಮಸ್ಯೆ ಇಲ್ಲ. ಆದಾಗ್ಯೂ ಇವತ್ತಿನವರೆಗೆ ನಿಗದಿತ ಗುರಿಯ ಪ್ರಕಾರ ಸಮೀಕ್ಷೆಯಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಪ್ರಗತಿ ಕಾಣುತ್ತಿಲ್ಲ ಎಂದು ಅವರು ಸಭೆಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ಮಾನ್ಯ ಮುಖ್ಯ ಮಂತ್ರಿಗಳು ಇಂದು ಬೆಳಿಗ್ಗೆ ವಿಡಿಯೋ ಸಂವಾದದ ಮೂಲಕ ಎಲ್ಲ ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಪಂಚಾಯತ ಸಿಇಓ ಗಳ ಸಭೆ ಜರುಗಿಸಿ, ಸಮೀಕ್ಷೆಯ ಪ್ರಗತಿ ಪರಿಶೀಲನೆ ಮಾಡಿದ್ದಾರೆ. ಗುರಿ ಅನುಸಾರ ಜಿಲ್ಲೆಗಳಲ್ಲಿ ಸಮೀಕ್ಷಾ ಪ್ರಗತಿ ಕಾಣದಿರುವುದು ಮತ್ತು ಕೆಲವು ಸರ್ಕಾರಿ ನೌಕರರು ಸಮೀಕ್ಷೆಗೆ ಹಾಜರಾಗದೇ ಇರುವುದನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಅವರಿಗೆ ಸಮೀಕ್ಷೆಗೆ ಹಾಜರಾಗಲು ನಿರ್ದೇಶನ ನೀಡಿ, ಇಲ್ಲದಿದ್ದರೆ ನಾಳೆಯೊಳಗೆ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ. ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯು ಸರ್ಕಾರದ ಕಾರ್ಯವಾಗಿರುವದರಿಂದ ನಿಯೋಜನೆಗೊಂಡಿರುವ ಯಾವ ಸರ್ಕಾರಿ ನೌಕರನೂ ಸಹ ಸಮೀಕ್ಷೆಯಿಂದ ವಿಮುಖವಾಗುವಂತಿಲ್ಲ. ಅನಾರೋಗ್ಯ, ಅಂಗವೈಕಲ್ಯ, ಗರ್ಬಿಣಿ ಸೇರಿದಂತೆ ವಿನಾಯಿತಿ ನೀಡಿರುವವರನ್ನು ಹೊರತುಪಡಿಸಿ, ಉಳಿದ ಎಲ್ಲರೂ ಕಡ್ಡಾಯವಾಗಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕೆಂದು ನಿರ್ದೇಶಿಸಿದ್ದಾರೆ. ಸರ್ಕಾರವು ಈ ಮಹತ್ವದ ಸಮೀಕ್ಷೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ನಿಯೋಜಿತ ಎಲ್ಲರೂ ಸಮನ್ವಯ, ಸಹಕಾರದಿಂದ ಭಾಗವಹಿಸಿ, ಸಮೀಕ್ಷೆಯನ್ನು ಯಶಸ್ವಿಗೊಳಿಸುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ನಿಯೋಜನೆಗೊಂಡಿರುವ ಮೇಲ್ವಿಚಾರಕರು ಹಾಗೂ ಸಮೀಕ್ಷೆದಾರರು ಸಮೀಕ್ಷಾ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿದಂತೆ ಕಾಣುತ್ತಿಲ್ಲ. ಪ್ರತಿ ಮೇಲ್ವಿಚಾರಕರು ತಮ್ಮ ಅದೀನದಲ್ಲಿ ಕರ್ತವ್ಯ ನಿರ್ವಹಿಸುವ ಸಮೀಕ್ಷೆದಾರರನ್ನು ಸಂಪರ್ಕಿಸಿ, ಪ್ರತಿ ದಿನ ಬೆಳಿಗ್ಗೆ ಮತ್ತು ಸಂಜೆ ಸಮೀಕ್ಷೆಯ ಪ್ರಗತಿಯನ್ನು ಪರಿಶೀಲಿಸಿ, ಮಾರ್ಗದರ್ಶನ ಮಾಡಬೇಕು. ಮತ್ತು ಪ್ರಗತಿ ಮಾಹಿತಿಯನ್ನು ಪಡೆದುಕೊಳ್ಳಬೇಕು. ಸಮೀಕ್ಷೆದಾರರಿಗೆ ಉಂಟಾಗುವ ಸಮಸ್ಯೆಗಳನ್ನು ತಮ್ಮ ಹಂತದಲ್ಲಿ ಅಥವಾ ತಹಶೀಲ್ದಾರ, ತಾಂತ್ರಿಕ ಸಮಾಲೋಚಕರ ನೆರವಿನಿಂದ ಬಗೆಹರಿಸಬೇಕು. ಕಾಲಮಿತಿಯಲ್ಲಿ ಗುರಿ ಸಾಧಿಸಬೇಕೆಂದು ಅವರು ಹೇಳಿದರು.
ಸಮೀಕ್ಷೆದಾರರು ಸಮೀಕ್ಷೆಯಲ್ಲಿ ನಿರಾಸಕ್ತಿ ತೋರಿದರೆ ಅಥವಾ ಕ್ಷೇತ್ರ ಭೇಟಿ ನೀಡದೇ ಇರುವದು, ಮೊಬೈಲ್ ಸ್ವಿಚ್ಡ್ ಆಫ್ ಮಾಡುವುದು, ಅನಗತ್ಯ ಕಾರಣ, ನೆಪಗಳನ್ನು ತಿಳಿಸಿ ಉದಾಸೀನತೆ ಹಾಗೂ ಕರ್ತವ್ಯ ಲೋಪ ಮಾಡಿದರೆ ತಕ್ಷಣ ಮೇಲ್ವಿಚಾರಕರು ತಹಶೀಲ್ದಾರರಿಗೆ ಹಾಗೂ ಸಮೀಕ್ಷೆದಾರರ ಇಲಾಖೆಯ ಮುಖ್ಯಸ್ಥರಿಗೆ ಲಿಖಿತವಾಗಿ ವರದಿ ನೀಡಬೇಕು. ಈ ವರದಿಗಳನ್ವಯ ಅಂತವರನ್ನು ಅಮಾನತ್ತುಗೊಳಿಸಲಾಗುತ್ತದೆ. ಮತ್ತು ಜಿಲ್ಲಾಡಳಿದಿಂದ ಆಯಾ ಇಲಾಖೆಯ ಮುಖ್ಯಸ್ಥರಿಗೆ ಹಾಗೂ ಸರ್ಕಾರಕ್ಕೆ ಅಂತಹ ಅಧಿಕಾರಿ, ಸಿಬ್ಬಂದಿಗಳ ವಿರುದ್ಧ ಇಲಾಖಾ ತನಿಖೆ ಮಾಡಿ, ಶಿಸ್ತು ಕ್ರಮಕೈಗೊಳ್ಳಲು ಶಿಫಾರಸ್ಸು ಮಾಡುವುದಾಗಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಎಚ್ಚರಿಕೆ ನೀಡಿದರು.
ಸಮೀಕ್ಷೆದಾರರು ಸಮೀಕ್ಷೆಯಲ್ಲಿ ಯಾವುದೇ ರೀತಿಯ ತಾಂತ್ರಿಕ ಅಡಚಣೆ ಎದುರಿಸಿದ್ದಲ್ಲಿ, ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ತಾಲೂಕುವಾರು ನಿಯೋಜಿಸಿರುವ ತಾಂತ್ರಿಕ ಸಮಾಲೋಚಕರನ್ನು ಸಂಪರ್ಕಿಸಿ, ಪರಿಹರಿಸಿಕೊಳ್ಳಬಹುದು. ಪ್ರತಿ ತಾಲೂಕಿಗೆ ಇಬ್ಬರಂತೆ ಪ್ರತಿ ದಿನ ಎರಡು ಶಿಫ್ಟ್‌ದಲ್ಲಿ ಬೆಳಿಗ್ಗೆ 8 ಗಂಟೆಯಿಂದ ರಾತ್ರಿ 10 ಗಂಟೆಯವರಿಗೆ ತಾಂತ್ರಿಕ ಸಮಾಲೋಚಕರು ಲಭ್ಯವಿರುತ್ತಾರೆ. ಯಾವುದೇ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಸಮೀಕ್ಷೆದಾರರಿಗೆ ಸಮೀಕ್ಷೆ ಆರಂಭವಾಗುವ ಪೂರ್ವದಲ್ಲಿಯೇ ಮಾಹಿತಿ ನೀಡಿ, ಸಮೀಕ್ಷೆಗೆ ಆದೇಶ ಪತ್ರ ನೀಡಲಾಗಿದೆ. ಮತ್ತು ಮಾಸ್ಟರ್ ಟ್ರೇನರ್‌ಗಳಿಂದ ಅಗತ್ಯ ತರಬೇತಿಯನ್ನು ಜಿಲ್ಲಾಮಟ್ಟದಲ್ಲಿ ಹಾಗೂ ತಾಲೂಕು ಮಟ್ಟದಲ್ಲಿ ನೀಡಲಾಗಿದೆ. ಪ್ರತಿ ದಿನ ಎಲ್ಲ ಸಮೀಕ್ಷೆದಾರರಿಗೆ ಅವರ ಮೇಲ್ವಿಚಾರಕರ ಮೂಲಕ ಅಗತ್ಯ ಮಾಹಿತಿ ಹಾಗೂ ಮಾರ್ಗದರ್ಶನವನ್ನು ನೀಡಲಾಗುತ್ತಿದೆ. ನಿಯೋಜನೆಗೊಂಡ ಅಧಿಕಾರಿ, ಸಿಬ್ಬಂದಿಗಳು ತಮಗೆ ವಹಿಸಿರುವ ಕರ್ತವ್ಯವನ್ನು ನಿಯಮಾನುಸಾರ ನಿರ್ವಹಸಿಬೇಕು. ತಪ್ಪದಲ್ಲಿ ಅವರ ವಿರುದ್ಧ ಸೂಕ್ತ ಕ್ರಮಕೈಗೊಳ್ಳುವುದಾಗಿ ಅವರು ತಿಳಿಸಿದರು.
ವೇದಿಕೆಯಲ್ಲಿ ಪ್ರೊಬೇಷನರಿ ಐಎಎಸ್ ಅಧಿಕಾರಿ ರೀತಿಕಾ ವರ್ಮಾ, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ನಗರಾಭಿವೃದ್ಧಿಕೊಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬಾನುಮತಿ ಎಚ್. ಇದ್ದರು.

# ಜೈವಿಕ ಪರಿಕರ ಸಂಪನ್ಮೂಲ ಕೇಂದ್ರ ಸ್ಥಾಪನೆಗೆ ಅರ್ಜಿ ಆಹ್ವಾನ

**ಕಾರವಾರ:** ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ (ಎನ್‌ಎಮ್‌ಎನ್‌ಎಫ್) ಯೋಜನೆಯು ಕೇಂದ್ರ ಸರ್ಕಾರದ ಮಹಾತ್ವಾಕಾಂಕ್ಷೆ ಯೋಜನೆಯಾಗಿದ್ದು, ಕಾರವಾರ ತಾಲ್ಲೂಕಿನಲ್ಲಿ ಅಮದಳ್ಳಿ ದೇವಳಮಕ್ಕಿ, ಘಾಡಸಾಯಿ, ಗೋಟೆಗಾಳಿ ಎಂಬ ನಾಲ್ಕು ಗುಚ್ಛ ಗ್ರಾಮಗಳನ್ನು ಅನುಷ್ಠಾನ ಮಾಡಲಾಗುತ್ತದೆ. ಈ ಯೋಜನೆಯಲ್ಲಿ ಜೈವಿಕ ಪರಿಕರ ಸಂಪನ್ಮೂಲ ಕೇಂದ್ರ(ಬಿಆರ್‌ಸಿ)ಗಳ ಸ್ಥಾಪನೆಗೆ ಅವಕಾಶ ಕಲ್ಪಿಸಿಕೊಡಲಾಗಿದೆ. ಪ್ರತಿ 2 ಗುಚ್ಛ ಗ್ರಾಮಗಳಲ್ಲಿ ಒಂದು ಜೈವಿಕ ಪರಿಕರ ಸಂಪನ್ಮೂಲ ಕೇಂದ್ರ(ಬಿಆರ್‌ಸಿ)ದಂತೆ ಒಟ್ಟೂ 2 ಜೈವಿಕ ಪರಿಕರ ಸಂಪನ್ಮೂಲ ಕೇಂದ್ರಗಳನ್ನು ಆಯ್ಕೆ ಮಾಡಬೇಕಾಗಿದ್ದು, ನೈಸರ್ಗಿಕ ಕೃಷಿ ಅಳವಡಿಸಿಕೊಂಡ ಆಸಕ್ತ ರೈತರಿಗೆ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಗೆ ಆಯ್ಕೆಯಾಗಲು, ರೈತರಲ್ಲಿ ಕನಿಷ್ಠ 8 ರಿಂದ 10 ಹಸುಗಳು ಇರಬೇಕು. ಗುಚ್ಛ ಗ್ರಾಮ ರೈತರಿಗೆ ನೈಸರ್ಗಿಕ ಕೃಷಿಗೆ ಅವಶ್ಯವಿರುವ ಜೈವಿಕ ಪರಿಕರಗಳಾದ ಬೀಜಾಮೃತ, ಜೀವಾಮೃತ, ಘನ ಜೀವಾಮೃತ, ನಿಮಾಸ್ತ್ರ, ದಶಪರ್ಣಿ ಸರಬರಾಜು ಮಾಡುವಂತಿರಬೇಕು. ಬೇವು ಆಧಾರಿತ ಪೀಡೆನಾಶಕ, ಟ್ರೈಕೊಡರ್ಮಾ ಉತ್ಪಾದನಾ ಘಟಕ, ಬಯೋಡೈಜೆಸ್ಟರ್ ಘಟಕ, ವರ್ಮಿ ಜಲ ಘಟಕಗಳನ್ನು ಕಡ್ಡಾಯವಾಗಿ ಇರುವವರಿಗೆ/ಸ್ಥಾಪಿಸಿಕೊಳ್ಳುವವರಿಗೆ ಆದ್ಯತೆ ನೀಡಲಾಗುವುದು. ಈ ಯೋಜನೆಗೆ ಬೇಕಾಗುವ ಸ್ಥಳಿಯ ಬಿತ್ತನೆ ಬೀಜಗಳ (ದ್ವಿದಳಧಾನ್ಯ/ಏಕದಳ) ಉತ್ಪಾದನೆ ಮತ್ತು ರೈತರಿಗೆ ದೊರೆಯುವಂತೆ ನೋಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಮತ್ತು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸುವಂತೆ ಕಾರವಾರದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆ

**ಹಾವೇರಿ:** ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಟ್ರಾನ್ಸ್ ಜೆಂಡರ್ಸ್ ಸಮೀಕ್ಷೆಯನ್ನು ತಾಲೂಕಾ ಆಸ್ಪತ್ರೆಯಲ್ಲಿ ನಡೆಸಲಾಗುತ್ತಿದೆ. ಈ ಸಮೀಕ್ಷೆಯ ಕಾರ್ಯವು ಜಿಲ್ಲೆಯಲ್ಲಿ ಸೆಪ್ಟೆಂಬರ್ 15 ರಿಂದ ಆರಂಭವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ಕೆಳದಿ ಚೆನ್ನಮ್ಮ' ಪ್ರಶಸ್ತಿಗೆ ಅರ್ಜಿ ಆಹ್ವಾನ

**ಹಾವೇರಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮಕ್ಕಳ ದಿನಾಚರಣೆ 2025ರ ಪ್ರಯುಕ್ತ, ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯಸಾಹಸ ಪ್ರದರ್ಶಿಸಿದ ಮಕ್ಕಳಿಂದ 'ಹೊಯ್ಸಳ' ಮತ್ತು 'ಕೆಳದಿ ಚೆನ್ನಮ್ಮ" ಶೌರ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆರರಿಂದ 18 ವರ್ಷದೊಳಗಿನ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ "ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತದೆ. ಪ್ರಕರಣವು ದಿನಾಂಕ 01–08–2024 ರಿಂದ 31–07–2025ರೊಳಗೆ ನಡೆದಿರಬೇಕು. ದಿನಾಂಕ 01–08–2006 ರಂದು ಹಾಗೂ ನಂತರ ಜನಿಸಿದ ಮಕ್ಕಳು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುತ್ತದೆ.

ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ.1.00ಲಕ್ಷದಂತೆ ನಗದು ಬಹುಮಾನ ಮತ್ತು ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ನಿಗದಿತ ಅರ್ಜಿ ನಮೂನೆಯನ್ನು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾವೇರಿ ಕಚೇರಿಯಿಂದ ಪಡೆದು, ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಅರ್ಜಿಯನ್ನು ದಿನಾಂಕ 10–10–2025ರೊಳಗೆ ಸಲ್ಲಿಸಬೇಕು. ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗಾಯತರು 'ಲಿಂಗಾಯತ ಧರ್ಮ' ಎಂದು ಬರೆಸಿರಿ

**ಬೆಳಗಾವಿ:** ರಾಜ್ಯದಲ್ಲಿ ಸರ್ಕಾರ ಜಾತಿಗಣತಿ ಪ್ರಾರಂಭಿಸಿದ್ದು, ಜನರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗತಿಗಳನ್ನು ಸಮೀಕ್ಷೆ ಮಾಡುವುದು ಇದರ ಉದ್ದೇಶವಾಗಿದೆ.



ತರಾತುರಿಯಲ್ಲಿ ನಡೆಯುತ್ತಿರುವ ಈ ಸಮೀಕ್ಷೆಯಿಂದಾಗಿ ಜನರಲ್ಲಿ, ಅದರಲ್ಲೂ ವಿಶೇಷವಾಗಿ ಲಿಂಗಾಯತರಲ್ಲಿ ಸಾಕಷ್ಟು ಗೊಂದಲವುಂಟಾಗಿದೆ. ಸಣ್ಣ ಸಣ್ಣ ಸಮುದಾಯಗಳು ಲಿಂಗಾಯತ ಧರ್ಮದಿಂದ ದೂರ ಸರಿಯುತ್ತಿರುವ ಈ ಸಂದರ್ಭದಲ್ಲಿ ಅಖಂಡ ಲಿಂಗಾಯತ ಸಮಾಜವನ್ನು ಗಟ್ಟಿಯಾಗಿ ಉಳಿಸಿಕೊಳ್ಳಲು ಎಲ್ಲರೂ ತಮ್ಮ ಪ್ರತಿಷ್ಠೆಯನ್ನು ಬದಿಗಿರಿಸಿ ಪ್ರಾಮಾಣಿಕವಾಗಿ ಪ್ರಯತ್ನಿಸಬೇಕಾಗಿದೆ. ಸಂವಿಧಾನದ ಕಲಂ 25 ರ ಪ್ರಕಾರ ದೇಶದಲ್ಲಿ ಪ್ರಚಲಿತದಲ್ಲಿರುವ ಎಲ್ಲ ಧರ್ಮಗಳನ್ನು ಮಾನ್ಯ ಮಾಡಬೇಕಾಗಿರುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ. ಈ ಕಾರಣಕ್ಕಾಗಿಯೇ ಜನಗಣತಿ ಫಾರ್ಮದಲ್ಲಿ 8ನೇ ಕಾಲಂನ 11ನೆಯ ಉಪಕಾಲಂದಲ್ಲಿ 'ಇತರೆ' ಎಂದು ಪ್ರತ್ಯೇಕ ಕಾಲಂ ಮೀಸಲಾಗಿರಿಸಿದೆ. ಇಲ್ಲಿ ಸಮಸ್ಥ ಲಿಂಗಾಯತರು "ಲಿಂಗಾಯತ ಧರ್ಮ" ಎಂದು ಬರೆಯಲು ಗಣತಿದಾರರಿಗೆ ಸೂಚಿಸಬೇಕು. ಹಾಗೆಯೇ ಅವರು ಬರೆದುಕೊಂಡಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಗದಗ–ಡಂಬಳ ಜಗದ್ಗುರು ತೋಂಟದಾರ್ಯಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ಇತ್ತೀಚೆಗೆ ಅನೇಕ ಮಠಾಧಿಪತಿಗಳು ಮತ್ತು ಜಾಗತಿಕ ಲಿಂಗಾಯತ ಮಹಾಸಭೆಯವರು ಧರ್ಮದ ಕಾಲಂದಲ್ಲಿ 'ಹಿಂದೂ' ಎಂದು ಬರೆಸಬಾರದು ಎಂದೂ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯು ಈ ವಿಷಯವನ್ನು ಲಿಂಗಾಯತರ ವಿವೇಚನೆಗೆ ಬಿಟ್ಟಿರುವುದನ್ನು ಎಲ್ಲರೂ ಗಮನಿಸಿ 8ನೇ ಧರ್ಮದ ಕಾಲಂದಲ್ಲಿ 'ಲಿಂಗಾಯತ ಧರ್ಮ' ಎಂದೇ ಬರೆಸಬೇಕು. 9ನೇ ಜಾತಿ ಕಾಲಂದಲ್ಲಿ ವೀರಶೈವರು "ವೀರಶೈವ" ಎಂದು.

ವೀರಶೈವ ಲಿಂಗಾಯತರು ವೀರಶೈವ ಲಿಂಗಾಯತರೆಂದು, ಲಿಂಗಾಯತದ ಬೇರೆ ಬೇರೆ ಪಂಗಡದವರು ತಮ್ಮ ತಮ್ಮ ಜಾತಿಗಳ ಹೆಸರನ್ನು ಲಿಂಗಾಯತ ಪಂಚಮಸಾಲಿ, ಲಿಂಗಾಯತ ಕುಡುವಕ್ಕಲಿಗ, ಲಿಂಗಾಯತ ಬಣಜಿಗ, ಲಿಂಗಾಯತ ರೆಡ್ಡಿ ಇತ್ಯಾದಿ ಬರೆಸಬೇಕು. ಜಾತಿಗಳಲ್ಲಿ ಉಪಜಾತಿಗಳಿದ್ದರೆ ಉಪಜಾತಿ ಕಾಲಂದಲ್ಲಿ ಅವುಗಳನ್ನು ನಮೂದಿಸಬಹುದು. ಇದರಿಂದ ಲಿಂಗಾಯತರ ಜನಸಂಖ್ಯೆಯನ್ನು ನಿಖರವಾಗಿ ತಿಳಿದುಕೊಳ್ಳಲು ಸಾಧ್ಯವಾಗುವುದು ಎಂದು ಶ್ರೀಗಳು ತಿಳಿಸಿದ್ದಾರೆ.

'ಲಿಂಗಾಯತ' ಒಂದು ವಿಶಿಷ್ಟ ಧರ್ಮ, ವಿವಿಧ ಕಾಯಕಗಳನ್ನು ಮಾಡುವ ಪಂಗಡಗಳನ್ನು ಇಂದು ಜಾತಿಗಳೆಂದು ಗುರುತಿಸಲಾಗುತ್ತಿದ್ದರೂ ಎಲ್ಲರಿಗೂ ದೊರೆಯುವ ಸಂಸ್ಕಾರ ಹಾಗೂ ಧಾರ್ಮಿಕ ಆಚರಣೆಗಳಲ್ಲಿ ಏನೂ ವ್ಯತ್ಯಾಸವಿಲ್ಲ. ಸ್ತ್ರೀ–ಪುರುಷರಿಬ್ಬರಿಗೂ ಸಮಾನ ಧಾರ್ಮಿಕ ಸ್ವಾತಂತ್ರ್ಯವಿದೆ. ಕಾಯಕ–ದಾಸೋಹ ತತ್ತ್ವಗಳ ಅಡಿಯಲ್ಲಿ ಈ ಧರ್ಮ ಬಸವಾದಿ ಶರಣರಿಂದ ರೂಪುಗೊಂಡಿದೆ. ಸಮಾನತೆ ಈ ಧರ್ಮದ ಮೂಲ ಆಶಯ. ಸಕಲ ಜೀವಿಗಳಿಗೆ ಲೇಸ ಬಯಸುವುದೇ ಇದರ ಉದ್ದೇಶ. ಈ ಧರ್ಮಾನುಯಾಯಿಗಳು ಜಗತ್ತಿನಲ್ಲಿಯೇ ಒಂದು ವಿಶಿಷ್ಟ ಜನಾಂಗ. ಇವರ ಸಂಸ್ಕೃತಿಯೂ ವೈಶಿಷ್ಟ್ಯಪೂರ್ಣ. ಈ ಜನಾಂಗದ ಅಸ್ಥಿತೆ ಕಣ್ಮರೆಯಾಗಬಾರದು. ಈ ಜನಾಂಗ ಹಾಗೂ ಸಂಸ್ಕೃತಿಯನ್ನು ಉಳಿಸಿಕೊಂಡು, ಬೆಳೆಸಿಕೊಂಡು ಹೋಗುವುದು ಪ್ರತಿಯೊಬ್ಬ ಲಿಂಗಾಯತನ ಕರ್ತವ್ಯವಾಗಿದೆ ಎಂದು ಇದೇ ಸಂದರ್ಭದಲ್ಲಿ ಶ್ರೀಗಳು ಅಭಿಪ್ರಾಯಪಟ್ಟರು.

# ನಗದು ರಹಿತ ವೈದ್ಯಕೀಯ ಚಿಕಿತ್ಸೆ ಪ್ರಯೋಜನ ಪಡೆಯಿರಿ

**ಮೂಡಲಗಿ :** ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಅವಲಂಬಿತರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆಗಳನ್ನು ಒದಗಿಸಲು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (ಕೆಎಎಸ್‌ಎಸ್) ಅ.1ರಿಂದ ಜಾರಿಗೆ ಬರಲಿದೆ. ಜಿಲ್ಲೆಯ ಸರ್ಕಾರಿ ನೌಕರರು ಸಹ ಇದರ ಪ್ರಯೋಜನ ಪಡೆಯಬೇಕು ಎಂದು ಸಂಘದ ತಾಲೂಕಾ ಘಟಕದ ಅಧ್ಯಕ್ಷ ಆನಂದ ಹಂಜ್ಯಾಗೋಳ ಹೇಳಿದ್ದಾರೆ.



ಈ ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ತಿಂಗಳು ಸರ್ಕಾರ ನಿಗದಿಪಡಿಸಿದ ವಂತಿಗೆಯನ್ನು ಮುಂದಿನ ತಿಂಗಳಿನಿಂದ ಪಾವತಿಸಬೇಕು, ಪತಿ–ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ ಒಬ್ಬರು ಮಾತ್ರ ವಂತಿಗೆ ಪಾವತಿಸಬೇಕು. ಮಾಸಿಕ ವಂತಿಕೆಯನ್ನು ನೀಡಲು ಇಚ್ಛಿಸದವರು ಅ.18ರೊಳಗೆ ಸಂಬಂಧಿಸಿದ ಬಟವಾಡೆ ಅಧಿಕಾರಿಗಳಿಗೆ (ಡಿಡಿಒ) ತಿಳಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಅಧಿಕಾರಿ/ನೌಕರರ ತಂದೆ–ತಾಯಿ ಪಿಂಚಣಿದಾರರಾಗಿದ್ದಲ್ಲಿ ಅವರ ಮಾಸಿಕ ಆದಾಯ ಮಿತಿಯನ್ನು 17,000ದಿಂದ 27,000ಕ್ಕೆ ಹೆಚ್ಚಿಸಲಾಗಿದೆ. ವಿವಾಹಿತ ಸರ್ಕಾರಿ ಮಹಿಳಾ ನೌಕರರ ತಂದೆ–ತಾಯಂದಿರೂ ಸಹ ಈ ಯೋಜನೆಯ ವ್ಯಾಪ್ತಿಗೆ ಒಳಪಡಲಿದ್ದಾರೆ. ಈ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ (ಎಎಎಸ್‌ಟಿ) ನಿರ್ವಹಿಸಲಿದೆ ಎಂದು ಹೇಳಿದ್ದಾರೆ. ಯೋಜನೆಯನ್ನು ಜಾರಿಗೊಳಿಸಿದ್ದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಜಿಲ್ಲಾ ಉಸ್ತುವಾರಿ ಮಂತ್ರಿ ಸತೀಶ್ ಜಾರಕಿಹೊಳಿ ಅವರಿಗೆ ಕ್ಷೇತ್ರದ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರಿಗೆ ನಗದು ರಹಿತ ಚಿಕಿತ್ಸೆ ಜಾರಿಗೊಳಿಸಲು ನಿರಂತರ ಶ್ರಮವಹಿಸಿದ ರಾಜ್ಯಾಧ್ಯಕ್ಷ ಸಿಎಸ್ ಷಡಕ್ಷರಿ ಅವರಿಗೆ ಮೂಡಲಗಿ ತಾಲೂಕಿನ ಸಮಸ್ತ ನೌಕರರ ಪರವಾಗಿ ತುಂಬು ಹೃದಯದ ಧನ್ಯವಾದಗಳು ಎಂದು ತಿಳಿಸಿದ್ದಾರೆ.



**ಗೋಕಾಕ:** ಶುಕ್ರವಾರ ಮಧ್ಯಾಹ್ನದಿಂದ ಸುರಿಯುತ್ತಿರುವ ನಿರಂತರ ಮಳೆಯ ಹಿನ್ನಲೆ ತಾಲೂಕಿನಲ್ಲಿ ಜನ ಜೀವನ ಅಸ್ತವ್ಯಸ್ತಗೊಂಡಿದೆ. ನಗರದಿಂದ ಗೋಕಾಕ ಜಲಪಾತಕ್ಕೆ ತೆರಳುವ ರಸ್ತೆಯ ಬದಿಯಲ್ಲಿ ಗುಡ್ಡ ಕುಸಿತ ಸಂಭವಿಸುತ್ತಿದ್ದು, ಬೃಹದ್ದಾಕಾರದ ಕಲ್ಲುಗಳು ರಸ್ತೆಯ ಮೇಲೆ ಬಿಳುತ್ತಿವೆ.

# ಅ.2ರಂದು ಗಾಂಧೀಜಿ, ಲಾಲ್‌ಬಹದ್ದೂರ ಶಾಸ್ತ್ರಿ ಜಯಂತಿ

**ಹಾವೇರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಮಹಾತ್ಮಾ ಗಾಂಧೀಜಿ ಹಾಗೂ ಲಾಲ್‌ಬಹದ್ದೂರ ಶಾಸ್ತ್ರಿಜಿಯವರ ಜಯಂತಿ ಕಾರ್ಯಕ್ರಮ ಅಕ್ಟೋಬರ್ 2 ರಂದು ಬೆಳಿಗ್ಗೆ 10 ಗಂಟೆಗೆ ಹಾವೇರಿ ನಗರದ ಗಾಂಧಿ ಭವನದಲ್ಲಿ ಜರುಗಲಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ ಆಹಾರ ಮತ್ತು ಸಾರ್ವಜನಿಕ ವಿತರಣಾ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರ ಗೌರವಾನ್ವಿತ ಉಪಸ್ಥಿತಿಯಲ್ಲಿ, ಜವಳಿ, ಕಬ್ಬು ಅಭಿವೃದ್ಧಿ ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರು ಉದ್ಘಾಟನೆ ನೆರವೇರಿಸಲಿದ್ದಾರೆ.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳ ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ ಮತ್ತು ಮಾಜಿ ಮುಖ್ಯ ಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಅವರ ಗೌರವ ಉಪಸ್ಥಿತಿಯಲ್ಲಿ, ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ ಅವರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಖಾದ್ರಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ವಿಧಾನ ಪರಿಷತ್ ಶಾಸಕರಾದ ಪ್ರೊ.ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ಶಾಸಕರಾದ ಶ್ರೀನಿವಾಸ ಮಾನೆ, ಯು.ಬಿ.ಬಣಕಾರ, ಪ್ರಕಾಶ ಕೋಳಿವಾಡ, ಯಾಸೀರ ಅಹ್ಮದಖಾನ್ ಪಠಾಣ, ಕರ್ನಾಟಕ ಗಡಿ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ನಗರಸಭೆ ಅಧ್ಯಕ್ಷೆ ಶ್ರೀಮತಿ ಶಶಿಕಲಾ ರಾಮು ಮಾಳಗಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್. ಗಾಜಿಗೌಡ್ರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಎಂ.ಎಂ.ಹಿರೇಮಠ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಮೈದೂರ ಹಾಗೂ ನಗರಸಭೆ ಉಪಾಧ್ಯಕ್ಷ ಮಲ್ಲಿಕಾರ್ಜುನ ಸಾತೇನಹಳ್ಳಿ ಅವರು ಪಾಲ್ಗೊಳ್ಳಲಿದ್ದಾರೆ.

# ದೀನ ದಯಾಳ್ ತತ್ವ ಸಿದ್ಧಾಂತ ಅಳವಡಿಸಿಕೊಳ್ಳಿ



**ರಬಕವಿ–ಬನಹಟ್ಟಿ:** ದೀನ ದಯಾಳ್ ಉಪಾಧ್ಯಾಯ ಅವರು ಸಮಾಜ ಸೇವಕರಾಗಿ, ರಾಷ್ಟ್ರೀಯವಾದಿಯಾಗಿ, ಚಿಂತಕರಾಗಿ, ಪತ್ರಕರ್ತರಾಗಿ, ಶ್ರೇಷ್ಠ ರಾಜಕಾರಣಿಯಾಗಿ ಗಮನ ಸೆಳೆದವರು. ಅವರ ತತ್ವ ಸಿದ್ಧಾಂತಗಳನ್ನು ಪಕ್ಷದ ಕಾರ್ಯಕರ್ತರು ಕೂಡಾ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ದೇಶ ಮತ್ತು ಪಕ್ಷದ ಏಳ್ಗೆಗಾಗಿ ಶ್ರಮಿಸಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಗುರುವಾರ ಇಲ್ಲಿನ ಭಾರತೀಯ ಜನತಾ ಪಕ್ಷದ ಕಾರ್ಯಾಲಯದಲ್ಲಿ ಪಂಡಿತ ದೀನದಯಾಳ್ ಉಪಾಧ್ಯಾಯ ಮತ್ತು ಆತ್ಮ ನಿರ್ಭರ ಭಾರತ ಕುರಿತು ಹಮ್ಮಿಕೊಂಡ ಕಾರ್ಯಾಗಾರದಲ್ಲಿ ಮಾತನಾಡಿದರು.

ಬಿಜೆಪಿ ಮುಖಂಡ ಶಿವಾನಂದ ಗಾಯಕವಾಡ ಮಾತನಾಡಿ, ಆತ್ಮ ನಿರ್ಭರ ಭಾರತದ ಮೂಲಕ ನಾವು ಸ್ವಾವಲಂಬಿಗಳಾಗಲು ಸಾಧ್ಯ. ಬಾಹ್ಯ ವಸ್ತುಗಳಿಗೆ ಮಹತ್ವ ನೀಡದೆ ದೇಶದಲ್ಲಿ ಉತ್ಪಾದನೆಯಾಗುವ ವಸ್ತುಗಳ ಬಳಕೆಯನ್ನು ಮಾಡುವಂತೆ ಪಕ್ಷದ ಕಾರ್ಯಕರ್ತರು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸುವಂತಾಗಬೇಕು ಎಂದರು.

ನಗರ ಘಟಕದ ಅಧ್ಯಕ್ಷ ಶ್ರೀಶೈಲ ಬೀಳಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಆತ್ಮ ನಿರ್ಭರ ಭಾರತ ಕುರಿತು ಪ್ರತಿಜ್ಞಾ ವಿಧಿಯನ್ನು ಪಕ್ಷದ ಕಾರ್ಯಕರ್ತರು ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾ ಧಬಾಡಿ, ರೇಖಾ ಕಾಂತಿ, ಸುರೇಶ ಅಕ್ಕಿವಾಟ, ಧರೆಪ್ಪ ಉಳ್ಳಾಗಡ್ಡಿ, ಪುಂಡಲೀಕ ಪಾಲಭಾವಿ, ರಾಮಣ್ಣ ಭದ್ರನವರ, ದುಂಡಪ್ಪ ಮಾಚಕನೂರ, ಪವಿತ್ರಾ ತುಕ್ಕನ್ನವರ, ಗೌರಿ ಮಿಳ್ಳಿ, ದುರ್ಗವ್ವ ಹರಿಜನ, ಆನಂದ ಕಂಪು, ಶಶಿಕಲಾ ಸಾರವಾಡ, ಜಯಶ್ರೀ ಬಾಗೇವಾಡಿ ಸೇರಿದಂತೆ ತೇರದಾಳ ಮತಕ್ಷೇತ್ರ ಬಿಜೆಪಿ ಕಾರ್ಯಕರ್ತರಿದ್ದರು.

# ಶ್ರೀಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆ

**ಧಾರವಾಡ:** ಅಕ್ಟೋಬರ 7, 2025 ರಂದು ಜಿಲ್ಲಾಮಟ್ಟದಲ್ಲಿ ಶ್ರೀ. ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸುವ ಕುರಿತು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯಲ್ಲಿ ಗುರುವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಪ್ರತಿವರ್ಷದಂತೆ ಶ್ರೀ. ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲು ಮತ್ತು ಸಮಾಜದ ಸಹಕಾರದಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಕ್ರಮವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಅಕ್ಟೋಬರ 7 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಶ್ರೀ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗುತ್ತದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸಿ, ಮೆರವಣಿಗೆಗೆ ಮೆರಗು ನೀಡುವಂತೆ ಇಲಾಖೆಯ



ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಶ್ರೀ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರದ ಮೆರವಣಿಗೆಯಲ್ಲಿ ಹೆಚ್ಚಿನ ಜನರು ಪಾಲ್ಗೋಳ್ಳುವಂತೆ ವ್ಯಾಪಕ ಪ್ರಚಾರ ಮಾಡಲು ಮತ್ತು ಕರ್ನಾಟಕ ವಿದ್ಯಾವರ್ಧಕ ಸಂಘದ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗುತ್ತದೆ. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ, ಸಾಧಕರಿಗೆ ಸನ್ಮಾನ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಿ, ಸತ್ಕರಿಸಲಾಗುತ್ತದೆ ಎಂದು ಅವರು ತಿಳಿಸಿದರು.

ಶ್ರೀ ಮಹರ್ಷಿ ವಾಲ್ಮೀಕಿಯವರ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸುವಂತೆ ಮತ್ತು ಜಯಂತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಯುವ ಸಮೂಹ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕೆಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಪರಿಶಿಷ್ಟ ಪಂಗಡದ ಅಹವಾಲುಗಳನ್ನು ಆಲಿಸಿದ ಜಿಲ್ಲಾಧಿಕಾರಿಗಳು, ಮುಂದಿನ ಜಾಗೃತ ಸಭೆಯಲ್ಲಿ ಚರ್ಚಿಸಿ, ಸಮಸ್ಯೆಗಳಿಗೆ ಪರಿಹಾರ ಸೂಚಿಸುವುದಾಗಿ ತಿಳಿಸಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಸಾರ್ವಜನಿಕರ ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯಗಳ ಅಹವಾಲು, ಸಮಸ್ಯೆಗಳನ್ನು ಸ್ವೀಕರಿಸಿ ಜಿಲ್ಲಾ ಜಾಗೃತಿ ಸಭೆಯಲ್ಲಿ ಮಂಡಿಸುವಂತೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಧಾರವಾಡ ತಹಶೀಲ್ದಾರ ಡಾ. ಡಿ.ಎಚ್. ಹೂಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಾಲ್ಮೀಕಿ ಸಮುದಾಯದ ಪ್ರಮುಖರು ಹಾಗೂ ಇತರ ಸಮಾಜಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮನವಿ

**ಬಸವನಬಾಗೇವಾಡಿ:** ತಾಲೂಕಿನ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಗುರುವಾರ ಸಿಎಂ ಅವರಿಗೆ ಬರೆದ ಮನವಿಯನ್ನು ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಅವರಿಗೆ ಸಲ್ಲಿಸಲಾಯಿತು.



ಅವರು ಸಲ್ಲಿಸಿದ ಮನವಿಯಲ್ಲಿ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ–1 ರಲ್ಲಿರುವ ಬೆಸ್ತ, ಅಂಬಿಗ, ಕಬ್ಬಲಿಗ, ಕಬ್ಬೇರ, ಕೊಲಿ ಮುಂತಾದ ಜಾತಿಯವರಿಗೆ ನಾಯಕ ತಳವಾರರ ಹೆಸರಿನಲ್ಲಿ ಪರಿಶಿಷ್ಟ ಪಂಗಡದ ನಕಲಿ ಜಾತಿ ಪ್ರಮಾಣ ಪತ್ರಗಳನ್ನು ನೀಡುವುದನ್ನು ಕೂಡಲೇ ನಿಲ್ಲಿಸಬೇಕು. ನಾಯಕ ತಳವಾರ ಜಾತಿಗೆ ಸೇರಿಲ್ಲದವರು ವಾಮ ಮಾರ್ಗದಲ್ಲಿ ಪರಿಶಿಷ್ಟ ಪಂಗಡದ ನಕಲಿ ಜಾತಿ ಪ್ರಮಾಣ ಪತ್ರಗಳನ್ನು ಪಡೆದಿದ್ದಲ್ಲಿ ಕರ್ನಾಟಕ ಉಚ್ಚನ್ಯಾಯಾಲಯದ ಆದೇಶದಂತೆ ಅಂತಹವರ ಮೇಲೆ ಮತ್ತು ಅಂತಹ ಜಾತಿ ಪ್ರಮಾಣ ಪತ್ರಗಳನ್ನು ನೀಡಿದ ಆಧಿಕಾರಿಗಳ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಿ ನಿಯಮಾನುಸಾರ ಕ್ರಮ ತೆಗೆದುಕೊಳ್ಳಲು ಒತ್ತಾಯಿಸಿದೆ. ಈ ನಕಲಿ ಜಾತಿ ಪ್ರಮಾಣ ಪತ್ರಗಳಿಗೆ ಮೂಲ ಕಾರಣ ವೃತ್ತಿಗಾಗಿ ನಾಯಕ ತಳವಾರ ಜಾತಿಗೆ ಸೇರದೆ ಇತರ ಜಾತಿಗೆ ಅಂದರೆ ಬೆಸ್ತ, ಅಂಬಿಗ, ಕಬ್ಬಲಿಗ, ಕಬ್ಬೇರ, ಕೊಲಿ ಮುಂತಾದ ಜಾತಿಗೆ ಸೇರಿದವರು ತಳವಾರಿಕೆ ವೃತ್ತಿ ಮಾಡುತ್ತಿದ್ದು. ನಾಯಕ ತಳವಾರರ ಹೆಸರು ಜಾತಿ ಸೂಚಕ ಪದವಾಗಿರುತ್ತದೆ. ರಾಜ್ಯ ಸರ್ಕಾರ ಕುಲಶಾಸ್ತ್ರೀಯ ಅಧ್ಯಯನದೊಂದಿಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸುವಾಗ ಅಲ್ಲಿಂದ ಪರಿಶಿಷ್ಟ ಪಂಗಡದ ಪಟ್ಟಿಯ ಕ್ರಮ ಸಂಖ್ಯೆ 38ರಲ್ಲಿ ಸೇರಿಸಿರುವುದು ನಾಯಕ ತಳವಾರ ಜಾತಿ ಮಾತ್ರ, ಬೆಸ್ತ, ಅಂಬಿಗ, ಕಬ್ಬಲಿಗ, ಕಬ್ಬೇರ, ಕೊಲಿ ಮುಂತಾದ ಜಾತಿಗೆ ಸೇರಿದ ತಳವಾರರನ್ನು ಅವರು ಸೇರಿರುವ ಇತರ ಹಿಂದುಳಿದ ವರ್ಗಗಳ ಪ್ರವರ್ಗ–1 ರ ಕ್ರಮ ಸಂಖ್ಯೆ 6 ರಲ್ಲಿ ಬೆಸ್ತ ಮುಂತಾದವುಗಳ ಜೊತೆ ಸೇರಿಸಿ ಉದ್ಭವಿಸಿರುವ ಗೊಂದಲಕ್ಕೆ ತೆರೆ ಎಳೆಯಬೇಕು. ಪರಿಶಿಷ್ಟ ಪಂಗಡದವರ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನ ಮತ್ತು ಮೇಲ್ವಿಚಾರಣೆಗೆ ಕಳೆದ ಒಂದು ವರ್ಷಕ್ಕೂ ಮೇಲ್ಪಟ್ಟು ಸಮಯದಿಂದ ಪರಿಶಿಷ್ಟ ವರ್ಗಗಳ ಇಲಾಖೆಗೆ ಸ್ವತಂತ್ರ ಸಚಿವರಿಲ್ಲದೆ ತೊಂದರೆಯಾಗಿದೆ. ಆದ್ದರಿಂದ ಕೂಡಲೆ ಪರಿಶಿಷ್ಟ ವರ್ಗಗಳ ಇಲಾಖೆಗೆ ಸ್ವತಂತ್ರ ಕ್ಯಾಬಿನೆಟ್ ಸಚಿವರನ್ನ ನೇಮಿಸಬೇಕು. ತಳವಾರ ಹೆಸರಿನಲ್ಲಿ ಕೋಳಿ, ಕಬ್ಬಲಿಗ,ಬೆಸ್ತಾ, ಸಮುದಾಯದವರು ಸುಳ್ಳು ಜಾತಿ ಪ್ರಮಾಣ ಪತ್ರ ಪಡೆಯಲು ಪ್ರಾರಂಭಮಾಡಿದರು. ಈ ಸುಳ್ಳು ಜಾತಿ ಪ್ರಮಾಣ ಪತ್ರ ರದ್ದು ಪಡಿಸಲು ಎಸ್.ಟಿ, ಎಸ್.ಸಿ, ಒಬಿಸಿ ಕಾಯಿದೆ ಕಲಂ 4 ಮತ್ತು 4ಎ ರಲ್ಲಿ ತಹಸೀಲ್ದಾರ ಮತ್ತು ಮೇಲಾಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಈ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸುವಂತೆ ಆದೇಶ ನೀಡಬೇಕು.

ಕಾಲೇಜು ಶಿಕ್ಷಣ ಮತ್ತು ಉನ್ನತ ಶಿಕ್ಷಣ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಕೂಡಲೇ ವಿದ್ಯಾರ್ಥಿ ವೇತನ ಹಣವನ್ನು ಬಿಡುಗಡೆ ಮಾಡುವುದು. ಈ ಸಂದರ್ಭದಲ್ಲಿ ವಾಲ್ಮೀಕಿ ಸಮಾಜದ ತಾಲೂಕಾ ಅಧ್ಯಕ್ಷ ರವಿ ನಾಯಕೋಡಿ, ಪರಸು ಬಡಿಗೇರ, ಶೇಖಪ್ಪ ಲಿಂಗದಳ್ಳಿ, ಶ್ರೀಶೈಲ ಜಾಲವಾದಿ, ಮಂಜು ಗುಡಗುಂಟಿ, ಪಿ.ವೈ. ಕೋಳೂರ, ಪ್ರಕಾಶ ರಾಗಪ್ಪಗೋಳ, ರಾಜು ಯರ್ಾಗೇರಿ, ರಾಜು ಮಾಸ್ತಾಳ, ಶಿವಪ್ಪ ಬಡಿಗೇರ, ಬಸನಗೌಡ ಪಾಟೀಲ, ಶ್ರೀಶೈಲ ಹೊನಳ್ಳಿ, ಶಿವಪ್ಪ ಬಡಿಗೇರ, ಕಾಶಿನಾಥ ಬಡಿಗೇರ, ಶಿಕ್ಷಕ ಬೇವೂರ , ಅನಿಲ ಯಲಗೊಂಡ, ಅನಿಲ ಶಾಖಾಪುರ ಸೇರಿದಂತೆ ಇತರರು ಇದ್ದರು.

# ವಿವಿಧ ತರಬೇತಿಗಳಿಗೆ ಅರ್ಜಿ ಆಹ್ವಾನ

**ಕೊಪ್ಪಳ:** ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ, ಕೊಪ್ಪಳ ವತಿಯಿಂದ ಜಿಲ್ಲೆಯ ಗ್ರಾಮೀಣ ಭಾಗದ ಆಸಕ್ತರಿಗೆ ವಿವಿಧ ತರಬೇತಿಗಳನ್ನು ಊಟ ಮತ್ತು ವಸತಿಯೊಂದಿಗೆ ಉಚಿತವಾಗಿ ನೀಡಲಾಗುತ್ತಿದ್ದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಸ್ಥೆಯಿಂದ 13 ದಿನಗಳ ಕೃಷಿ ಉದ್ಯಮಿ(ಕುರಿ ಸಾಕಾಣಿಕೆ, ಹೈನುಗಾರಿಕೆ) ತರಬೇತಿ, 13 ದಿನಗಳ ಅಣಬೆ ಬೇಸಾಯ ತರಬೇತಿ, 30 ದಿನಗಳ ಬ್ಯೂಟಿ ಪಾರ್ಲರ್ ತರಬೇತಿ ಹಾಗೂ 31 ದಿನಗಳ ಮಹಿಳಾ ಹೊಲಿಗೆ ತರಬೇತಿಯನ್ನು ನೀಡಲಾಗುತ್ತದೆ. ತರಬೇತಿ ಪಡೆದ ಅಭ್ಯರ್ಥಿಗಳಿಗೆ ಬ್ಯಾಂಕಿನಿಂದ ಸಾಲ ಸೌಲಭ್ಯ ಒದಗಿಸಲು ಪ್ರಯತ್ನಿಸಲಾಗುವುದು.

ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಅಕ್ಟೋಬರ್ 6 ರಂದು ಸಂದರ್ಶನ ನಡೆಯಲಿದ್ದು, ಅ.7 ರಂದು ತರಬೇತಿ ಪ್ರಾರಂಭಿಸಲಾಗುವುದು. ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು 18 ರಿಂದ 45 ವರ್ಷದ ಒಳಗಿನವರಾಗಿರಬೇಕು. ಕನಿಷ್ಠ ಎಂಟನೇ ತರಗತಿ ಪಾಸ್ ಆಗಿರಬೇಕು. ಕೊಪ್ಪಳ ಜಿಲ್ಲೆಯ ಗ್ರಾಮೀಣ ಭಾಗದವರಾಗಿರಬೇಕು. ಸ್ವಯಂ ಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು.

ಆಸಕ್ತರು ಆಧಾರ್ ಕಾರ್ಡ್, ರೇಷನ್ ಕಾರ್ಡ್, ಪಾನ್‌ಕಾರ್ಡ್, ಎಸ್‌ಬಿಐ ಬ್ಯಾಂಕ್ ಪಾಸ್‌ಬುಕ್, ವಿದ್ಯಾರ್ಹತೆಯ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳು ಹಾಗೂ ಪಾಸ್‌ಪೋರ್ಟ್ ಅಳತೆಯ 3 ಭಾವಚಿತ್ರಗಳೊಂದಿಗೆ ನಿರ್ದೇಶಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ ಆವರಣ, ಅಶೋಕ ಸರ್ಕಲ್ ಹತ್ತಿರ, ಕೊಪ್ಪಳ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಕಚೇರಿ ಅಥವಾ ದೂ.ಸಂ.: 08539–231038, 9483618178, 7259073827, 9538096796, 9481085217 ಗೆ ಸಂಪರ್ಕಿಸಬಹುದು ಎಂದು ಎಸ್‌ಬಿಐ ಆರ್‌ಸೆಟಿಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ದುರ್ಗಾಮಾತಾ ದೌಡ ಪೂಜೆ

**ಗೋಕಾಕ:** ದುರ್ಗಾಮಾತಾ ದೌಡ 4 ನೇ ದಿನದ ಅಂಗವಾಗಿ ನಗರದ ಸೋಮವಾರ ಪೇಟೆಯಲ್ಲಿ ಪೂಜೆ ಮಾಡುವುದರ ಮೂಲಕ ಸ್ವಾಗತ ಕೋರಲಾಯಿತು. ಈ ಸಂದರ್ಭದಲ್ಲಿ ಸೋಮವಾರ ಪೇಟೆಯ ಎಲ್ಲ ಗುರು ಹಿರಿಯರು ಮಾತೆಯರು ಯುವಕರು ಅತೀ ಉತ್ಸಾಹ ದಿಂದ ಬರಮಾಡಿಕೊಂಡರು. ಸೊಮ್ಮಯ್ಯ ಹಿರೇಮಠ ,ಚಂದ್ರಕಾಂತ ಕುರಬೇಟ, ಶ್ರೀಶೈಲ ಕುರಬೇಟ, ಹಿರಿಯ ಪತ್ರಕರ್ತರಾದ ಈಶ್ವರ ನಾಗನೂರ, ಭರತ್ ಚೌಗಲಾ, ಶಶಿಕಾಂತ ಕುರಬೇಟ,ಮಲ್ಲು ತುಕ್ಕಾರ, ಚಿನ್ಮಯ ಹೋಳಿಮಠ, ವಿದ್ಯಾಸಾಗರ ಹಿಡಕಲ್, ಬಸು ಕಮಲದಿನ್ನಿ, ಪ್ರಮೋದ್ ಕುರಬೇಟ,ರವಿ ಕುರಬೇಟ, ಸೋಮನಾಥ್ ಮಗದುಮ ಸೇರಿದಂತೆ ಸ್ಥಳೀಯ ಮುಖಂಡರು ಇದ್ದರು.


# ವಧು-ವರರ ಸಮಾವೇಶ

**ವಿಜಯಪುರ:** ಗದಗ ನಗರದ ನಿಜಶರಣ ಅಂಬಿಗರ ಚೌಡಯ್ಯನವರ ಸಮಾಜದ ವತಿಯಿಂದ ಸಮಾಜದ ಸಂಚಾಲಕರಾದ ದೇವೇಂದ್ರ ಅಂಬಿಗೇರ ಇವರು ಇದೇ 12ನೇ ಆಕ್ಟೋಬರ್ 2025ರ ರವಿವಾರ ರಂದು ವಧು–ವರರ ಸಮಾವೇಶವನ್ನು ಹಮ್ಮಿಕೊಂಡಿದ್ದಾರೆ. ವಧು–ವರ ಸಮಾವೇಶವು ಗದಗ ನಗರದ ಹುಬ್ಬಳ್ಳಿ ರಸ್ತೆಯ ಮಾರ್ಗದಲ್ಲಿರುವ ಮುಳಗುಂದ ನಾಕಾ ಹತ್ತಿರದ ಹೊಟೆಲ್ ಕ್ಲಾರ್ಕ್‌ಇನ್ ಸ್ಟಾರ್ ಹೊಟೆಲ್‌ನಲ್ಲಿ ನಡೆಸಲಾಗುತ್ತಿದೆ.

ಸಮಾವೇಶದಲ್ಲಿ ವಧು–ವರರ ಫೋಟೊ ಮೂಲಕ ಇಮೇಜ್ ಹಾಗೂ ವೀಡಿಯೋ ಮೂಲಕ ಪ್ರದರ್ಶನ ಮಾಡಲಾಗುವುದು. 2025ನೇ ಆಕ್ಟೋಬರ 1ರ ವರೆಗೆ ವಧು–ವರರು ತಮ್ಮ ಹೆಸರುಗಳನ್ನು ನೋಂದಣಿ ಮಾಡಬಹುದಾಗಿದೆ. ಆಸಕ್ತ ಯುವಕ–ಯುವತಿಯರ, ನಿಜಶರಣ ಅಂಬಿಗರ ಚೌಡಯ್ಯನವರ ಸಮಾಜದ ಸಂಚಾಲಕರಾದ ದೇವೇಂದ್ರಅಂಬಿಗೇರ ಇವರ ವಾಟ್ಸ್‌ಆಪ್ ನಂಬರ 9880638379ಗೆ ತಮ್ಮ ಇತ್ತೀಚಿನ ಫೋಟೊ ಹಾಗೂ ಬಯೋಡಾಟಾವನ್ನು ಕಳುಹಿಸಿಕೊಡುವಂತೆ ಕೋರಿರುವುರು. ಸಮಾವೇಶದಲ್ಲಿ ವಧು–ವರರ ಜೊತೆಗೆ ಪಾಲಕರು ಭಾಗವಹಿಸಬಹುದಾಗಿದೆ.ವಿಜಯಪುರ ಜಿಲ್ಲೆಯಿಂದ ವಧು–ವರರು ಹಾಗೂ ಅವರೊಂದಿಗೆ ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ವಿಜಯಪುರ ಜ್ಞಾನಗಂಗಾ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷರಾದ ಎಸ್.ಎಮ್ ಗಾಣೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಾನಿಗೊಳಗಾದ ಬೆಳೆಗಳಿಗೆ ಸೂಕ್ತ ಪರಿಹಾರಕ್ಕೆ ಆಗ್ರಹ

**ಬಸವನಬಾಗೇವಾಡಿ:** ತಾಲೂಕಿನ ಯರನಾಳ ಗ್ರಾಮ ಸೇರಿದಂತೆ ವಿವಿಧ ಗ್ರಾಮಗಳ ರೈತ ಬಾಂಧವರು ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಬುಧವಾರ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ ತೊಗರಿ, ಶೇಂಗಾ, ಮೆಣ್ಣೆಹೋಳ, ಹತ್ತಿ, ಈರುಳ್ಳಿ ಸೇರಿದಂತೆ ಇನ್ನುಳಿದ ಬೆಳೆಗಳು ವಿಪರೀತ ಮಳೆಯಿಂದ ಸಂಪೂರ್ಣ ಹಾನಿಗೊಳಗಾಗಿವೆ. ವೈಜ್ಞಾನಿಕ ಸಮೀಕ್ಷೆ ನಡೆಸಿ ಎಲ್ಲ ಬೆಳೆಗಳಿಗೂ ಸೂಕ್ತ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿ ಸರ್ಕಾರಕ್ಕೆ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಅವರ ಮೂಲಕ ಮನವಿ ಸಲ್ಲಿಸಿದರು.



ಸಂಘದ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ಪ್ರತಿ ವರ್ಷ ರೈತರು ಒಂದಿಲ್ಲೊಂದು ರೀತಿಯಿಂದ ಬೆಳೆಗಳು ಹಾನಿಯಾಗಿ ತೀವ್ರ ನಷ್ಟ ಅನುಭವಿಸುತ್ತಿದ್ದಾರೆ. ಇದರಿಂದ ಬೆಳೆ ಕೈ ಸೇರದೆ ಕೃಷಿಗಾಗಿ ಮಾಡಿದ ಸಾಲ ತೀರಿಸಲಾಗದೆ ಚಿಂತೆಗೀಡಾಗಿದ್ದಾರೆ. ಕೂಡಲೇ ಸರ್ಕಾರ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಿ ಸೂಕ್ತ ವರದಿಯನ್ನು ಸರ್ಕಾರ ತರಿಸಿಕೊಂಡು ಪ್ರತಿ ಬೆಳೆಗೆ ಎಕರೆಯಂತೆ ಸೂಕ್ತ ಪರಿಹಾರ ಒದಗಿಸಬೇಕು.

ಕಳೆದ ವರ್ಷ ಸರಿಯಾಗಿ ಸಮೀಕ್ಷೆ ಮಾಡದೇ ಎಲ್ಲೋ ಕಛೇರಿಯಲ್ಲಿ ಕುಳಿತು ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿದ್ದರಿಂದ ಹೆಚ್ಚಿನ ರೈತರು ಪರಿಹಾರದಿಂದ ವಂಚಿತರಾಗಿದ್ದಾರೆ. ಅದರಲ್ಲಿ ಗ್ರಾಮ ಪಂಚಾಯತಿಯವರು ಸರಿಯಾಗಿ ಸಮೀಕ್ಷೆಯನ್ನು ಮಾಡುವದಿಲ್ಲ. ಇವರು ಮಾಡಿದ ತಪ್ಪಿನಿಂದಲೇ ಕಳೆದ ವರ್ಷ ಇಂಗಳೇಶ್ವರ ಗ್ರಾಮ ಸೇರಿದಂತೆ ವಿವಿಧ ಹಳ್ಳಿಯ ರೈತರು ಹಾನಿಗೊಳಗಾದ ತೊಗರಿ ಪರಿಹಾರದಿಂದ ವಂಚಿತರಾಗಿದ್ದಾರೆ. ಆದ್ದರಿಂದ ಸರಿಯಾಗಿ ಸಮೀಕ್ಷೆ ನಡೆಸಿ ನಿಖರವಾದ ಮಾಹಿತಿಯನ್ನು ಸರ್ಕಾರಕ್ಕೆ ಕಳುಹಿಸಿ ಸೂಕ್ತ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿದರು.

ಬಸವನಬಾಗೇವಾಡಿ ತಾಲೂಕಾಧ್ಯಕ್ಷ ಉಮೇಶ ವಾಲಿಕಾರ ಮಾತನಾಡಿ, ಕುಂಭದ್ರೋಣ ಮಳೆಯಿಂದಾಗಿ ಜಮೀನುಗಳಿಗೆ ಹಾಗೂ ಗ್ರಾಮದಿಂದ ಗ್ರಾಮಕ್ಕೆ ಸಂಪರ್ಕಿಸುವ ರಸ್ತೆಗಳು ಸಂಪೂರ್ಣ ಹದಗೆಟ್ಟಿವೆ. ಇದರಿಂದ ಜನರು ತಿರುಗಾಡಲು ತೊಂದರೆಯಾಗಿದೆ. ಇದರಲ್ಲಿ ಯರನಾಳ ಗ್ರಾಮದ ಸರ್ಕಾರಿ ರಸ್ತೆ ಜಮೀನುಗಳಿಗೆ ಹೊಂದಿಕೊಂಡು ಹೋಗಿದ್ದು ಅದು ಸಂಪೂರ್ಣ ಕೊಳಚೆ ಗುಂಡಿಯಂತಾಗಿದೆ. ಇಂತಹ ರಸ್ತೆಯಲ್ಲಿಯೇ ರೈತರು ಹರಸಾಹಸ ಪಟ್ಟು ಜಮೀನುಗಳಿಗೆ ತೆರಳುವುದು ಅನಿವಾರ್ಯವಾಗಿದೆ. ಕೂಡಲೇ ಈ ರಸ್ತೆಯನ್ನು ಸಂಬಂಧಿಸಿದ ಇಲಾಖೆಯವರೂ ದುರಸ್ಥಿಗೊಳಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಉಮೇಶ ವಾಲೀಕಾರ, ಚಂದ್ರಾಮ ತೆಲ್ಲ, ಚಂದಪ್ಪ ವಾಲಿಕಾರ, ಶಂಕ್ರಪ್ಪ ಮಳ್ಳಿ, ಭೀಮಪ್ಪ ಮಳ್ಳಿ, ಶೇಖಪ್ಪ ಹೊಸಮನಿ, ಯಲ್ಲಪ್ಪ ದಿನ್ನಿ, ಅಶೋಕ ಜಂಗಮಶೆಟ್ಟಿ, ಸುರೇಶ ಅನ್ನಿ, ನಿಂಗಪ್ಪ ಗಾಣಿಗೇರ, ಶಿವಪ್ಪ ಹಾಲಗೇರಿ, ಬಸಪ್ಪ ಬ್ಲಾಕೊಂಡ, ಶಿವಪ್ಪ ಆಲಗೊಂಡ, ಗಜಾನನ ನಾಗರಾಳ, ಶ್ರೀಶೈಲ ಮಳ್ಳಿ ಇತರರು ಇದ್ದರು.

# ಸೇವೆಯಿಂದ ಮಾತ್ರ ಶಾಶ್ವತ ಕೀರ್ತಿ ಪಡೆಯಲು ಸಾಧ್ಯ



**ಬಸವನಬಾಗೇವಾಡಿ:** ಮನುಷ್ಯ ಜನ್ಮ ಸಾರ್ಥಕತೆ ಹೊಂದುವುದು ಸೇವೆಯಿಂದ ಮಾತ್ರ. ಸೇವೆಯ ಪ್ರತಿಫಲ ಸೇವೆಯೇ ಎಂಬುದನ್ನು ವಿದ್ಯಾರ್ಥಿಗಳು ಅರಿಯಬೇಕೆಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಶ್ರೀಶೈಲ ಬಳವಾಟ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಷ್ಟೀಯ ಸೇವಾ ಯೋಜನಾ ಘಟಕದ ಸಂಸ್ಥಾಪನಾ ದಿನದಂಗವಾಗಿ ಬುಧವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,ಈ ಜಗತ್ತಿನಲ್ಲಿ ಹಣ, ಐಶ್ವರ್ಯದಿಂದ ಶಾಶ್ವತ ಕೀರ್ತಿ ಪಡೆಯಲು ಸಾಧ್ಯವಿಲ್ಲ. ಸೇವೆಯಿಂದ ಮಾತ್ರ ಶಾಶ್ವತ ಕೀರ್ತಿ ಪಡೆಯಲು ಸಾಧ್ಯ.ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸೇವಾ ಮನೋಭಾವನೆ ಬೆಳೆಸಿಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಎನ್. ಬಿ. ಹೊಸಮನಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಗ್ರಾಮಗಳ ಉದ್ಧಾರದ ಕನಸಿಗೆ ಎನ್.ಎಸ್.ಎಸ್ ಚಟುವಟಿಕೆಗಳು ಪೂರಕವಾಗಿವೆ. ಎಲ್ಲಾ ವಿದ್ಯಾರ್ಥಿಗಳು ಸ್ವಯಂ ಸ್ಫೂರ್ತಿಯಿಂದ ಸೇವೆ ಮಾಡಬೇಕೆಂದರು.

ಕಾರ್ಯಕ್ರಮದಲ್ಲಿ ನಿರ್ವಹಣಾ ಶಾಸ್ತ್ರ ವಿಭಾಗದ ಡಾ.ಅಮಿತ್ ಮಿರ್ಜಿ,ದೈಹಿಕ ಶಿಕ್ಷಣ ನಿರ್ದೇಶಕಿ ರೇಣುಕಾ ಅಂಬಲಿ ,ಇಂಗ್ಲೀಷ್ ವಿಭಾಗದ ಪ್ರಿಯಾಂಕ ಜಿಂದೆ ಇತರರು ಇದ್ದರು. ರಾಜ್ಯಶಾಸ್ತ್ರ ವಿಭಾಗದ ಡಾ. ಹೆಚ್. ಎಂ. ನಾಟಿಕಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಎಸ್ಸಿ ಪ್ರಥಮ ವರ್ಷದ ವಿದ್ಯಾರ್ಥಿನಿ ಸಾಕ್ಷಿ ಕಲ್ಲೂರ ಸ್ವಾಗತಿಸಿದರು. ಬಿ.ಎ ಅಂತಿಮ ವರ್ಷದ ವಿದ್ಯಾರ್ಥಿ ಸುರೇಶ ಹಿಟ್ನಳ್ಳಿ ನಿರೂಪಿಸಿದರು. ಬಿ.ಎಸ್ಸಿ ಪ್ರಥಮ ವರ್ಷದ ವಿದ್ಯಾರ್ಥಿನಿ ದಾನೇಶ್ವರಿ ನಾಯ್ಕೊಡಿ ವಂದಿಸಿದರು.

# ಕೊಪ್ಪಳ ವಿವಿಯಲ್ಲಿ ಸೆ.30ರಂದು ದಸರಾ ಕಾವ್ಯ ಸಂಭ್ರಮ ಕಾರ್ಯಕ್ರಮ

**ಕೊಪ್ಪಳ:** ಕೊಪ್ಪಳ ವಿಶ್ವವಿದ್ಯಾಲಯದಿಂದ ದಸರಾ ಕಾವ್ಯ ಸಂಭ್ರಮ ಕಾರ್ಯಕ್ರಮವನ್ನು ಸೆಪ್ಟೆಂಬರ್ 30 ರಂದು ಬೆಳಿಗ್ಗೆ 10:30 ಗಂಟೆಗೆ ಸರ್ಕಾರಿ ತಾಂತ್ರಿಕ ಮಹಾವಿದ್ಯಾಲಯ, ತಳಕಲ್‌ನಲ್ಲಿರುವ ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಸಮಾರಂಭಕ್ಕೆ ಉದ್ಘಾಟಕರಾಗಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಮಲ್ಲಿಕಾ ಘಂಟಿ ಅವರು ಆಗಮಿಸುವರು. ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿ.ಕೆ. ರವಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸುವರು. ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಕಲ್ಯಾಣ ವಾಣಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡುವರು. ಮುಖ್ಯ ಅತಿಥಿಗಳಾಗಿ ತುಮಕೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ವೆಂಕಟೇಶ್ವರಲು, ವಿಜಯಪುರದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ, ರಾಯಚೂರಿನ ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ, ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಶಿಕಾಂತ ಉಡಿಕೇರಿ, ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ರಮೇಶ ಬಿ., ಕರ್ನಾಟಕ ಪ್ರಕಾಶಕರ ಸಂಘದ ಅಧ್ಯಕ್ಷರಾದ ಡಾ.ವಸುಂಧರಾ ಭೂಪತಿ, ವಿಜಯಪುರದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಹಾಗೂ ಸಮೂಹ ಸಂವಹನ ವಿಭಾಗದ ಮುಖ್ಯಸ್ಥರಾದ ಪ್ರೊ.ಓಂಕಾರ ಕಾಕಡೆ ಆಗಮಿಸುವರು. ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷರಾದ ಡಾ.ಹೆಚ್.ಎಲ್.ಪುಷ್ಪಾ ಅವರು ಕವಿಗೋಷ್ಠಿಯ ಅಧ್ಯಕ್ಷತೆ ವಹಿಸುವರು. ಸುಮಾರು 50 ಕ್ಕೂ ಹೆಚ್ಚು ಕವಿಗಳು ಕವನ ವಾಚಿಸುವರು ಎಂದು ಕೊಪ್ಪಳ ವಿಶ್ವವಿದ್ಯಾಲಯದ ಪ್ರಕಟಣೆ ತಿಳಿಸಿದೆ.

# ಲಕ್ಕಮ್ಮನಹಳ್ಳಿ: ಇಂದು ವಿದ್ಯುತ್ ವ್ಯತ್ಯಯ

**ಧಾರವಾಡ:** 110/11ಕೆವ್ಹಿ ಲಕ್ಕಮ್ಮನಹಳ್ಳಿವಿದ್ಯುತ್ ವಿತರಣಾಕೇಂದ್ರದಲ್ಲಿ ಸೆಪ್ಟೆಂಬರ 28, 2025 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇವರು 2ನೇ ತ್ರೈಮಾಸಿಕ ತುರ್ತುಪಾಲನಾ ಕಾಮಗಾರಿಯನ್ನು ಕೈಗೊಳ್ಳುವುದರಿಂದ ವಿದ್ಯುತ್ ವಿತರಣಾ ಕೇಂದ್ರದ ಸರಬರಾಜು ಆಗುವ ಎಲ್ಲಾ 11ಕೆವ್ಹಿ ಮಾರ್ಗಗಳಲ್ಲಿ ಸೆಪ್ಟೆಂಬರ 28, ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಟೋಲನಾಕಾ, ಮಾಳಮಡ್ಡಿ, ನಗರಕರಕಾಲೋನಿ, ಬಾಗಲಕೋಟ ಪೆಟ್ರೋಲಪಂಪ್, ಲಕ್ಷ್ಮೀನಗರ, ಗಾಂಧಿನಗರ, ಕಲಘಟಗಿ ರಸ್ತೆ, ರಾಜೀವಗಾಂಧಿ ನಗರ, ಸರಸ್ವತಿನಗರ, ತೇಜಸ್ವಿನಗರ, ಸಂಗೊಳ್ಳಿ ರಾಯಣ್ಣನಗರ, ಗಿರಿನಗರ, ಕಕ್ಕಯ್ಯಾನಗರ, ಗುರುದೇವನಗರ, ವಿದ್ಯಾಗಿರಿ, ರಜತಗಿರಿ, ಸಪ್ತಗಿರಿ, ವಾಯ್. ಎಸ್. ಕಾಲೋನಿ, ಲಕ್ಕಮ್ಮನಹಳ್ಳಿ, ಗೋಪಾಲಪುರ, ದಾನೇಶ್ವರಿನಗರ, ಸನ್ಮತಿಮಾರ್ಗ, ಸ್ಟೇಶನ್‌ರೋಡ್, ನುಗ್ಗಿಕೇರಿ, ವಿವೇಕಾನಂದನಗರ, ಕೆ.ಎಮ್.ಪಿ, ವೆಂಕಟೇಶ್ವರ, ಸೋಮೇಶ್ವರ, ಗಾರ್ಡನಪಾಲಿಮರ, ಜೆ.ಎಸ್.ಎಸ್, ಮಾದರಮಡ್ಡಿ, ನವಲೂರ, ಲಕ್ಕಮ್ಮನಹಳ್ಳಿ ಕೈಗಾರಿಕಾ ಪ್ರದೇಶ,ರಾಯಾಪುರ ಕೈಗಾರಿಕಾ ಪ್ರದೇಶ,ಜನ್ನತನಗರ, ಲಕ್ಷ್ಮೀಸಿಂಗನಕೇರಿ, ಪಿ.ಬಿ ರಸ್ತೆ, ಮೂಗಬಸವೇಶ್ವರ, ಹೊಸಯೆಲ್ಲಾಪುರ, ಜೈಕೆಫೆಸರ್ಕಲ್, ನುಚ್ಚಂಬ್ಲಿಭಾವಿ, ದುಂಡಿಓಣಿ, ಯಲಿಗಾರಓಣಿ, ಭೂಸಪ್ಪಚೌಕ್, ಶಿವಾನಂದನಗರ, ಚಪ್ಪರ್‌ಬಂದ್‌ಕಾಲೋನಿ, ರಾಮನಗರ, ಸಂಗಮಸರ್ಕಲ್, ಲೈನ್‌ಬಜಾರ್, ದರೋಗಾಓಣಿ, ತುಪ್ಪದಓಣಿ, ಸೌದಾಗರಗಲ್ಲಿ, ಟಿಕಾರೆರೋಡ್, ಮಾರ್ಕೆಟ್ ಪೋಲಿಸ್‌ಸ್ಟೇಶನ್, ಸಿಬಿಟಿ, ಓಲ್ಡ್‌ಬಸ್ಟ್ಯಾಂಡ್, ರಿಗಲ್‌ಸರ್ಕಲ್, ಟಿಪ್ಪುಸರ್ಕಲ್, ಭಾರತಸ್ಕೂಲ್, ಗ್ರಾಸ್ ಮಾರ್ಕೆಟ್, ಕಾಮತಹೊಟೆಲ್, ಹೆಬ್ಬಳ್ಳಿ, ಶಿವಳ್ಳಿ, ಮಾರಡಗಿ, ಸೋಮಾಪುರ, ಗೋವನಕೊಪ್ಪ, ದೊಂಗಡಿಕೊಪ್ಪ ಗ್ರಾಮ, ನಿಗದಿ, ದೇವರ ಹುಬ್ಬಳ್ಳಿ, ಕಲಕೇರಿ, ಹಳ್ಳಿಗೇರಿ, ಮನಸೂರು ಮತ್ತು ಮನಗುಂಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಳ್ಳಿಗಳು, ರಾಯಾಪುರ ಗ್ರಾಮ, ರಾಯಾಪುರ ಆಶ್ರಯ ಕಾಲೋನಿ, ವಿಠ್ಠಲ ನಗರ, ಮಯೂರ ಆದಿತ್ಯ ರೆಸಾರ್ಟ, ರೇಷ್ಮೆ ಇಲಾಖೆ, ಇಸ್ಕಾನ್, ರಾಯಾಪುರ, ಬಿ.ಎಸ್.ಎನ್.ಎಲ್, ತಹಶೀಲ್ದಾರ್ ಕಚೇರಿ ಮತ್ತು 110ಕೆವ್ಹಿ ಲಕ್ಕಮ್ಮನಹಳ್ಳಿ ವಿದ್ಯುತ್ ವಿತರಣಾ ಕೇಂದ್ರ ಹಾಗೂ 33ಕೆವ್ಹಿ ರಾಯಾಪುರ ಮತ್ತು ವಿದ್ಯಾಗಿರಿ ವಿತರಣಾ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.



ಬಸವನಬಾಗೇವಾಡಿ ಪುರಸಭೆಯ ಸಭಾಂಗಣದಲ್ಲಿ ಮಂಗಳವಾರ ಪೌರ ಕಾರ್ಮಿಕರ ದಿನಾಚರಣೆಯ ಅಂಗವಾಗಿ ರಾಷ್ಟ್ರೀಯ ಬಸವಸೈನ್ಯ ಸಂಘಟನೆದಿಂದ ಪೌರಕಾರ್ಮಿಕರಿಗೆ ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಉಪಾಧ್ಯಕ್ಷ ಅಶೋಕ ಹಾರಿವಾಳ, ರಾಷ್ಟ್ರೀಯ ಬಸವಸೈನ್ಯದ ಮುಖಂಡರಾದ ಶ್ರೀಕಾಂತ ಕೊಟ್ರಶೆಟ್ಟಿ, ಮನ್ನಾನ ಶಾಬಾದಿ, ತಾಲೂಕಾಧ್ಯಕ್ಷ ಸಂಜು ಬಿರಾದಾರ, ಪ್ರಶಾಂತ ಮುಂಜಾನೆ, ಸಂಗಮೇಶ ಜಾಲಗೇರಿ, ಜಟ್ಟಿಂಗರಾಯ ಮಾಲಗಾರ, ಸಂಗಮೇಶ ಬಿದರಿ ಬಸನಗೌಡ ಪಾಟೀಲ, ಪುರಸಭೆಯ ಮುಖ್ಯಾಧಿಕಾರಿ ವಿದ್ಯಾಧರ ಕಲಾದಗಿ ಇತರರು ಇದ್ದರು

# ನಾಳೆ ವಿದ್ಯುತ್ ವ್ಯತ್ಯಯ

**ಹಾವೇರಿ:** ಬಸವನಕಟ್ಟಿ 110 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸೆ.29 ರಂದು ತುರ್ತು ನಿರ್ವಹಣಾ ಕಾಮಗಾರಿ ಇರುವುದರಿಂದ ಅಂದು ಬಸವನಕಟ್ಟಿ 110 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಎಲ್ಲಾ 11 ಕೆವಿ ಫೀಡರ್‌ಗಳಲ್ಲಿ ಬೆಳಿಗ್ಗೆ 10 ರಿಂದ ಸಾಯಂಕಾಲ 06 ಗಂಟೆವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಈ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಗೆ ಬರುವ ಬಸವನಕಟ್ಟಿ, ಸೋಮನಕಟ್ಟಿ, ಮಾಚಾಪುರ, ಬೂದಗಟ್ಟಿ, ಕನವಳ್ಳಿ, ಹನುಮನಹಳ್ಳಿ, ಕಾಟೇನಹಳ್ಳಿ, ಅಗಡಿ, ತಿಮ್ಮೇನಹಳ್ಳಿ,ಮಾಳಾಪುರ, ಗಾಂಧಿಪುರ, ಜಾನಕೊಪ್ಪ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸಹಕರಿಸಬೇಕು ಎಂದು ಹೆಸ್ಕಾಂ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯ ದೂರಸಂವೇದಿ ಅನ್ವಯಿಕ ಕೇಂದ್ರಕ್ಕೆ ಭೇಟಿ ನೀಡಿದ ಬಾಹ್ಯಾಕಾಶ ನಿಯೋಗ

**ಕಾರವಾರ:** ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಲಿ– ಭಾರತ ಬಾಹ್ಯಾಕಾಶ, ಏರೋಸ್ಪೇಸ್ ಮತ್ತು ರಕ್ಷಣಾ ರೋಡ್ ಶೋ ಭಾಗವಾಗಿ ಇಟಾಲಿಯನ್ ಏರೋಸ್ಪೇಸ್ ಮತ್ತು ಬಾಹ್ಯಾಕಾಶ ನಿಯೋಗವು ಸೆಪ್ಟೆಂಬರ್ 24 ರಂದು ಭೇಟಿ ನೀಡಿತು.

ಭೇಟಿಯ ಸಮಯದಲ್ಲಿ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ.ರಾಜೇಶ್ ಎನ್.ಎಲ್. ಅವರು ಕೇಂದ್ರದ ಧ್ಯೇಯ, ಮುಂದುವರೆದ ಸಾಮರ್ಥ್ಯಗಳು, ಬೆಳೆ ಮೇಲ್ವಿಚಾರಣೆ ಹಾಗೂ ವಿಪತ್ತು ನಿರ್ವಹಣೆಯಿಂದ ನಗರ ಯೋಜನೆ ಮತ್ತು ನೈಸರ್ಗಿಕ ಸಂಪನ್ಮೂಲ ನಿರ್ವಹಣೆವರೆಗೆ ಬಾಹ್ಯಾಕಾಶ ಆಧಾರಿತ ಆಡಳಿತ ಮತ್ತು ಸುಸ್ಥಿರ ಅಭಿವೃದ್ಧಿಯಲ್ಲಿ ವೈವಿಧ್ಯಮಯ ಅನ್ವಯಿಕೆಗಳನ್ನು ಪ್ರಸ್ತುತಪಡಿಸಿದರು.

ಕಿಟ್ಸ್ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕ ಪ್ರಮೋದ್ ಎಲ್.ಪಾಟೀಲ್ ಅವರು, ಕರಡು ಕರ್ನಾಟಕ ಬಾಹ್ಯಾಕಾಶ ನೀತಿಯ ಪ್ರಮುಖ ಅಂಶಗಳನ್ನು ಹಂಚಿಕೊಂಡು ಜಾಗತಿಕ ಸಾಮರ್ಥ್ಯ ಕೇಂದ್ರಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರುವುದನ್ನು ತಿಳಿಸಿದರು.

ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಗ್ಲೋಬಲ್ ಇನ್ನೋವೇಶನ್ ಅಲೈಯನ್ಸ್ (ಜಿಐಎ) ಅಡಿಯಲ್ಲಿ ಸುಗಮಗೊಳಿಸಲಾದ ಈ ಕಾರ್ಯಕ್ರಮವು ಬಾಹ್ಯಾಕಾಶ ಅನ್ವಯಿಕೆಗಳು, ಏರೋಸ್ಪೇಸ್ ತಂತ್ರಜ್ಞಾನಗಳು ಮತ್ತು ರಕ್ಷಣಾ ನಾವೀನ್ಯತೆಗಳಲ್ಲಿ ಸಹಯೋಗವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.

ಜಂಟಿ ಸಂಶೋಧನೆ, ಶೈಕ್ಷಣಿಕ ಸಂಪರ್ಕಗಳು ಮತ್ತು ಪ್ರತಿಭಾ ವಿನಿಮಯದಲ್ಲಿ ಭಾರತ–ಇಟಲಿ ಸಹಕಾರವನ್ನು ವೃದ್ಧಿಸುವುದು, ಮಾರುಕಟ್ಟೆ ಪ್ರವೇಶ, ಸಹ ಅಭಿವೃದ್ಧಿ, ಕೈಗಾರಿಕೆ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಅವಕಾಶಗಳನ್ನು ತೆರೆಯುವುದು ಹಾಗೂ ಬಾಹ್ಯಾಕಾಶ, ನಾವೀನ್ಯತೆ ಮತ್ತು ತಂತ್ರಜ್ಞಾನ ನೇತೃತ್ವದ ಬೆಳವಣಿಗೆಯಲ್ಲಿ ಕರ್ನಾಟಕವನ್ನು ಇಟಲಿಗೆ ಕಾರ್ಯತಂತ್ರದ ಪಾಲುದಾರರನ್ನಾಗಿ ಸ್ಥಾನೀಕರಿಸುವುದಕ್ಕೆ ಸಂಬಂಧಿಸಿದ ಪ್ರಮುಖ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಯಿತು.

ಈ ಭೇಟಿಯು ಭಾರತ – ಇಟಲಿಯ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ಒಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುವುದಲ್ಲದೇ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ನಾವೀನ್ಯತೆಯಲ್ಲಿ ಜಾಗತಿಕ ಕೇಂದ್ರವಾಗಿ ಕರ್ನಾಟಕದ ಪಾತ್ರವನ್ನು ಬಲಪಡಿಸಲಿದೆ. ನಿಯೋಗದಲ್ಲಿ ಇಟಾಲಿಯನ್ ಬಾಹ್ಯಾಕಾಶ ಸಂಸ್ಥೆಯ ಉಪನಿರ್ದೇಶಕಿ ಮಾರಿಯಾ ಚಿಯಾರಾ ನೊಟೊ, ನವದೆಹಲಿಯ ಇಟಲಿಯ ವ್ಯಾಪಾರ ಆಯುಕ್ತರಾದ ಆಂಟೋನಿಯೆಟ್ಟಾ ಬಕ್ಕನಾರಿ, ಬೆಂಗಳೂರಿನಲ್ಲಿನ ಇಟಲಿಯ ಕಾನ್ಸುಲ್ ಜನರಲ್ ಜಿಯಾಂಡೊಮೆನಿಕೊ ಮಿಲಾನೊ ಹಾಗೂ ಇಟಲಿಯ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ಕ್ಷೇತ್ರದ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿದ್ದವು ಎಂದು ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕ ಡಾ.ರಾಜೇಶ್ ಎನ್.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ವಾಲ್ಮೀಕಿ ಜಯಂತಿಗೆ ಅಗತ್ಯ ಸಿದ್ಧತೆ ಕೈಗೊಳ್ಳಿ

**ಕೊಪ್ಪಳ:** ಅಕ್ಟೋಬರ್ 7ರಂದು ಜಿಲ್ಲಾ ಕೇಂದ್ರದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಸೂಚನೆ ನೀಡಿದರು.



ಅವರು ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ವಾಲ್ಮೀಕಿ ಜಯಂತಿಯ ಜಿಲ್ಲಾ ಮಟ್ಟದ ಕಾರ್ಯಕ್ರಮವು ಅ. 7 ರಂದು ಬೆಳಿಗ್ಗೆ 10.30 ಗಂಟೆಗೆ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿ ವೇದಿಕೆ ಕಾರ್ಯಕ್ರಮ, ಪೂಜೆ, ಶ್ರೀ ಮಹರ್ಷಿ ವಾಲ್ಮೀಕಿ ರವರ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ಜರುಗಲಿವೆ. ಸಂಬಂಧಿಸಿದ ಅಧಿಕಾರಿಗಳು ಈ ಕುರಿತು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕು. ಸಮಾರಂಭಕ್ಕೂ ಪೂರ್ವದಲ್ಲಿ ಅಂದು ಬೆಳಿಗ್ಗೆ 8 ಗಂಟೆಗೆ ನಗರದ ಸಿರಸಪ್ಪಯ್ಯನ ಮಠದಿಂದ ಸಾಹಿತ್ಯ ಭವನದವರೆಗೆ ಶ್ರೀ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ ನಡೆಯಲಿದ್ದು, ಮೆರವಣಿಗೆ ಹೊರಡುವ ಮಾರ್ಗದಲ್ಲಿ ಮತ್ತು ಸಾಹಿತ್ಯ ಭವನದಲ್ಲಿ ನಗರಸಭೆಯಿಂದ ಸ್ವಚ್ಛತಾ ಕಾರ್ಯವಾಗಬೇಕು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಸಹ ಮಾಡಿಕೊಡಬೇಕು. ಮೆರವಣಿಗೆಗೆ ವಿಶೇಷ ಕಲಾತಂಡಗಳನ್ನು ಕರೆತಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳು, ಗ್ರಾಮ ಪಂಚಾಯತ್ ಮತ್ತು ಇತರೆ ಕಛೇರಿಗಳಲ್ಲಿ ಆಚರಿಸುವಂತಾಗಬೇಕು. ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ಇಲಾಖಾ ಮುಖ್ಯಸ್ಥರು ತಮ್ಮ ಸಿಬ್ಬಂದಿಗಳೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕು. ಜಯಂತಿ ಕಾರ್ಯಕ್ರಮದಲ್ಲಿ ಎಲ್ಲಾ ಸಮಾಜದ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಹೇಳಿದರು.

ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಮಾತನಾಡಿ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಅರ್ಥಪೂರ್ಣವಾಗಿ ಆಗಬೇಕು. ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಮತ್ತು ಸಮಾಜದ ಅಭಿವೃದ್ಧಿಗಾಗಿ ಶ್ರಮಿಸಿದ ಹಿರಿಯರನ್ನು ಗುರುತಿಸಿ, ಗೌರವಿಸಬೇಕು. ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷಿಮೂರ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಂ ಶೆಟ್ಟೆಪ್ಪನವರ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ್, ವಾಲ್ಮೀಕಿ ಸಮಾಜದ ಮುಖಂಡರಾದ ಶಂಕರಗೌಡ ಪಾಟೀಲ್, ಸುರೇಶ ಡೊಣ್ಣಿ, ಕೊಟೇಶ್ ತಳವಾರ, ವೆಂಕಟೇಶ್ ಪೂಜಾರ, ಲಕ್ಷ್ಮಣ ಚೌಡ್ಕಿ, ಶ್ರೀನಿವಾಸ ಗಿಣಿಗೇರಾ, ಶರಣಪ್ಪ ನಾಯಕ, ಗಿರಿಯಪ್ಪ ನಿಂಗಪ್ಪ ಡಂಬ್ರಳ್ಳಿ ಸೇರಿದಂತೆ ಮತ್ತಿತರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# 156ನೇ ಗಾಂಧೀಜಿ ಜಯಂತಿ ಅರ್ಥಪೂರ್ಣವಾಗಿ ಆಚರಣೆ

**ಧಾರವಾಡ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಅಕ್ಟೋಬರ 2 ರಂದು ಬೆಳಿಗ್ಗೆ 9 ಗಂಟೆಗೆ 156 ನೇ ಗಾಂಧಿ ಜಯಂತಿಯನ್ನು ಧಾರವಾಡ ಹೊಸ ಬಸ್ ನಿಲ್ದಾಣ ಹತ್ತಿರದ ನೂತನವಾಗಿ ನಿರ್ಮಿಸಿರುವ ಗಾಂಧಿ ಭವನದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.



ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಭವನದಲ್ಲಿ ಜರುಗಿದ ಮಹಾತ್ಮ ಗಾಂಧೀಜಿಯವರ 156 ನೇ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಗಾಂಧಿ ಜಯಂತಿ ಕಾರ್ಯಕ್ರಮವನ್ನು ನೂತನ ಗಾಂಧಿ ಭವನದಲ್ಲಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಮಹಾನಗರ ಪಾಲಿಕೆ ಅಧಿಕಾರಿಗಳು ಗಾಂಧಿ ಭವನ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿರುವ ಗಾಂಧಿ ಪ್ರತಿಮೆ ಹಾಗೂ ಸುತ್ತಲಿನ ಪ್ರದೇಶದ ಸ್ವಚ್ಛತೆ ಕೈಗೊಳ್ಳಬೇಕು. ಗಾಂಧಿ ಜಯಂತಿಯಂದು ಗಾಂಧಿ ಭವನವನ್ನು ಅಲಂಕರಿಸಿ, ಆಕರ್ಷಣೀಯವಾಗಿ ಸಿದ್ಧಗೊಳಿಸಬೇಕೆಂದು ಪಾಲಿಕೆಯ ಅಧಿಕಾರಿಗಳಿಗೆ ಅವರು ಸೂಚಿಸಿದರು.

ರಜಾ ದಿನವಾಗಿರುವದರಿಂದ ಸಾರ್ವಜನಿಕರು, ವಿದ್ಯಾರ್ಥಿಗಳು, ಗಾಂಧಿ ವಿಚಾರ ಪ್ರಣಿತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮತ್ತು ಜಿಲ್ಲೆಯ ಜನಪ್ರತಿನಿಧಿಗಳು, ಅಧಿಕಾರಿಗಳು ಕ್ರಮವಹಿಸಬೇಕೆಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಗಾಂಧಿ ಪ್ರೀಯ ಭಜನೆಗಳು, ಸರ್ಮಧರ್ಮ ಪ್ರಾರ್ಥನೆ, ವಿಶೇಷ ಉಪನ್ಯಾಸವನ್ನು ಆಯೋಜಿಸಬೇಕು. ಈಗಾಗಲೇ ವಾರ್ತಾ ಇಲಾಖೆಯಿಂದ ಜಿಲ್ಲಾಮಟ್ಟದಲ್ಲಿ ಆಯೋಜಿಸಿದ್ದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಪ್ರೌಢಶಾಲಾ ವಿಭಾಗ, ಪಿಯು ಕಾಲೇಜು ವಿಭಾಗ ಮತ್ತು ಪದವಿ ಹಾಗೂ ಸ್ನಾತಕೊತ್ತರ ವಿಭಾಗದಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದಿರುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಣೆಗೆ ಕ್ರಮವಹಿಸಬೇಕೆಂದು ಅಧಿಕಾರಿಗಳಿಗೆ ಅವರು ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ನಿರ್ಮಿಸಿರುವ ನೂತನ ಗಾಂಧಿ ಭವನವನ್ನು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಗೆ ನಿಯಮಾನುಸಾರ ಹಸ್ತಾಂತರಿಸಲಾಗಿದ್ದು, ಗಾಂಧಿ ಭವನದಲ್ಲಿ ಮಹಾತ್ಮ ಗಾಂಧೀಜಿಯವರ ವಿಚಾರಧಾರೆಗಳನ್ನು, ತತ್ವ ಸಿದ್ಧಾಂತಗಳನ್ನು ಮತ್ತು ಅವರ ಜೀವನ ಚರಿತ್ರೆಯನ್ನು ಪ್ರತಿಬಿಂಬಿಸುವ ಹಾಗೂ ಮಾರ್ಗದರ್ಶನ ಮಾಡುವ ಕಾರ್ಯಕ್ರಮಗಳನ್ನು ಗಾಂಧೀಜಿ ಪ್ರಣಿತ ಸಂಘ–ಸಂಸ್ಥೆಗಳ, ಶಾಲಾ ಕಾಲೇಜುಗಳ ಸಹಯೋಗದಲ್ಲಿ ಆಯೋಜಿಸಲು ಸೂಚಿಸಲಾಗಿದೆ. ಗಾಂಧೀಜಿಯವರ ಕುರಿತ ಕಾರ್ಯಕ್ರಮಗಳಿಗೆ ಗಾಂಧಿ ಭವನದ ಸಭಾಭವನವನ್ನು ಒದಗಿಸಲು ತಿಳಿಸಲಾಗಿದೆ. ಆಸಕ್ತರು, ಗಾಂಧಿ ವಿಚಾರಧಾರೆಗಳನ್ನು ಪ್ರಚುರಪಡಿಸುವ ಸಂಘಟನೆಗಳು, ಸಂಘ–ಸಂಸ್ಥೆಗಳು ತಮ್ಮ ಕಾರ್ಯಕ್ರಮಗಳನ್ನು ಆಯೋಜಿಸಲು ಅವಕಾಶ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಸುರೇಶ ಹಿರೇಮಠ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಭೆಯಲ್ಲಿ ಗಾಂಧಿ ಶಾಂತಿ ಪ್ರತಿಷ್ಠಾನದ ಅಧ್ಯಕ್ಷ ಡಾ. ಸಂಜೀವ ಕುಲಕರ್ಣಿ, ಮಹಾನಗರ ಪಾಲಿಕೆಯ ವಲಯ ಸಹಾಯಕ ಆಯುಕ್ತ ಅರವಿಂದ ಜಮಖಂಡಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಕಾನಕೊಂಕರ, ಶಾಲಾ ಮತ್ತು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ, ಶಿಕ್ಷಣಾಧಿಕಾರಿ ಪ್ರಭಯ್ಯ ಚಿಕ್ಕಮಠ, ಲೋಕೊಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ಎಚ್. ವಿಜಯಕುಮಾರ, ಧಾರವಾಡ ತಹಶೀಲ್ದಾರ ಕಚೇರಿಯ ಕಂದಾಯ ನಿರೀಕ್ಷಕ ಗುರು ಸುಣಗಾರ ಮತ್ತು ಇತರ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ಸೂರ್ಯಕಾಂತಿ ಖರೀದಿ ಕೇಂದ್ರ ಆರಂಭ: ನೋಂದಣಿಗೆ ರೈತರಲ್ಲಿ ಮನವಿ

**ಕೊಪ್ಪಳ:** 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಸೂರ್ಯಕಾಂತಿಯನ್ನು ಪ್ರತಿ ಕ್ವಿಂಟಾಲ್‌ಗೆ ರೂ.7721/– ರಂತೆ ಗರಿಷ್ಠ 15,650 ಮೆಟ್ರಿಕ್ ಟನ್ ಎಫ್.ಎ.ಕ್ಯೂ. ಗುಣಮಟ್ಟದ ಸೂರ್ಯಕಾಂತಿಯನ್ನು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಕೊಪ್ಪಳ ಜಿಲ್ಲೆಯ ರೈತರಿಂದ ಖರೀದಿಸುವ ಕುರಿತು ಸೆಪ್ಟೆಂಬರ್ 26 ರಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸಭೆಯಲ್ಲಿ ಸೂರ್ಯಕಾಂತಿ ಖರೀದಿ ನೋಂದಣಿ ಕೇಂದ್ರಗಳನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿದೆ.

ಖರೀದಿ ಕೇಂದ್ರಗಳಾದ ಅಳವಂಡಿಯ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ಅಳವಂಡಿ, ಕುಕನೂರಿನ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ಮಂಡಲಗೇರಿ, ಯಲಬುರ್ಗಾದ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ಬೇವೂರು ಹಾಗೂ ನಾಗನಕಲ್‌ನ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ನಾಗನಕಲ್‌ನ ನೋಂದಣಿ ಕೇಂದ್ರದಲ್ಲಿ ರೈತರು ನೋಂದಣಿ ಮಾಡಿಕೊಳ್ಳಬಹುದು.

ಖರೀದಿ ಕೇಂದ್ರಗಳ ವ್ಯವಸ್ಥಿತ ನಿರ್ವಹಣೆಗೆ ಕೊಪ್ಪಳ ತಾಲ್ಲೂಕಿನ ಅಳವಂಡಿ ಖರೀದಿ ಕೇಂದ್ರದ ನೋಡಲ್ ಅಧಿಕಾರಿಗಳಾಗಿ ಕೊಪ್ಪಳ ಎಪಿಎಂಸಿ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ, ಮೊ.ಸಂ: 9902224089, ಕುಕನೂರು ಹಾಗೂ ಯಲಬುರ್ಗಾ ತಾಲ್ಲೂಕಿನ ಮಂಡಲಗೇರಿ ಹಾಗೂ ಬೇವೂರು ಖರೀದಿ ಕೇಂದ್ರಗಳ ನೋಡಲ್ ಅಧಿಕಾರಿಗಳಾಗಿ ಯಲಬುರ್ಗಾ ಎಪಿಎಂಸಿಯ ಕಾರ್ಯದರ್ಶಿ ಗುರುಪ್ರಸಾದ ಗುಡಿ, ಮೊ.ಸಂ: 9972054874, ಕಾರಟಗಿ ತಾಲ್ಲೂಕಿನ ನಾಗನಕಲ್ ಖರೀದಿ ಕೇಂದ್ರದ ನೋಡಲ್ ಅಧಿಕಾರಿಗಳಾಗಿ ಕಾರಟಗಿ ಎಪಿಎಂಸಿಯ ಸಹಾಯಕ ಕಾರ್ಯದರ್ಶಿ ಹರೀಶ ಪತ್ತಾರ, ಮೊ.ಸಂ: 9060893320 ಇವರನ್ನು ನಿಯೋಜಿಸಲಾಗಿದೆ.

ಪ್ರತಿ ಎಕರೆಗೆ 4 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್‌ನಂತೆ ಸೂರ್ಯಕಾಂತಿ ಉತ್ಪನ್ನವನ್ನು ಖರೀದಿಸಲಾಗುತ್ತದೆ. ಎಫ್.ಎ.ಕ್ಯೂ. ಗುಣಮಟ್ಟದ ಸೂರ್ಯಕಾಂತಿಯನ್ನು ಮಾತ್ರ ಖರೀದಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟ ನಿಯಮಿತ ರಾಯಚೂರು, ವಿಭಾಗೀಯ ಕಛೇರಿ, ಕೊಪ್ಪಳ ಮೊ.ಸಂ: 9591812142 ಇವರನ್ನು ಸಂಪರ್ಕಿಸಬಹುದು ಎಂದು ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ವಿಜಯಪುರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು 2025–26ನೇ ಸಾಲಿನಲ್ಲಿ ಸೇವಾಸಿಂಧು, ಗ್ರಾಮಒನ್, ಕರ್ನಾಟಕ ಒನ್, ಬೆಂಗಳೂರು ಒನ್, ಸಿಟಿಜೆನ್ಸ್ ಫೋರ್ಟಲ್ ಆನ್‌ಲೈನ್ ತಂತ್ರಾಂಶದಡಿ ಅಳವಡಿಸಲಾಗಿದ್ದು, ಈ ಯೋಜನೆಯಡಿ ಸೌಲಭ್ಯ ಪಡೆಯಲು (https://sevasindhu. karnataka.gov.in/sevasindhu/Kannada) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಅ.15ರವರೆಗೆ ವಿಸ್ತರಿಸಲಾಗಿದೆ. ಫಲಾನುಭವಿಗಳು ಆನಲೈನ್ ಮೂಲಕ ಅರ್ಜಿ ಸಲ್ಲಿಸಿದ ಹಾರ್ಡಪ್ರತಿ ಅಗತ್ಯ ದಾಖಲೆ ಸಹಿತ ಜಿಲ್ಲೆಯ ವಿವಿದ್ದೊದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬೇಕು.

ಹಾರ್ಡ ಪ್ರತಿ ಸಲ್ಲಿಸದೇ ಇರುವ ಅರ್ಜಿ ತಿರಸ್ಕರಿಸಲಾಗುವುದು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಜಿಲ್ಲಾ ಸಂಯೋಜಕರಾದ ಪ್ರತಿಭಾ ಮೊ:9606151149, ವಿಜಯಪುರ ತಾಲೂಕಿನ ರವಿ ರಾಠೋಡ ಮೊ: 9035553337, ಸಿಂದಗಿ ತಾಲೂಕಿನ ಮುತ್ತುರಾಜ ಸಾತಿಹಾಳ ಮೊ: 9980019635, ಬಸವನಬಾಗೇವಾಡಿ ತಾಲೂಕಿನ ಶಿವಲೀಲಾ ಬಿರಾದಾರ ಮೊ: 8722135660,ಇಂಡಿ ತಾಲೂಕಿನ ಪರಶುರಾಮ ಭೋಸಲೆ ಮೊ:992441464 ಹಾಗೂ ಮುದ್ದೇಬಿಹಾಳ ತಾಲೂಕಿನ ಎಸ್.ಕೆ.ಘಾಟಿ ಮೊ: 9740682979 ಸಂಖ್ಯೆಗೆ ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಮೀನು ಮಂಜೂರು: ಆಕ್ಷೇಪಣೆ ಆಹ್ವಾನ

**ವಿಜಯಪುರ:** ವಿಜಯಪುರ ತಾಲ್ಲೂಕಿನ ಭೂತನಾಳ ಗ್ರಾಮದಲ್ಲಿನ ರಿಸನಂ.201ರಲ್ಲಿ 137 ಎಕರೆ 22ಗುಂಟೆ ಜಮೀನನ್ನು ಅರಣ್ಯ ಇಲಾಖೆಗೆ ಮಂಜೂರಿಸಲು ಉದ್ದೇಶಿಸಲಾಗಿದ್ದು, ಈ ಕುರಿತಾದ ಆಕ್ಷೇಪಣೆಗಳಿದ್ದಲ್ಲಿ ಈ ಅಧಿಸೂಚನೆಯ 30 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಆಕ್ಷೇಪಣೆ ಆಹ್ವಾನ

**ವಿಜಯಪುರ:** ವಿಜಯಪುರ ತಾಲ್ಲೂಕಿನ ಭೂತನಾಳ ಗ್ರಾಮದಲ್ಲಿನ ರಿಸನಂ.224ರಲ್ಲಿ 17 ಎಕರೆ ಪೈಕಿ 3 ಎಕರೆ 39ಗುಂಟೆ ಜಮೀನು ಹಾಗೂ ರಿಸನಂ.224ಅ ಕ್ಷೇತ್ರ5 ಹೀಗೆ ಒಟ್ಟು 8 ಎಕರೆ 39 ಗುಂಟೆ ಜಮೀನನ್ನು ಅರಣ್ಯ ಇಲಾಖೆಗೆ ಮಂಜೂರಿಸಲು ಉದ್ದೇಶಿಸಲಾಗಿದ್ದು, ಈ ಕುರಿತಾದ ಆಕ್ಷೇಪಣೆಗಳಿದ್ದಲ್ಲಿ ಈ ಅಧಿಸೂಚನೆಯ 30 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಆಕ್ಷೇಪಣೆ ಆಹ್ವಾನ

**ವಿಜಯಪುರ:** ವಿಜಯಪುರ ತಾಲ್ಲೂಕಿನ ಬುತನಾಳ ಗ್ರಾಮದಲ್ಲಿನ ರಿಸನಂ.201 ಕ್ಷೇತ್ರದಲ್ಲಿ 216 ಎಕರೆ 33ಗುಂಟೆ ಪೈಕಿ 27 ಎಕರೆ 07ಗುಂಟೆ ಜಮೀನುನ್ನು ಅರಣ್ಯ ಇಲಾಖೆಗೆ ಮಂಜೂರಿಸಲು ಉದ್ದೇಶಿಸಲಾಗಿದ್ದು, ಈ ಕುರಿತಾದ ಆಕ್ಷೇಪಣೆಗಳಿದ್ದಲ್ಲಿ ಈ ಅಧಿಸೂಚನೆಯ 30 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಸೆ.29ರಂದು ಇನ್ಕ್ಯುಬೇಷನ್ ಕಾರ್ಯಗಾರ

**ವಿಜಯಪುರ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ವಿಜಯಪುರ ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಬಿ.ಎಲ್.ಡಿ.ಇ. ಸಂಸ್ಥೆಯ ವಚನ ಪಿತಾಮಹ ಡಾ. ಫ.ಗು.ಹಳಕಟ್ಟಿ ಕಾಲೇಜ್ ಆಫ್ ಇಂಜಿನಿಯರಿಂಗ್ ಹಾಗೂ ಟೆಕ್ನಾಲಜಿ ವಿಜಯಪುರ ಇವರ ಸಹಯೋಗದಲ್ಲಿ "ಎಂ. ಎಸ್. ಎಂ.ಇ. ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು" (RAMP) ಯೋಜನೆಯಡಿ ಇನ್ಯುಬೇಷನ್ ಕುರಿತು ಒಂದು ದಿನದ ಕಾರ್ಯಗಾರವನ್ನು ಸೆಪ್ಟೆಂಬರ್ 29ರ ಬೆಳಿಗ್ಗೆ 10.00 ಗಂಟೆಗೆ ಬಿ.ಎಲ್.ಡಿ.ಇ. ಸಂಸ್ಥೆಯ ವಚನ ಪಿತಾಮಹ ಡಾ. ಫ. ಗು.ಹಳಕಟ್ಟಿ ಕಾಲೇಜ್ ಆಫ್ ಇಂಜಿನಿಯರಿಂಗ್ ಹಾಗೂ ಟೆಕ್ನಾಲಜಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಬಿಎಲ್‌ಡಿ ಇಎಸಿಇಟಿಯ ಪ್ರಾಚಾರ್ಯರಾದ ಡಾ.ಮಂಜುನಾಥ ಪಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದು, ಅತಿಥಿಗಳಾಗಿ ಕೆಎಸ್‌ಎಫ್‌ಸಿ ಶಾಖಾ ವ್ಯವಸ್ಥಾಪಕರಾದ ಆರ್.ಶ್ರೀಪಾದ, ಅಗ್ರಣೀಯ ಬ್ಯಾಂಕ್ ಮ್ಯಾನೇಜರ್ ಸಿದ್ದಯ ಬಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಜಿ.ಎಸ್.ದೇಸಾಯಿ, ಸಿಡಾಕ್ ಜಂಟಿ ನಿರ್ದೇಶಕರಾದ ಸುಪ್ರೀತಾ ಬಳ್ಳಾರಿ ಅವರು ಭಾಗವಹಿಸಲಿದ್ದಾರೆ.

### ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಕಾರ್ಯಾಗಾರ

# ಕೇಂದ್ರ ಸರ್ಕಾರದ ಡಿಜಿಟಲ್ ಉಪಕ್ರಮಗಳಿಂದ ಜನರಿಗೆ ಪ್ರಯೋಜನ



**ವಿಜಯಪುರ:** ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು, ಕೇಂದ್ರ ಸಂವಹನ ಇಲಾಖೆ, ರಾಷ್ಟ್ರೀಯ ಉಷ್ಣ ವಿದ್ಯುತ್ ನಿಗಮ (ಎನ್‌ಟಿಪಿಸಿ) ಕೂಡಗಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ (ರಿ), ಕರ್ನಾಟಕ ಕಾರ್ಯನಿರತ ಸಂಪಾದಕರ ಸಂಘ (ರಿ), ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ (ರಿ) ಮತ್ತು ಕರ್ನಾಟಕ ಸಂಪಾದಕೀಯರ ಸಂಘ (ರಿ), ವಿಜಯಪುರ ಇವರ ಸಂಯುಕ್ತಾಶ್ರಯದಲ್ಲಿ ವಿಜಯಪುರದಲ್ಲಿಂದು ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ "ವಾರ್ತಾಲಾಪ" ಕಾರ್ಯಾಗಾರ ಆಯೋಜಿಸಲಾಗಿತ್ತು.

ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಲೋಕಸಭಾ ಸದಸ್ಯರಾದ ರಮೇಶ ಜಿಂ. ಜಿಗಜಿಣಗಿ ಅವರು, ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ಮಾಧ್ಯಮದವರಿಗೆ ತಿಳಿಸಲು 'ವಾರ್ತಾಲಾಪ' ಕಾರ್ಯಾಗಾರ ಹಮ್ಮಿಕೊಂಡಿರುವುದು ಸಂತಸದ ಸಂಗತಿ. ಕೇಂದ್ರ ಸರ್ಕಾರದ ಅನೇಕ ಯೋಜನೆಗಳಿಂದ ಜನರು ಫಲಾನುಭವಿಗಳಾಗುತ್ತಿದ್ದಾರೆ. ಡಿಜಿಟಲೀಕರಣದಿಂದ ಯೋಜನೆಗಳ ಲಾಭ ಸುಲಭವಾಗಿ ಎಲ್ಲರಿಗೂ ದೊರೆಯುವಂತಾಗಿದೆ. ಆನ್ ಲೈನ್ ಹಣಕಾಸು ವಹಿವಾಟು ನಡೆಸುವ ಅಪ್ಲಿಕೇಶನ್ ಗಳನ್ನು ಜನರು ವ್ಯಾಪಕವಾಗಿ ಬಳಸುತ್ತಿರುವುದು ಅಭಿವೃದ್ಧಿಯ ಸಂಕೇತ ಎಂದು ಹೇಳಿದರು.

ದೇಶದಲ್ಲಿ ಯಾರೂ ಸಹ ಹಸಿವಿನಿಂದ ಬಳಲಬಾರದು ಎನ್ನುವ ದೂರದೃಷ್ಟಿಯನ್ನು ಹೊಂದಲಾಗಿದ್ದು, ಇದುವರೆಗೂ ಸುಮಾರು 81 ಕೋಟಿಗೂ ಅಧಿಕ ಮಂದಿಗೆ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ ಉಚಿತವಾಗಿ ಪಡಿತರ ವಿತರಿಸಲಾಗುತ್ತಿದೆ ಎಂದು ತಿಳಿಸಿದರು. ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕೇಂದ್ರ ವಾರ್ತಾ ಶಾಖೆಯು ಪತ್ರಕರ್ತರಿಗಾಗಿ ವಾರ್ತಾಲಾಪವನ್ನು ಆಯೋಜಿಸಿರುವುದು ಅಭಿನಂದನಾರ್ಹ. ಇಂತಹ ಕಾರ್ಯಕ್ರಮಗಳಿಂದ ಎಲ್ಲರೂ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದರು.

ಕೇಂದ್ರ ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕ ಎಸ್.ಜಿ. ರವೀಂದ್ರ ಅವರು ಮಾತನಾಡಿ, ಪತ್ರಕರ್ತರಿಗೆ ಕೇಂದ್ರ ಸರ್ಕಾರದ ಯೋಜನೆಗಳ ಅರಿವು ಮೂಡಿಸುವುದು 'ವಾರ್ತಾಲಾಪ' ಕಾರ್ಯಾಗಾರದ ಮುಖ್ಯ ಉದ್ದೇಶ ಎಂದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜನಪರ ಯೋಜನೆಗಳು ಜಿಲ್ಲೆ, ತಾಲೂಕು, ಗ್ರಾಮಮಟ್ಟದಲ್ಲಿ ಅನುಷ್ಠಾನ ಮಾಡುವಲ್ಲಿ ಮಾಧ್ಯಮದ ಪಾತ್ರ ಬಹಳ ಮುಖ್ಯವಾಗಿದೆ. ಸ್ವಚ್ಛತಾ ಹೀ ಸೇವಾ ಅಭಿಯಾನದ ಭಾಗವಾಗಿ ಸೆಪ್ಟೆಂಬರ್ 25ರಂದು ಒಂದೇ ದಿನ 5 ಕೋಟಿ ಜನ ಭಾಗಿಯಾಗಿದ್ದು, 3 ಲಕ್ಷ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛ ಮಾಡಲಾಗಿದೆ. ಕೇಂದ್ರ ಸರ್ಕಾರದಿಂದ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ, ಸ್ವಸ್ಥ ನಾರಿ ಸಶಕ್ತ ಪರಿವಾರ, ಪೋಷಣ ಅಭಿಯಾನಗಳು ನಡೆಯುತ್ತಿವೆ. ಅಲ್ಪಸಂಖ್ಯಾತರು ಹೆಚ್ಚಾಗಿ ಇರುವ ಈ ಜಿಲ್ಲೆಯಲ್ಲಿ ಅವರಿಗಾಗಿ ಅನೇಕ ಯೋಜನೆಗಳಿವೆ. ಅದನ್ನು ಜನರಿಗೆ ತಲುಪಿಸುವಲ್ಲಿ ಮಾಧ್ಯಮದವರ ಪಾತ್ರ ಹಿರಿದು ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ. ಆನಂದ್ ಕೆ, ಉತ್ತಮ ಸಮಾಜ ನಿರ್ಮಾಣದಲ್ಲಿ ಆಡಳಿತ ಹಾಗೂ ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾಗಿರುವ ಮಾಧ್ಯಮಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿದಾಗ ಸರ್ಕಾರದ ಯೋಜನೆಗಳನ್ನು ಮತ್ತಷ್ಟು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಮಾಧ್ಯಮಗಳು ಸುದ್ದಿ ಬಿತ್ತರಿಸುವ ಮುನ್ನ ಸಾಮಾಜಿಕ ಜವಾಬ್ದಾರಿ ಪಾಲಿಸಬೇಕು. ಸೂಕ್ಷ್ಮ ಘಟನೆಗಳ ವರದಿಗಾರಿಕೆಯ ವೇಳೆ ಕಾನೂನಿನ ಅರಿವಿನೊಂದಿಗೆ ವರದಿ ಮಾಡಿದಾಗ ಸಂಭವಿಸಬಹುದಾದ ಅನಾಹುತಗಳನ್ನು ತಡೆಗಟ್ಟಲು ಸಾಧ್ಯ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್, ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಲಾಗಿದೆ. ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿರಿಸಿಕೊಳ್ಳುವಲ್ಲಿ ಪ್ರತಿಯೊಬ್ಬರ ಜವಾಬ್ದಾರಿ ಗಣನೀಯವಾಗಿದೆ. ಸಮಾಜದಲ್ಲಿ ಸ್ವಚ್ಛತೆಯ ಕುರಿತು ಅರಿವು ಮೂಡಿದಾಗ ಮಾತ್ರ ನಾವು ಬದಲಾವಣೆ ಕಾಣಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ 'ಜಿ.ಎಸ್.ಟಿ. 2.0' ಕುರಿತು ಸಿಜಿಎಸ್‌ಟಿ ವಿಜಯಪುರ ವಿಭಾಗದ ಸಹಾಯಕ ಆಯುಕ್ತರಾದ ಶ್ರೀ ವಾಯ್.ಸಿ. ಪೂಜಾರಿ, 'ಸ್ವಸ್ಥ ನಾರಿ ಸಶಕ್ತ ಪರಿವಾರ' ಅಭಿಯಾನ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಯೋಜನೆಗಳ ಅನುಷ್ಠಾನ ಕುರಿತು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಸಂಪತ್ ಕುಮಾರ್ ಗುಣಾರಿ, 'ಕೃಷಿ ತೋಟಗಾರಿಕಾ ವಲಯದ ಯೋಜನೆಗಳ ಅನುಷ್ಠಾನ' ಕುರಿತು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀ ಶಿವನಗೌಡ ಎಸ್. ಪಾಟೀಲ್, 'ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ' ಕುರಿತು ಕೆನರಾ ಬ್ಯಾಂಕ್ ಮತ್ತು ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕರಾದ ಬಿ. ಸಿದ್ದಯ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಗಳ ಅನುಷ್ಠಾನ ಹಾಗೂ ಪೋಷಣಾ ಅಭಿಯಾನದ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಸಬಲೀಕರಣ ಘಟಕದ ಜಿಲ್ಲಾ ಸಂಯೋಜಕರಾದ ಭಾರತಿ ಪಾಟೀಲ್, ಹೃದಯ ರೋಗಗಳ ಕುರಿತು ಹೃದ್ರೋಗ ತಜ್ಞರಾದ ಡಾ. ಶಂಕರಗೌಡ ಪಾಟೀಲ ಅವರು ಮಾಹಿತಿ ನೀಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಅಮರೇಶ ದೊಡಮನಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷರಾದ ಪ್ರಕಾಶ್ ಜಿ. ಬೆಣ್ಣೂರ, ಕರ್ನಾಟಕ ಕಾರ್ಯನಿರತ ಸಂಪಾದಕರ ಸಂಘದ ಅಧ್ಯಕ್ಷರಾದ ಈರ್ಫಾನ್ ಶೇಖ್, ಪತ್ರಕರ್ತರ ಧ್ವನಿ ಸಂಘದ ಕರ್ನಾಟಕ ಕಾರ್ಯನಿರತ ಅಧ್ಯಕ್ಷರಾದ ಗುರುರಾಜ್ ಹೂಗಾರ್, ಕರ್ನಾಟಕ ರಾಜ್ಯ ಮಹಿಳಾ ಸಂಪಾದಕಿಯರ ಸಂಘದ ಅಧ್ಯಕ್ಷರಾದರಶ್ಮಿ ಪಾಟೀಲ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



## ಬಸವ ಸಂಘಟನೆಗಳಿಂದ ಸಚಿವ ಜಾರಕಿಹೊಳಿಗೆ ಸನ್ಮಾನ

**ಗೋಕಾಕ:** ಐತಿಹಾಸಿಕ ಕ್ಷೇತ್ರ ಬಸವಕಲ್ಯಾಣದಲ್ಲಿ ಅಕ್ಟೋಬರ್ 10 ರಿಂದ ಮೂರು ದಿನಗಳ ಕಾಲ ನಡೆಯಲಿರುವ 24ನೇ ಕಲ್ಯಾಣ ಪರ್ವ ಉತ್ಸವದ ಬೃಹತ್ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಲು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಕೂಡಲ ಸಂಗಮ ಧರ್ಮ ಪೀಠದ ಶ್ರೀ ಬಸವ ಪ್ರಕಾಶ ಸ್ವಾಮೀಜಿ ನೇತೃತ್ವದಲ್ಲಿ ಲಿಂಗಾಯತ ಸಮಾಜದ ಮುಖಂಡರು ಆಹ್ವಾನಿಸಿದರು.

ನಗರದ ಹಿಲ್ ಗಾರ್ಡನ್ ಕಚೇರಿಯಲ್ಲಿ ಬಸವ ಧರ್ಮ ಪೀಠ, ರಾಷ್ಟ್ರೀಯ ಬಸವದಳ, ಲಿಂಗಾಯತ ಧರ್ಮ ಮಹಾ ಸಭೆ, ಬಸವ ಪರ ಸಂಘಟನೆಗ ಮುಖಂಡರು ಬಸವಕಲ್ಯಾಣದಲ್ಲಿ ಅ. 10 ರಿಂದ ಮೂರು ದಿನಗಳ ಕಾಲ ನಡೆಯಲಿರುವ 24ನೇ ಕಲ್ಯಾಣ ಪರ್ವ ಉತ್ಸವ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಬೇಕೆಂದು ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಕೋರಿದರು.

ಇನ್ನು ಇದೇ ವೇಳೆ ಮಾತನಾಡಿದ ಕೂಡಲ ಸಂಗಮ ಧರ್ಮ ಪೀಠದ ಶ್ರೀ ಬಸವ ಪ್ರಕಾಶ ಸ್ವಾಮೀಜಿ, ಬಸವಕಲ್ಯಾಣ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡ 108 ಅಡಿ ಗುರು ಬಸವಣ್ಣವರ ಭವ್ಯ ಮೂರ್ತಿಯನ್ನು ನೋಡಲು ಲೋಕೋಪಯೋಗಿ ಇಲಾಖೆ ವತಿಯಿಂದ 40 ಅಡಿ ಸೇತುವೆ, 3 ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಿ ಅನುಕೂಲ ಕಲ್ಪಿಸಿದ್ದಾರೆ. ಆದಕಾರಣ ಸಚಿವ ಸತೀಶ್ ಜಾರಕಿಹೊಳಿ ಅವರು ಮುಂದಿನ ದಿನಗಳಲ್ಲಿ ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಆಗಲೆಂದು ಹಾರೈಸಿದರು.

ಇದೇ ವೇಳೆ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಕೂಡಲ ಸಂಗಮ ಧರ್ಮ ಪೀಠದ ಶ್ರೀ ಬಸವ ಪ್ರಕಾಶ ಸ್ವಾಮೀಜಿ ನೇತೃತ್ವದಲ್ಲಿ ಬಸವ ಧರ್ಮ ಪೀಠ, ರಾಷ್ಟ್ರೀಯ ಬಸವದಳ, ಲಿಂಗಾಯತ ಧರ್ಮ ಮಹಾ ಸಭೆ, ಬಸವ ಪರ ಸಂಘಟನೆಗಳ ಮುಖಂಡರು ಸತ್ಕರಿಸಿದರು.

## ರೈತರಿಗೆ ಹಿಂಗಾರು ಹಂಗಾಮಿಗೆ ಬೀಜ ಪೂರೈಕೆ

**ನೇಸರಗಿ(ಬೈಲಹೊಂಗಲ):** ಮತ್ತಿಕೊಪ್ಪದ ಐಸಿಎ ಆರ್–ಕೆಎಲ್‌ಇ ಕೃಷಿ ವಿಜ್ಞಾನ ಕೇಂದ್ರದಲ್ಲಿ ದಿನಾಂಕ 26.09.2025 ರಂದು "ಬೀಜ ಮೇಳ" ವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೇಂದ್ರದ ಮುಖ್ಯಸ್ಥ ಡಾ. ಮಂಜುನಾಥ ಚೌರಡ್ಡಿಯವರು ಮಾತನಾಡಿದರು.

ಪ್ರಸ್ತುತ ಕೃಷಿ ವ್ಯವಸ್ಥೆಯಲ್ಲಿ ಗುಣಮಟ್ಟದ ಬೀಜಗಳ ಲಭ್ಯತೆಯಿಲ್ಲದ ಕಾರಣ ವ್ಯವಸಾಯದಲ್ಲಿ ಕಡಿಮೆ ಇಳುವರಿಯಿಂದಾಗಿ ರೈತರು ಆರ್ಥಿಕ ನಷ್ಟವನ್ನು ಅನುಭವಿಸುತ್ತಿದ್ದಾರೆ. ಗುಣಮಟ್ಟದ ಬಿತ್ತನೆ ಬೀಜಗಳ ಬಳಕೆಯಿಂದ ರೈತರು ಉತ್ತಮ ಇಳುವರಿ ಹಾಗೂ ಲಾಭವನ್ನು ಪಡೆಯಲು ಸಾಧ್ಯವಾಗುತ್ತದೆ. ಹಿಂಗಾರು ಹಂಗಾಮು ಪ್ರಾರಂಭವಾಗಿದ್ದು, ಗುಣಮಟ್ಟ ಬೀಜ ರೈತರಿಗೆ ದೊರೆಯುವಂತೆ ಮಾಡುವುದೇ ಕೆವಿಕೆಯ ಬೀಜ ಮೇಳದ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಕೃಷಿ ವಿಜ್ಞಾನ ಕೇಂದ್ರವು ಮುಂಚೂಣಿಯಲ್ಲಿದೆ. ಈ ದಿಸೆಯಲ್ಲಿ, ಕೃಷಿ ವಿಜ್ಞಾನ ಕೇಂದ್ರವು ಉತ್ಪಾದಿಸಿದ ಕಡಲೆ (ಬಿಜಿಡಿ–111–1), ಜೋಳ–(ಎಸ್‌ಪಿವಿ–2217), ಗೋದಿ (ಯುಎಎಸ್–334) ಬಿತ್ತನೆ ಬೀಜಗಳನ್ನು ಬೀಜ ಮೇಳದಲ್ಲಿ ಪೂರೈಸಲು ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಉದ್ಘಾಟನೆಯನ್ನು ಬೈಲಹೊಂಗಲ ಕೃಷಿಕ ಸಮಾಜದ ಉಪಾಧ್ಯಕ್ಷರಾದ ಶ್ರೀ ಶಿವಪುತ್ರಪ್ಪ ತಟವಟಿಯವರ ಇವರು ನೆರವೇರಿಸಿ ಮಾತನಾಡುತ್ತಾ, ಕೃಷಿ ವಿಜ್ಞಾನ ಕೇಂದ್ರವು ರೈತರಿಗೆ ಉತ್ತಮ ತಂತ್ರಜ್ಞಾನ ಮಾಹಿತಿಯನ್ನು ನೀಡುತ್ತಿದ್ದು ಅಲ್ಲಿರುವ ನುರಿತ ವಿಜ್ಞಾನಿಗಳ ಸಂಪರ್ಕ ಬೆಳೆಸಿ ತಂತ್ರಜ್ಞಾನದ ಅಳವಡಿಕೆಯೊಂದಿಗೆ ತಮ್ಮ ವ್ಯವಸಾಯದಲ್ಲಿ ಅವುಗಳನ್ನು ಬಳಸಿಕೊಂಡು ತಮ್ಮ ಬೇಸಾಯದ ಖರ್ಚು ಕಡಿಮೆ ಮಾಡಿ ಹೆಚ್ಚಿನ ಲಾಭವನ್ನು ಪಡೆದುಕೊಳ್ಳಲು ಕರೆ ನೀಡಿದರು.

ಕಾರ್ಯಕ್ರಮ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದ ಕೇಂದ್ರದ ಬೇಸಾಯ ತಜ್ಞ ಜಿ. ಬಿ. ವಿಶ್ವನಾಥ ಅವರು ಕೃಷಿ ವಿಜ್ಞಾನ ಕೇಂದ್ರವು ಉತ್ತಮ ಗುಣಮಟ್ಟದ ಬೀಜಗಳನ್ನು ರೈತರಿಗೆ ಪೂರೈಸುತ್ತ ಬಂದಿದ್ದು, ಹಿಂಗಾರು ಹಂಗಾಮಿನಲ್ಲಿ ಅಧಿಕ ಇಳುವರಿ ನೀಡುವ ತಳಿಗಳ ಬೀಜವನ್ನು ಪೂರೈಸುವ ಉದ್ದೇಶದಿಂದ ಬೀಜ ಮೇಳವನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕೇಂದ್ರದ ವಿಜ್ಞಾನಿ ಪ್ರವೀಣ ಯಡಹಳ್ಳಿ ಸ್ವಾಗತಿಸಿದರು ಹಾಗೂ ಎಸ್. ಎಸ್. ಪಾಟೀಲ ವಂದಿಸಿದರು.




## 'ಏಕ್‌ದಿನ್ ಏಕ್‌ಘಂಟಾ ಏಕ್‌ಸಾಥ್' ಶ್ರಮದಾನ ಕಾರ್ಯಕ್ರಮ

**ಗದಗ:** ಸಹಕಾರ ಇಲಾಖೆ ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ ಗದಗ ಕೆ.ಸಿ.ಸಿ. ಬ್ಯಾಂಕ್ ಲಿ ಧಾರವಾಡ, ಕೆ.ಎಂ.ಎಫ್ ಧಾರವಾಡ ಹಾಗೂ ಗದಗ ಜಿಲ್ಲೆಯ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ ಅಂತರಾಷ್ಟ್ರೀಯ ಸಹಕಾರ ವರ್ಷಾಚರಣೆ 2025 ರ ಅಂಗವಾಗಿ ಹಾಗೂ ಸ್ವಚ್ಛತಾ ಹಿ ಸೇವಾ–2025 ಹಾಗೂ ಸ್ವಚ್ಛತಾ ಮೇ ಸಹಕಾರ ಸಹಯೋಗದೊಂದಿಗೆ "ಏಕ್ ದಿನ್ ಏಕ್ ಘಂಟಾ ಏಕ್ ಸಾಥ್" ಶ್ರಮದಾನ ಕಾರ್ಯಕ್ರಮವು ಗುರುವಾರ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ ಗದಗ ಸಭಾಭವನದಲ್ಲಿ ಜರುಗಿತು.



ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿ ಬೆಂಗಳೂರು ಇದರ ನಿರ್ದೇಶಕರಾದ ಎಚ್. ಜಿ ಹಿರೇಗೌಡ್ರ ಅವರು ಮಾತನಾಡುತ್ತಾ ಭಾರತ ಸರ್ಕಾರದ ಮಹತ್ವಾಕಾಂಕ್ಷಯ ಯೋಜನೆ ಸ್ವಚ್ಛ ಭಾರತ ಅಭಿಯಾನ ಅಕ್ಟೋಬರ್ 2, 2014 ರಲ್ಲಿ ಪ್ರಾರಂಭಗೊಂಡಿರುತ್ತದೆ. ಆದರೆ ಕೇಂದ್ರ ಸರ್ಕಾರವು 2025ನೇ ವರ್ಷವನ್ನು ಅಂತರಾಷ್ಟ್ರೀಯ ಸಹಕಾರ ವರ್ಷ ಎಂದು ಘೋಷಿಸಿದ್ದು ಅದರ ಧ್ಯೇಯ ಸಹಕಾರ ಸಂಸ್ಥೆಗಳು ಉತ್ತಮ ಜಗತ್ತನ್ನು ನಿರ್ಮಿಸಬಲ್ಲವು "ಏಕ್‌ದಿನ್ ಏಕ್ ಘಂಟಾ ಏಕ್ ಸಾಥ್" ಶ್ರಮದಾನ ಕಾರ್ಯಕ್ರಮವನ್ನು ಇಂದು ಆಯೋಜಿಸಿದ್ದು ತಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ಸಂತಸ ತಂದಿದೆ ಕಾರಣ ಜಿಲ್ಲೆಯಲ್ಲಿರುವ ಎಲ್ಲಾ ಸಹಕಾರ ಸಂಘಗಳು ತಮ್ಮ ಸಂಸ್ಥೆಗಳು ಹಾಗೂ ಸರ್ಕಾರಿ ರಸ್ತೆ, ಆಟದ ಮೈದಾನ, ಉದ್ಯಾನವನ ಹಾಗೂ ಗ್ರಾಮ ಪಂಚಾಯತ ಈ ರೀತಿ ವಿವಿಧ ಸ್ಥಳಗಳಲ್ಲಿ ವರ್ಷಾಧ್ಯಂತ ಸ್ವಚ್ಛತೆಯನ್ನು ಕೈಗೊಳ್ಳಲು ಕರೆ ನೀಡಿದರು.

ಸಹಕಾರ ಸಂಘಗಳ ಉಪನಿಬಂಧಕಿಯರಾದ ಎಸ್. ಎಸ್ ಕಬಾಡೆ ಮಾತನಾಡಿ ಸಹಕಾರದಿಂದ ಸ್ವಚ್ಚತಾ ಅಭಿಯಾನ ಜೂನ್ ತಿಂಗಳಿನಲ್ಲಿ ಪ್ರಾರಂಭಗೊಂಡು ಏಕ್ ಪೇಡ ಮಾ ಕಿ ನಾಮಸೇ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮ ಕೂಡಾ ಜರುಗಿಸಲಾಗಿದೆ. ಅದೇ ರೀತಿ ಸ್ವಚ್ಛತಾ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿನ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಆವರಣಗಳನ್ನು ಸ್ವಚ್ಚವಾಗಿಟ್ಟುಕೊಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ಗದಗ ಜಿಲ್ಲಾ ಸಹಕಾರ ಯೂನಿಯನ್‌ದ ಅಧ್ಯಕ್ಷರಾದ ಸಿ. ಎಂ. ಪಾಟೀಲ ವಹಿಸಿ ಮಾತನಾಡಿ ದೇಶ, ರಾಜ್ಯ, ಜಿಲ್ಲೆ, ತಾಲೂಕು ಹಾಗೂ ನಮ್ಮ ಹಳ್ಳಿಗಳಿಂದ ಸ್ವಚ್ಚತೆ ಪ್ರಾರಂಭವಾಗಿದೆ. ಸ್ವಚ್ಚತೆ ಮತ್ತು ನೈರ್ಮಲ್ಯ ಬಹಳ ಪ್ರಮುಖ ನಮ್ಮ ಮನೆಯನ್ನು ಹೇಗೆ ನಾವು ಸ್ವಚ್ಚವಾಗಿ ಇಟ್ಟುಕೊಳ್ಳುತ್ತೇವೆಯೋ ಹಾಗೇ ನಮ್ಮ ಸಮಾಜ ಹಾಗೂ ಗ್ರಾಮವನ್ನು ಸ್ವಚ್ಚವಾಗಿಟ್ಟುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು ಸ್ವಚ್ಛತಾ ಹಿ ಸೇವಾ–2025 ಹಾಗೂ ಸ್ವಚ್ಛತಾ ಮೇ ಸಹಕಾರ ಪ್ರಯುಕ್ತ ಗದಗ ಜಿಲ್ಲೆಯಲ್ಲಿ ಮಹಾಮಂಡಳದ ನಿರ್ದೇಶನ ಹಾಗೂ ಮಾರ್ಗದರ್ಶನದಂತೆ ಜೂನ್ ತಿಂಗಳಿನಲ್ಲಿ ಸಹಕಾರದಿಂದ ಸ್ವಚ್ಚತಾ ಅಭಿಯಾನ ಹಾಗೂ ಏಕ್ ಪೇಡ ಮಾ ಕಿ ನಾಮಸೇ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮ ಜರುಗಿಸಲಾಗಿದೆ, ಅದೇ ರೀತಿ ಕೇಂದ್ರ ಸರ್ಕಾರದ ನಿರ್ದೇಶನದಂತೆ ಇಂದು "ಏಕ್ ದಿನ್ ಏಕ್ ಘಂಟಾ ಏಕ್ ಸಾಥ್" ಶ್ರಮದಾನ ಅಭಿಯಾನ ಜರುಗಿಸಲಾಗಿದೆ ಎಂದು ಹೇಳಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ದ ನಿರ್ದೇಶಕ ಎಸ್ ಕೆ ಕುರಡಗಿ ಸಹಕಾರ ಸಂಘಗಳ ಸಹಾಯಕ ನಿಬಂಧಿಯ ಪುಷ್ಪಾ ಕಡಿವಾಳ ಗದಗ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಶ್ರೀಮತಿ ಶಾಂತಾ ಎಚ್.ಎಂ. ಕೆ.ಸಿ.ಸಿ. ಬ್ಯಾಂಕ್ ಲಿ ಪ್ರಭಾರ ಜಿಲ್ಲಾ ನಿಯಂತ್ರಣಾಧಿಕಾರಿಗಳಾದ ಎಸ್.ವ್ಹಿ.ಚಳಗೇರಿ ಮರ್ಚಂಟ್ಸ್ ಲಿಬರಲ್ ಕೋ–ಆಪ್ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರಾದ ರಾಜು ಕೋಟಿ ಮರ್ಚಂಟ್ಸ್ ಅರ್ಬನ್ ಕೋ–ಆಪ್ ಬ್ಯಾಂಕ್ ಲಿ ಗದಗ ದಿ ಮರ್ಚಂಟ ಅರ್ಬನ್ ಕೋ–ಆಪ್ ಬ್ಯಾಂಕ್ ಲಿ ಗದಗ ಇದರ ವ್ಯವಸ್ಥಾಪಕ ನಿರ್ದೇಶಕರಾದ ಬಸವರಾಜ ನಾಯಕವಾಡಿ ಹಾಗೂ ಬ್ಯಾಂಕಿನ ಸಿಬ್ಬಂದಿಗಳು, ಸಹಕಾರ ಇಲಾಖೆಯ ಎಲ್ಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬಿಜೆಪಿಯಿಂದ ಪಂಡಿತ ದಿನ ದಯಾಳ ಜನ್ಮಸ್ಮರಣೆ

**ಬಾಗಲಕೋಟೆ:** ಆತ್ಮ ನಿರ್ಭರ ಭಾರತದ ಕನಸುಗಾರ ಪಂಡಿತ ದಿನ ದಯಾಳ ಉಪಾಧ್ಯಾಯ ಎಲ್ಲರಿಗೂ ಆದರ್ಶ ಎಂದು ರಾಜ್ಯಸಭಾ ಸದಸ್ಯ ನಾರಾಯಣಸಾ ಬಾಂಡಗೆ ಹೇಳಿದರು

ಅವರು ನಗರದ ಶಿವಾನಂದ ಜಿನ್‌ಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ ಪಂಡಿತ ದಿನ ದಯಾಳ ಉಪಾಧ್ಯಾಯರ ಜನ್ಮಸ್ಮರಣೆ ನಿಮಿತ್ಯ ಉಪಾಧ್ಯಾಯರ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸಿ ಮಾತನಾಡಿದ ಅವರು, ದೇಶ ಸ್ವಾವಲಂಬಿಯಾಗಬೇಕೆಂದು ಕನಸು ಕಂಡಿದ್ದ ಪಂಡಿತ್ ದಿನ ದಯಾಳ ಉಪಾಧ್ಯಾಯರ ಕಲ್ಪನೆಯಾಗಿತ್ತು, ಅವರ ಕಲ್ಪನೆಯನ್ನು ಪ್ರದಾನಿ ನರೇಂದ್ರ ಮೋದಿ ಅವರು ಸಾಕಾರಗೊಳಿಸುತ್ತಿದ್ದಾರೆ, ಎಂದರು.

ಮಾಜಿ ಶಾಸಕರಾದ ಡಾ. ವೀರಣ್ಣ ಚರಂತಿಮಠ ಮಾತನಾಡಿ ಏಕಾತ್ಮ ಮಾನವ ದರ್ಶನ, ಅಂತ್ಯೋದಯ ಪರಿಕಲ್ಪನೆಯ ಹರಿಕಾರರಾಗಿದ್ದರು, ಸಾವಿನಲ್ಲೂ ಸಂದೇಶ ಬಿಟ್ಟುಹೋದ ರಾಷ್ಟ್ರವಾದಿ ನಾಯಕ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರು ಲಕ್ಷಾಂತರ ಕಾರ್ಯಕರ್ತರಿಗೆ ಸರ್ವಕಾಲಿಕ ಪ್ರೇರಣಾ ಸ್ವರೂಪಿಯಾಗಿದ್ದು ಪಂಡಿತ್ ಜೀ ಅವರ ಜೀವನ ಹಾಗೂ ಸಂದೇಶಗಳು ದಾರಿದೀಪವಾಗಿದೆ ಎಂದರು.

ಮುಖಂಡರಾದ ಜಿ. ಎನ್. ಪಾಟೀಲ್,ಡಾ. ಎಂ. ಎಸ್. ದಡ್ಡೆನವರ್, ಗುಂಡು ಶಿಂದೆ, ರಾಜು ನಾಯ್ಕರ, ರಾಜು ರೇವಣಕರ್, ಬಸವರಾಜ್ ಯಂಕಂಚಿ, ನಗರಸಭೆ ಅದ್ಯಕ್ಷೆ ಸವಿತಾ ಲಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ, ಜ್ಯೋತಿ ಭಜಂತ್ರಿ, ಸರಸ್ವತಿ ಕುರಬರ, ಶಶಿಕಲಾ ಮಜ್ಜಗಿ, ಶಿವಲೀಲಾ ಪಟ್ಟಣಶೆಟ್ಟಿ, ಬಸವರಾಜ ಹುನಗುಂದ, ಸುರೇಶ ಕೊಣ್ಣೂರ, ರಾಜು ಮುದೇನೂರ, ಉಮೇಶ ಹಂಚಿನಾಳ ಸೇರಿದಂತೆ ಅನೇಕರು ಇದ್ದರು.




## ವ್ಯಕ್ತಿ ಕಾಣೆ

**ರಬಕವಿ–ಬನಹಟ್ಟಿ:** ಬನಹಟ್ಟಿಯ ತಳವಾರ ಓಣಿಯ ನಿವಾಸಿ ಮಹಬೂಬ ಜಮಾದಾರ ಕಳೆದ ಸೆ.20 ರಂದು ಸಂಜೆ 7 ಗಂಟೆ ಸುಮಾರಿಗೆ ಚಹಾ ಕುಡಿಯಲು ಹೊರಗಡೆ ಹೋಟೆಲ್‌ಗೆ ಹೋಗುವದಾಗಿ ತಿಳಿಸಿ ಮನೆಯಿಂದ ಹೋದವರು ವಾಪಸ್ ಮನೆಗೆ ಬಂದಿಲ್ಲವಾದ ಕಾರಣ ಬನಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 70 ವರ್ಷದ ವೃದ್ಧ, ಗೋಧಿ ಕಪ್ಪು ಮೈಬಣ್ಣ ಹೊಂದಿದ್ದು, 5.5 ಅಡಿ ಎತ್ತರ, ಕನ್ನಡ, ಉರ್ದು, ಹಿಂದಿ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಕರಿ ಬಣ್ಣದ ಪೂರ್ತಿ ಬನಿಯನ್ ಮತ್ತು ಕಪ್ಪು ಪ್ಯಾಂಟ್ ಧರಿಸಿದ್ದು, 4ನೇ ತರಗತಿವರೆಗೆ ವ್ಯಾಸಾಂಗ ಮಾಡಿರುತ್ತಾರೆ. ಇವರ ಬಗ್ಗೆ ಮಾಹಿತಿ ದೊರೆತಲ್ಲಿ, ಬನಹಟ್ಟಿ ಪೊಲೀಸ್ ಠಾಣೆ ಅಥವಾ 08353–230292/94808–02958 ನಂಬರನ್ನು ಸಂಪರ್ಕಿಸಬಹುದು.



## ಹೆಸರು ಕಾಳು ಖರೀದಿ ಕೇಂದ್ರ ಆರಂಭ: ನೋಂದಣಿಗೆ ರೈತರಲ್ಲಿ ಮನವಿ

**ಕೊಪ್ಪಳ:** 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಬೆಂಬಲ ಬೆಲೆ ದರ ಪ್ರತಿ ಕ್ವಿಂಟಾಲ್‌ಗೆ ರೂ.8,768/– ರಂತೆ ಗರಿಷ್ಠ 38,000 ಮೆಟ್ರಿಕ್ ಟನ್ ಎಫ್.ಎ.ಕ್ಯೂ. ಗುಣಮಟ್ಟದ ಹೆಸರುಕಾಳನ್ನು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಕೊಪ್ಪಳ ಜಿಲ್ಲೆಯ ರೈತರಿಂದ ಖರೀದಿಸುವ ಸಲುವಾಗಿ ಸೆಪ್ಟೆಂಬರ್ 26 ರಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸಭೆಯಲ್ಲಿ ಹೆಸರುಕಾಳು ಖರೀದಿ ನೋಂದಣಿ ಕೇಂದ್ರಗಳನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿದೆ.

ಖರೀದಿ ಕೇಂದ್ರಗಳಾದ ಕುಕನೂರಿನ ಪಿಎಸಿಎಸ್ ಕುಕನೂರು, ಯಲಬುರ್ಗಾದ ಟಿಎಪಿಸಿಎಂಎಸ್ ಯಲಬುರ್ಗಾ, ಬನ್ನಿಕೊಪ್ಪದ ಪಿಎಸಿಎಸ್ ಬನ್ನಿಕೊಪ್ಪ, ಚಿಕ್ಕೇನಕೊಪ್ಪದ ಪಿಎಸಿಎಸ್ ಚಿಕ್ಕೇನಕೊಪ್ಪ, ತೊಂಡಿಹಾಳನ ಪಿಎಸಿಎಸ್ ತೊಂಡಿಹಾಳ, ಮುಧೋಳನ ಪಿಎಸಿಎಸ್ ಮುಧೋಳ, ಮಂಡಲಗೇರಿಯ ಎಫ್‌ಪಿಓ ಎರೆಯ ದೊರೆ, ತಾವರಗೇರಾದ ಪಿಎಸಿಎಸ್ ಮೇಣೆದಾಳ, ಹನುಮಸಾಗರದ ಪಿಎಸಿಎಸ್ ಹನುಮಸಾಗರ, ಹಿರೇಸಿಂದೋಗಿಯ ಪಿಎಸಿಎಸ್ ಹಿರೇಸಿಂದೋಗಿ, ಮುದ್ದೇಬಳ್ಳಿಯ ಪಿಎಸಿಎಸ್ ಮುದ್ದೇಬಳ್ಳಿ, ಕವಲೂರಿನ ಪಿಎಸಿಎಸ್ ಕವಲೂರಿನ ಏಜೆನ್ಸಿ ಅಥವಾ ನೋಂದಣಿ ಕೇಂದ್ರಗಳಲ್ಲಿ ರೈತರು ನೋಂದಣಿ ಮಾಡಿಕೊಳ್ಳಬಹುದು. ಪ್ರತಿ ಎಕರೆಗೆ 3 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಹೆಸರುಕಾಳು ಉತ್ಪನ್ನವನ್ನು ಖರೀದಿಸಲಾಗುತ್ತದೆ. ಎಫ್.ಎ.ಕ್ಯೂ. ಗುಣಮಟ್ಟದ ಹೆಸರುಕಾಳನ್ನು ಮಾತ್ರ ಖರೀದಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ಕೊಪ್ಪಳ, ದೂ.ಸಂ: 08539–230040 ಇವರನ್ನು ಸಂಪರ್ಕಿಸಬಹುದು ಎಂದು ಕೊಪ್ಪಳ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಪರ್ಧಾತ್ಮಕ ಪರೀಕ್ಷಾ ಪುಸ್ತಕ ಪ್ರದರ್ಶನ ಉದ್ಘಾಟನೆ

**ಮುಧೋಳ:** ಬಿವಿವಿ. ಸಂಘದ ಸ್ಥಳಿಯ ಎಸ್. ಆರ್.ಕಂಠಿ ಮಹಾವಿದ್ಯಾಲಯದ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಮತ್ತು ಸ್ಪರ್ಧಾತ್ಮಕ ಪರೀಕ್ಷಾ ಮಾರ್ಗದರ್ಶನ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಸ.23 ರಿಂದ 30ರ ವರೆಗೆ ಪ್ರತಿದಿನ ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆವರೆಗೆ ಗ್ರಂಥಾಲಯದ ಒಳಾಂಗಣದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದ ಪುಸ್ತಕಗಳ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಕಾರಣ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದು ಕೊಳ್ಳಬೇಕೆಂದು ಪ್ರಾಚಾರ್ಯ ಡಾ.ಎಮ್.ಆರ್. ಜರಕುಂಟಿ ಹೇಳಿದರು.




ಸ್ಪರ್ಧಾತ್ಮಕ ಪುಸ್ತಕಗಳ ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ಯುಪಿಎಸ್ಸಿ, ಕೆಪಿಎಸ್ಸಿ, ಬ್ಯಾಂಕಿಂಗ್, ರೈಲ್ವೆ, ಎಸ್‌ಎಸ್‌ಸಿ, ನೆಟ್, ಕೆಎಸ್, ಐಎಎಸ್, ಪಿಎಸ್‌ಐ, ಐಪಿಎಸ್ ಮುಂತಾದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಗತ್ಯವಿರುವ ಪುಸ್ತಕಗಳು ಪ್ರದರ್ಶನದಲ್ಲಿವೆ, ಇವುಗಳನ್ನು ಬಳಸಿಕೊಂಡು ಸಾಮಾನ್ಯ ಜ್ಞಾನ, ಸಾಮಾನ್ಯ ಅಧ್ಯಯನ, ತಾರ್ಕಿಕತೆ, ಪ್ರಸ್ತುತ ಘಟನೆಗಳ ಮತ್ತು ವಿಷಯವಾರು ಮಾರ್ಗದರ್ಶಕ ಪುಸ್ತಕಗಳನ್ನು ಓದಿಕೊಂಡು ತಮ್ಮ ಜ್ಞಾನವನ್ನು ವೃದ್ಧಿಗೊಳಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಗ್ರಂಥಪಾಲಕ ಡಾ.ಚಿರಂಜೀವಿ ಎಲ್. ಎಂ ಈ ಕಾರ್ಯಕ್ರಮವನ್ನು ಸಂಯೋಜಿಸಿ, ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿವರ ಹಾಗೂ ಅವುಗಳನ್ನು ಹೇಗೆ ಉಪಯೋಗಿಸಿಕೊಳ್ಳಬೇಕು ಎಂಬುದರ ಕುರಿತು ಮಾರ್ಗದರ್ಶನ ನೀಡಿದರು.

ಐಕ್ಯೂಎಸಿ ಸಂಯೋಜಕ ಎ.ಆರ್. ಕಡೂರು, ಎಸ್. ಎಸ್. ಬಿರಾದರ, ಸಹಾಯಕ ಗ್ರಂಥಪಾಲಕಿ ಎಸ್.ಎಸ್. ಕೊಣ್ಣೂರಮಠ, ಬಿ.ವಿ. ಪೂಜಾರಿ, ಬಿ.ಕೆ. ಕರಗುಳಿ, ವಿವಿಧ ವಿಭಾಗಗಳ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಇತರರಿದ್ದರು.

# ‘ಏಕದಿನ-ಏಕ್‌ಘಂಟಾ-ಏಕ್‌ಸಾಥ್’ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ

**ವಿಜಯಪುರ:** ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪ್ರವಾಸೋದ್ಯಮ ಇಲಾಖೆ, ಮಹಾನಗರ ಪಾಲಿಕೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಇಂದು ನಗರದಲ್ಲಿ ಹಮ್ಮಿಕೊಂಡ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ “ಏಕ್ ದಿನ್, ಏಕ್ ಘಂಟಾ, ಏಕ್ ಸಾಥ (ಒಂದು ದಿನ, ಒಂದು ಘಂಟೆ, ಎಲ್ಲರೂ ಒಟ್ಟಿಗೆ)” ಎಂಬ ಘೋಷವ್ಯಾಖ್ಯದೊಂದಿಗೆ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಯಿತು.

ನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಹತ್ತಿರದ ಕೋಟೆಗೋಡೆ ಆವರಣದಲ್ಲಿ ಸ್ವಚ್ಛಗೊಳಿಸುವ ಮೂಲಕ ಅಭಿಯಾನಕ್ಕೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಐತಿಹಾಸಿಕ ಸ್ಮಾರಕಗಳನ್ನು ಹೊಂದಿರುವ ವಿಜಯಪುರ ಜಿಲ್ಲೆ, ಪ್ರವಾಸೋದ್ಯಮದ ತಾಣವಾಗಿದೆ. ಐತಿಹಾಸಿಕ ಪರಂಪರೆಯನ್ನು ಹೊಂದಿರುವ ನಮ್ಮ ನಗರ. ಪಾರಂಪರಿಕ ತಾಣಗಳನ್ನು ಸಂರಕ್ಷಿಸುವುದು ಹಾಗೂ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸ್ವಚ್ಛತಾ ಕಾರ್ಯ ಕೇವಲ ಒಂದು ದಿನಕ್ಕೆ



ಮಾತ್ರ ಸೀಮಿತವಾಗಿರದೆ, ಸಾರ್ವಜನಿಕರ ಸಹಭಾಗಿತ್ವದಲ್ಲಿ ನಿರಂತರವಾಗಿ ನಡೆಯಬೇಕು. ಸಾರ್ವಜನಿಕರು ಕೋಟೆ ಗೋಡೆಯ ಅಕ್ಕಪಕ್ಕದಲ್ಲಿ ಕಸವನ್ನು ಚೆಲ್ಲದೇ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವ ಮೂಲಕ ಸ್ವಚ್ಛತಾ ಅಭಿಯಾನಕ್ಕೆ ಕೈ ಜೋಡಿಸಬೇಕು. ಪಾರಂಪರಿಕ ಐತಿಹಾಸಿಕ ತಾಣಗಳ ಸೌಂದರ್ಯಕ್ಕೆ ಹಾನಿ ಉಂಟು ಮಾಡುವ ಕಾರ್ಯಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಜಿಲ್ಲಾಡಳಿತ ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಅವರು ಹೇಳಿದರು.

ವಾರ್ಡಗಳಲ್ಲಿ ವಾರ್ಡ್ ಸದಸ್ಯರ ನೇತೃತ್ವದಲ್ಲಿ ಶಿಕ್ಷಣ ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳು, ಸಾರ್ವಜನಿಕರ ಸಹಭಾಗಿತ್ವದಲ್ಲಿ ಸಮಿತಿಯೊಂದನ್ನು ರಚಿಸಿ, ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ಯೋಜನೆ ರೂಪಿಸಲಾಗಿದೆ. ಜನರಲ್ಲಿ ಜಾಗೃತಿ ಮೂಡಿಸಲು ಪರಿಸರವಾದಿಗಳು, ವೃಕ್ಷೋತ್ಥಾನ ತಂಡ, ರೋಟರಿ ಕ್ಲಬ್ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳನ್ನು ಭಾಗಿದಾರರನ್ನಾಗಿಸಿಕೊಂಡು ಜಾಗೃತಿ ಮೂಡಿಸುವ ಉದ್ದೇಶ ಹೊಂದಲಾಗಿದೆ ಸ್ವಚ್ಛ–ಸುಂದರ ನಗರ ಹಾಗೂ ಸ್ಮಾರಕಗಳ ಸಂರಕ್ಷಣೆಗೆ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಉಪಶಮನ ನಿಧಿ ಯೋಜನೆಯಡಿ ವ್ಯವಸ್ಥಿತ ಚರಂಡಿ ನಿರ್ವಹಣೆಗೆ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಸ್ವಚ್ಛತಾ ಅಭಿಯಾನದಲ್ಲಿ ಸಾರ್ವಜನಿಕರು ಸಕ್ರೀಯವಾಗಿ ಭಾಗವಹಿಸಿ ಸ್ವಚ್ಛ ಸುಂದರ ನಗರಕ್ಕೆ ಕೈ ಜೋಡಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಮಾತನಾಡಿ ವಿಜಯಪುರ ನಗರದಲ್ಲಿ ಅಷ್ಟೇ ಅಲ್ಲದೇ ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಲ್ಲಿ ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಏಕ್ ದಿನ್, ಏಕ್ ಘಂಟಾ, ಏಕ್ ಸಾಥ (ಒಂದು ದಿನ, ಒಂದು ಘಂಟೆ, ಎಲ್ಲರೂ ಒಟ್ಟಿಗೆ) ಎಂಬ ಘೋಷವ್ಯಾಖ್ಯದೊಂದಿಗೆ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಅಭಿಯಾನದಲ್ಲಿ ಅಧಿಕಾರಿಗಳು, ಜನ ಪ್ರತಿನಿಧಿಗಳು, ಶಾಲಾ ಮಕ್ಕಳು, ಸ್ವಯಂ ಸೇವಾ ಸಂಸ್ಥೆಗಳು ಸೇರಿ ಸಹಸ್ರಾರು ಸಂಖ್ಯೆಯಲ್ಲಿ ಸಾರ್ವಜನಿಕರ ಸಹಭಾಗಿತ್ವದಲ್ಲಿ ಸ್ವಚ್ಛತಾ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 02 ರವರೆಗೆ ಸ್ವಚ್ಛತಾ ಹೀ ಸೇವಾ ಅಭಿಯಾನದಡಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ಹೇಳಿದರು.

# ವಿಮಾ ಯೋಜನೆಗಳ ಜಾಗೃತಿ ಅಭಿಯಾನ



**ರಾಮದುರ್ಗ:** ಕೇಂದ್ರ ಸರಕಾರದ ಸಾಮಾಜಿಕ ಸುರಕ್ಷಾ ವಿಮಾ ಯೋಜನೆಗಳನ್ನು ಜವಳಿ ಇಲಾಖೆಯಿಂದ ಮಾಡಿಸಲಾಗುತ್ತಿದ್ದು, ಎಲ್ಲ ನೇಕಾರರು ವಿಮಾ ಯೋಜನೆಗಳನ್ನು ಮಾಡಿಸಬೇಕೆಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಜವಳಿ ಪರಿವರ್ತನಾಧಿಕಾರಿ ಸಿದ್ದು ಕುಂಬಾರ ಹೇಳಿದರು.

ಪಟ್ಟಣದ ವಿಠ್ಠಲ ಹರಿಮಂದಿರದಲ್ಲಿ ಕೈಮಗ್ಗ ಮತ್ತು ಜವಳಿ ಇಲಖೆ, ಹಾಗೂ ಕೆನರಾ ಬ್ಯಾಂಕ ಅಮೂಲ್ಯ ಅರ್ಥಿಕ ಸಾಕ್ಷರತೆ ಕೇಂದ್ರದ ಸಹಯೋಗದಲ್ಲಿ ನಡೆದ ನೇಕಾರ ಕಾರ್ಮಿಕರಿಗೆ ಕೇಂದ್ರ ಸರಕಾರದ ಸಾಮಾಜಿಕ ಭದ್ರತಾ ವಿಮಾ ಯೋಜನೆಗಳ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಅವರು, ಮಾತನಾಡಿದರು.

ವಿಮಾ ಯೋಜನೆಗಳನ್ನು ನಿಮ್ಮ ಬ್ಯಾಂಕ ಖಾತೆಯ ಮೂಲಕ ಮಾಡಿಸಬೇಕು. ನಂತರ ಸರಕಾರದಿಂದ ವಿಮಾ ಕಂತು ಹಣವನ್ನು ನೇರವಾಗಿ ಫಲಾನುಭವಿಗಳ ಖಾತೆಗೆ ಸಂದಾಯವಾಗುತ್ತದೆ. ಎಲ್ಲರೂ ಕಡ್ಡಾಯವಾಗಿ ವಿಮಾ ಯೋಜನೆಗಳನ್ನು ಮಾಡಿಸಬೇಕೆಂದು ಅವರು ತಿಳಿಸಿದರು.

ದೇವಾಂಗ ಸಮಾಜದ ರಾಜ್ಯ ಉಪಾಧ್ಯಕ್ಷ ಶಂಕರಣ್ಣಾ ಮುರಡಿ ಅಧ್ಯಕ್ಷತೆ ವಹಿಸಿ ಮಾತನಾಡಿ ತಾಲೂಕಿನ ಎಲ್ಲ ನೇಕಾರ ಕಾರ್ಮಿಕರನ್ನು ಮನವೊಲಿಸಿ ವಿಮಾ ಯೋಜನೆಗೆ ಒಳಪಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಭರವಸೆ ನೀಡಿದರು.

ಅಮೂಲ್ಯ ಆರ್ಥಿಕ ಸಾಕ್ಷರತಾ ಕೇಂದ್ರದ ಸಮಾಲೋಚಕ ಮಲ್ಲಿಕಾರ್ಜುನರಡ್ಡಿ ಗೊಂದಿ, ಕೆನರಾ ಬ್ಯಾಂಕ ಕೃಷಿ ಅಭಿವೃದ್ಧಿ ಅಧಿಕಾರಿ ಕಾಶಿನಾಥ ಬುತಾಳಿ, ಐ.ಸಿ.ಐ.ಸಿ ಬ್ಯಾಂಕ ವ್ಯವಸ್ಥಾಪಕ ಶಿವಕುಮಾರ ಅವರು ಸಾಮಾಜಿಕ ಸುರಕ್ಷಾ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

ದೇವಾಂಗ ಸಮಾಜದ ಅಧ್ಯಕ್ಷ ಕುಬೇರ ಗರಡಿಮನಿ, ನಿರ್ದೇಶಕ ಶಿವಾನಂದ ಬಳ್ಳಾರಿ, ಬನಶಂಕರಿ ದೇವಾಂಗ ಸಮಾಜದ ಅಧ್ಯಕ್ಷ ಕುಬೇರ ಗರಡಿಮನಿ, ಮುಖಂಡರಾದ ನಾರಾಯಣ ಹೂಲಿ, ಐ. ಜಿ. ರಾಮದುರ್ಗ, ವಿ. ಎಸ್. ಮುರುಡಿ, ಪುರಸಭೆ ಸದಸ್ಯ ಶಂಕರ ಬೆನ್ನೂರ ಸೇರಿದಂತೆ ಇತರರಿದ್ದರು. ರವಿ ಬೆನ್ನೂರ ಸ್ವಾಗತಿಸಿ ವಂದಿಸಿದರು.

# ಶ್ರೀಗಳ ಉಚ್ಚಾಟನೆಗೆ ಖಂಡನೆ

## ಕಾಶಪ್ಪನವರ ಶ್ರೀಗಳನ್ನು ಉಚ್ಚಾಟನೆ ಮಾಡಿದ್ದು ನಾವು ಒಪ್ಪುವುದಿಲ್ಲ: ಸಾಂಗ್ಲೀಕರ



**ಮಹಾಲಿಂಗಪುರ:** ಶಾಸಕ ವಿಜಯಾನಂದ ಕಾಶಪ್ಪನವರ ಬಸವಜಯ ಮೃತ್ಯುಂಜಯ ಶ್ರೀಗಳನ್ನು ಉಚ್ಚಾಟನೆ ಮಾಡಿದ್ದನ್ನು ನಾವು ಯಾವುದೇ ಕಾರಣಕ್ಕೂ ಒಪ್ಪುವುದಿಲ್ಲ ಎಂದು ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಧರೆಪ್ಪ ಸಾಂಗ್ಲೀಕರ ಹೇಳಿದರು.

ಶನಿವಾರ ಸ್ಥಳೀಯ ಜಿಎಲ್‌ಬಿಸಿ ಅತಿಥಿಗೃಹದಲ್ಲಿ ಪಂಚಮಸಾಲಿ ಶ್ರೀಗಳಾದ ಬಸವಜಯ ಮೃತ್ಯುಂಜಯ ಶ್ರೀಗಳ ಉಚ್ಚಾಟನೆ ಖಂಡಿಸಿ ಮುಧೋಳ ಹಾಗೂ ರಬಕವಿ ಬನಹಟ್ಟಿ ತಾಲೂಕು ಪಂಚಾಮಸಾಲಿಗಳು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಮೊದಲಿನಿಂದ ಕಾಶಪ್ಪನವರ ಹಾಗೂ ಶ್ರೀಗಳು ಸದಸ್ಯರು ಕೂಡ ಟ್ರಸ್ಟ್‌ನಲ್ಲಿ ಇರಲಿಲ್ಲ, ಇತ್ತೀಚೆಗೆ ಅವರ ದುಷ್ಟಕೂಟಗಳೆಲ್ಲ ಸೇರಿ ಟ್ರಸ್ಟ್ ಅಧ್ಯಕ್ಷರನ್ನಾಗಿ ಮಾಡಿದ್ದಾರೆ. ಕೂಡಲಸಂಗಮ ಪಂಚಮಸಾಲಿ ಪೀಠ ಸ್ಥಾಪನೆಯಾದ ಕೆಲವು ದಿನಗಳ ನಂತರ ಕೇವಲ ಅವರ ಬೆಂಬಲಿಗರು ಸೇರಿ ಮಾಡಿದ ಟ್ರಸ್ಟ್ ಇದಾಗಿದೆ. ಅದಕ್ಕಾಗಿ ಶ್ರೀಗಳೇ ಇಲ್ಲದ ಮೇಲೆ ಆ ಪೀಠಕ್ಕೆ ಯಾವುದೇ ಬೆಲೆ ಇಲ್ಲ, ಕಾಶಪ್ಪನವರ ನಮ್ಮ ಸಮಾಜದ ಯಾವುದೇ ಸ್ಥಾನದಲ್ಲಿಲ್ಲ, ಶ್ರೀಗಳನ್ನು ಉಚ್ಚಾಟಿಸಲು ಒಬ್ಬ ಸಾಮಾನ್ಯ ವ್ಯಕ್ತಿಯಾದ ಕಾಶಪ್ಪನವರಗೆ ಯಾವುದೇ ಹಕ್ಕಿಲ್ಲ. ಶ್ರೀಗಳ ಪೀಠ ಕೂಡಲಸಂಗಮವೇ, ಬೇರೆ ಪೀಠದ ಮಾತಿಲ್ಲ ಎಂದರು.

ಸಮಾಜದ ಮುಖಂಡರಾದ ಹನಮಂತ ಶಿರೋಳ ಮತ್ತು ಪರಪ್ಪ ಹುದ್ದಾರ ಮಾತನಾಡಿ, ಇಡಿ ಕರ್ನಾಟಕದ ಪಂಚಮಸಾಲಿಗಳೆಲ್ಲ ಶ್ರೀಗಳನ್ನೆ ಜಗದ್ಗುರುಗಳೆಂದು ಒಪ್ಪಿಕೊಂಡಿದ್ದೇವೆ. ಎಲ್ಲ ತಾಲೂಕುಗಳ ಹಿರಿಯರನ್ನು ಸೇರಿಸಿಕೊಳ್ಳದೇ ಕೇವಲ ತಮ್ಮ ಸುತ್ತ ಇರುವ ಜನರನ್ನು ಸೇರಿಸಿ ಮಾಡಿದ ಟ್ರಸ್ಟ್‌ಗೂ ಮತ್ತು ನಮ್ಮ ಪೀಠಕ್ಕೂ ಯಾವುದೇ ಸಂಬಂಧವಿಲ್ಲ. ಯಾವುದೇ ಸಂಬಂಧವಿಲ್ಲದ ಕಾಶಪ್ಪನವರ ಶ್ರೀಗಳನ್ನು ಉಚ್ಚಾಟನೆ ಮಾಡಿದ್ದೇನೆ ಎನ್ನುವುದು ಉದ್ಧತಟನ ಎಂದರು.

ಪಂಚಮಸಾಲಿ ನಗರ ಘಟಕದ ಅಧ್ಯಕ್ಷ ಬಸಪ್ಪ ಕೊಪ್ಪದ, ಮತ್ತು ಮಹಾದೇವ ಮರಾಪುರ, ಪರಪ್ಪ ಹುದ್ದಾರ, ಹನಮಂತ ಶಿರೋಳ, ಚನ್ನಪ್ಪ ಪಟ್ಟಣಶೆಟ್ಟಿ, ಚನಬಸು ಯರಗಟ್ಟಿ, ಡಾ.ಅಶೋಕ ದಿನ್ನಿಮನಿ, ವಿನೋದಗೌಡ ಉಳ್ಳಾಗಡ್ಡಿ, ಈರಪ್ಪ ದಿನ್ನಿಮನಿ, ಮಲ್ಲಪ್ಪ ಕೌಜಲಗಿ, ಶ್ರೀಶೈಲಪ್ಪ ಉಳ್ಳಾಗಡ್ಡಿ, ಬಸವರಾಜ ನಾಗನೂರ, ಮಹಾಲಿಂಗಪ್ಪ ಕಂಠಿ, ಅಲ್ಲಪ್ಪ ಕಲ್ಲೋಳಿ, ಸಂದೀಪ ಸುರಗೊಂಡ, ಪಂಡಿತ ಖೋತ, ರವಿ ಗಿರಿಸಾಗರ, ಶ್ರೀಶೈಲ ಬಿರಾದಾರ ಸೇರಿದಂತೆ ಹಲವರು ಇದ್ದರು.

# ಇಂದಿನಿಂದ ರೇಬಿಸ್ ಲಸಿಕಾ ಕಾರ್ಯಕ್ರಮ

**ರಾಯಬಾಗ:** ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ರಾಯಬಾಗ ಹಾಗೂ ತಾಲೂಕಾ ಪ್ರಾಣಿದಯಾ ಸಂಘ, ರಾಯಬಾಗ ಇವರ ವತಿಯಿಂದಇಂದಿನಿಂದ ಅಕ್ಟೋಬರ್ 28 ರವರೆಗೆ ಒಂದು ತಿಂಗಳ ಕಾಲ ರೇಬಿಸ್ (ಹುಚ್ಚುನಾಯಿ ರೋಗ) ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಒಂದು ಅತಿ ಮುಖ್ಯವಾದ ಮಾರನಾಂತಿಕ ರೋಗವಾಗಿದ್ದು ಸೂಕ್ತ ಮುಂಜಾಗ್ರತೆ ವಹಿಸಿ ಲಸಿಕೆ ಹಾಕಿಸುವದರಿಂದ ಮಾತ್ರ ತಡೆಗಟ್ಟಬಹುದಾಗಿದೆ, ಈ ನಿಟ್ಟಿನಲ್ಲಿ ರೇಬಿಸ್ ರೋಗ ನಿಯಂತ್ರಣ ಕಾರ್ಯಕ್ರಮದಡಿ ತಾಲೂಕಿನ ಎಲ್ಲಾ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಉಚಿತವಾಗಿ ಸಾಕು ನಾಯಿ ಹಾಗೂ ಬೆಕ್ಕುಗಳಿಗೆ ರೇಬಿಸ್ ರೋಗಕ್ಕೆ ಲಸಿಕೆಯನ್ನು ಹಾಕಲಾಗುವುದು. ಸಾರ್ವಜನಿಕರು ಸ್ಥಳೀಯ ಪಶುವೈದ್ಯಾಧಿಕಾರಿಗಳನ್ನು ಸಂಪರ್ಕಿಸಿ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಡಾ ಎಮ್ ಬಿ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 1ಕೋಟಿ ರೂ. ವೆಚ್ಚದಲ್ಲಿ ಸಮುದಾಯ ಭವನ: ಸಚಿವೆ ಹೆಬ್ಬಾಳಕರ್

**ಬೆಳಗಾವಿ:** ನಗರದ ಹೊರವಲಯದಲ್ಲಿರುವ ನಿಲಜಿ ಗ್ರಾಮದಲ್ಲಿ ಸುಮಾರು 1 ಕೋಟಿ ರೂ,ಗಳ ವೆಚ್ಚದಲ್ಲಿ ಶ್ರೀ ಬ್ರಹ್ಮಲಿಂಗ ದೇವರ ದೇವಸ್ಥಾನದ ಸಮುದಾಯ ಭವನ ನಿರ್ಮಾಣ ಮಾಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಶನಿವಾರ ಕಟ್ಟಡ ನಿರ್ಮಾಣದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಗ್ರಾಮಸ್ಥರ ಬಹುದಿನಗಳ ಬೇಡಿಕೆಯಂತೆ ಸಮುದಾಯ ಭವನ ನಿರ್ಮಾಣ ಮಾಡಲಾಗುತ್ತಿದೆ. ನವರಾತ್ರಿಯ ಶುಭ ಸಂದರ್ಭದಲ್ಲಿ ಪವಿತ್ರವಾದ ಬ್ರಹ್ಮಲಿಂಗ ದೇವರ ಮಂದಿರದ ಸಮುದಾಯ ಭವನ ನಿರ್ಮಾಣದ ಪೂಜೆ ನೆರವೇರಿಸುತ್ತಿರುವುದು ಸಂತೋಷವನ್ನುಂಟು ಮಾಡಿದೆ.



ಕ್ಷೇತ್ರದಾದ್ಯಂತ ನಿರಂತರವಾಗಿ ಮಂದಿರ, ಸಮುದಾಯ ಭವನ, ಶಾಲಾ ಕೊಠಡಿ, ಅಂಗನವಾಡಿ ಕಟ್ಟಡಗಳ ನಿರ್ಮಾಣ ಮಾಡಲಾಗುತ್ತಿದೆ. ಅಭಿವೃದ್ಧಿ ಮಾಡುವ ಮೂಲಕ ನನಗೆ ಮತ ಹಾಕಿದ ಕ್ಷೇತ್ರದ ಜನರಲ್ಲಿ ಸಾರ್ಥಕ ಭಾವನೆ ಮೂಡುವಂತೆ ಮಾಡುತ್ತಿದ್ದೇನೆ ಎಂದು ಹೇಳಿದರು.

ಒಂದು ಕೋಟಿ ರೂ. ವೆಚ್ಚದಲ್ಲಿ ಅತ್ಯಂತ ಸುಂದರವಾಗಿ ಸಮುದಾಯ ಭವನ ನಿರ್ಮಾಣವಾಗಲಿದೆ. ಸಮುದಾಯದ ಎಲ್ಲ ಚಟುವಟಿಕೆಗಳಿಗೆ ಈ ಭವನ ಆಸರೆಯಾಗಲಿದೆ. ಆದಷ್ಟು ಬೇಗ ಸುಸಜ್ಜಿತವಾಗಿ ಕಾಮಗಾರಿ ಪೂರ್ಣಗೊಳ್ಳುವಂತೆ ನೋಡಿಕೊಳ್ಳೋಣ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಶಿವಾನಂದ ಗುರೂಜಿ, ಶಂಕರಗೌಡ ಪಾಟೀಲ, ನಾಗೇಶ ದೇಸಾಯಿ, ಸತೀಶ್ ದನುಟ್ಕರ್, ಮನೋಹರ್ ಬಾಂಡಗಿ, ಮನೋಹರ್ ಬೆಳಗಾಂವ್ಕರ್, ಸುರೇಶ್ ಪಾಟೀಲ, ನಿಂಗಪ್ಪ ಮೊದಗೇಕರ್, ಗೋವಿಂದ ಪಾಟೀಲ, ಉಮೇಶ ಮೊದಗೇಕರ್, ವಿನಾಯಕ ಮೊದಗೇಕರ್, ದೀಪಕ್ ಕಾತಕರ್, ಚಂದು, ರವಿ, ವಿನಂತಿ ಗೊಮನಾಚಿ, ಬ್ರಹ್ಮಲಿಂಗ ಕಮಿಟಿಯ ಸದಸ್ಯರು, ಗ್ರಾಮ ಪಂಚಾಯತಿಯ ಸರ್ವ ಸದಸ್ಯರು, ರೈತ ಸಂಘಟನೆಯ ಸದಸ್ಯರು ಹಾಗೂ ಗ್ರಾಮದ ನಾಗರಿಕರು ಉಪಸ್ಥಿತರಿದ್ದರು

# ಒಳ್ಳೆಯ ಆಚಾರ ವಿಚಾರದಿಂದ ವಿದ್ಯಾರ್ಥಿಗಳು ಬೆಳೆಯಬೇಕು

**ನೇಸರಗಿ:** ಜೀವನದಲ್ಲಿ ವಿದ್ಯಾರ್ಥಿಗಳು ಮುಂದೆ ಬರಬೇಕಾದರೆ ಶ್ರದ್ದೆ, ಶಿಸ್ತು, ವಿನಯ, ಗೌರವ, ವಿಶ್ವಾಸ, ಸಹನೆ,ಒಳ್ಳೆಯ ಆಹಾರ, ಇನ್ನೂ ಅನೇಕ ವಿಷಯಗಳಲ್ಲಿ ವಿಶ್ವಾಸದಿಂದ ವ್ಯಾಸಂಗ ಮತ್ತು ಸಾರ್ವಜನಿಕ ಕ್ಷೇತ್ರದಲ್ಲಿ ಉತ್ತಮವಾಗಿ ನಡೆದು ಸಮಾಜಪರ, ಮನೆ ಕೆಲಸಗಳಲ್ಲಿ ಪಾಲ್ಗೊಂಡು ಮುನ್ನಡೆದರೆ ಮುಂದಿನ ಜೀವನದಲ್ಲಿ ಖಂಡಿತ ವಿದ್ಯಾರ್ಥಿಗಳಾದ ತಾವು ಜೀವನದಲ್ಲಿ ಯಶಸ್ವೀಯಾಗುತ್ತೀರಿ ಎಂದು ಬೆಳಗಾವಿಯ ಎಮ್ ಎಮ್ ಎಸ್ ಕಲಾ, ವಾಣಿಜ್ಯ, ವಿಜ್ಞಾನ ಮಹಾ ವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಶ್ರೀಮತಿ ಡಾ. ಶಾಮಲಾಬಾಯಿ ಭೀಮರಾಯಪ್ಪ ದಾಸೋಗ ಹೇಳಿದರು.

ಅವರು ಶನಿವಾರದಂದು ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನೇಸರಗಿ ಇದರ 2025–26 ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ಮತ್ತು ಎನ್ ಎಸ್ ಎಸ್, ಗೈಡ್ಸ್ ಘಟಕದ ಉದ್ಘಾಟನಾ ಸಮಾರಂಭ ಮತ್ತು ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟನೆ ನೆರವೇರಿಸಿ ಮಾತನಾಡಿ ಹೆಚ್ಚಿನ ಅಂಕ ಪಡೆದರು ಅದರೊಂದಿಗೆ ಸಾಮಾನ್ಯ ಜ್ಞಾನ ಮುಖ್ಯ,ಎಲ್ಲ ವಿಭಾಗಗಳಲ್ಲಿ ಗುರುತಿಸಿಕೊಳ್ಳಿ, ಒಳ್ಳೆಯ ವ್ಯಕ್ತಿತ್ವ, ಹಿತವಾದ, ಮಿತವಾದ ಆಹಾರ, ಮನೆ ಊಟಕ್ಕೆ ಪ್ರಶಸ್ತ್ಯ, ಸಾಂದರ್ಭಿಕ ಹೊಂದಾಣಿಕೆ, ದೇವರ ಮೇಲೆ ನಂಬಿಕೆ ಬಗ್ಗೆ ರಾಮಕೃಷ್ಣ ಪರಮಹಂಸ ಹೇಳಿದ್ದಾರೆ.



ಮಾನವೀಯ ಮೌಲ್ಯ ಅರಿಯಿರಿ, ಹಿರಿಯರ ಪ್ರೇರಣೆ ಪಡೆಯಿರಿ, ಅಹಂ ಭಾವನೆ ಬೇಡ, ದ್ವೇಷ ಹೊರಹಾಕಿ, ಅತಿಯಾದ ಮನೋರಂಜನೆ ಬೇಡ, ಪಾಠದ ಜೊತೆ ಆಟದಲ್ಲಿ ಪಾಲ್ಗೊಳ್ಳಿ, ಯಾವುದೇ ಭಾಷೆಯ ಮೇಲೆ ದ್ವೇಷ ಬೇಡ, ಎಲ್ಲ ಭಾಷೆ ಕಲಿಕೆಯಿಂದ ಉತ್ತಮ ಭವಿಷ್ಯ, ಮನೆಯಲ್ಲಿ ತಾಯಿ ಮಾಡಿದ ಚಪಾತಿ ಬಿಟ್ಟು, ನಗು ಮುಖದಿಂದ ಪಿಜ್ಜಾ, ಬರ್ಗರ ಸೇವಿಸುತ್ತಿರಿ .ತಂದೆ, ತಾಯಿ, ಗುರುಗಳಿಗೆ ಗೌರವ ಕೊಡಿ, ಒಳ್ಳೆಯವರ ಮಾರ್ಗದರ್ಶನ, ಅನೇಕ ಮಹಾತ್ಮರ ಆದರ್ಶ ಪಾಲನೆ ಮಾಡಿ ತಮ್ಮ ವಿದ್ಯಾರ್ಥಿ ಜೀವನ ಯಶಸ್ವಿಯಾಗಿ ಮುಗಿಸಿ ಜೀವನದಲ್ಲಿ ಮುಂದೆ ಬನ್ನಿ ಎಂದರು.

ಕಾಲೇಜು ಪ್ರಾಂನ್ಸುಪಾಲರಾದ ಡಾ. ಫಕ್ಕಿರಗೌಡ ದುಂ. ಗದ್ದಿಗೌಡರ ಮಾತನಾಡಿ ಕ್ಷೇತ್ರದ ಶಾಸಕರಾದ ಬಾಬಾಸಾಹೇಬ ಪಾಟೀಲ ಅವರ ಶಿಕ್ಷಣ ಪ್ರೇಮದಿಂದ ನಮ್ಮ ಕಾಲೇಜಿಗೆ ಅನೇಕ ಕೆಲಸ ಕಾರ್ಯಗಳು ಆಗುತ್ತಿದ್ದು, ಕಾಲೇಜಿನ 2 ಹೈಟೆಕ್ ಕ್ಲಾಸ ರೂಮ್ , ಸಮಾರಂಭ ನಡೆಸಲು ಡಿಜಿಟಲ್ ಸಭಾ ಭವನ ನಿರ್ಮಿಸಲು ಶಾಸಕರು 1 ಕೋಟಿ 60 ಲಕ್ಷ ರೂಪಾಯಿಗಳ ಅನುಧಾನ ಒದಗಿಸಿದ್ದು ಇನ್ನೇನು ಕಾಮಗಾರಿ ಪ್ರಾರಂಭವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜು ಸುಧಾರಣಾ ಸಮಿತಿ ಸದಸ್ಯರಾದ ನಜೀರ್ ಅಹಮ್ಮದ ತಹಶೀಲ್ದಾರ, ಚನಗೌಡ ಪಾಟೀಲ, ಹಾಗೂ ಭೋಧಕ, ಭೋಧಕೇತ್ತರ ಸಿಬ್ಬಂದಿ, ವಿದ್ಯಾರ್ಥ ಮುಖಂಡರು, ವಿದ್ಯಾರ್ಥಿಗಳು, ವಿದ್ಯಾರ್ಥಿನೀಯರು ಭಾಗವಹಿಸಿದ್ದರು. ಪರಿಚಯ ಭಾಷಣವನ್ನು ಪ್ರೋ. ಶೋಭಾ ಸಿದ್ನಾಳ, ಪ್ರಸ್ತವಿಕ ಭಾಷಣವನ್ನು ಪ್ರೋ. ಸುರೇಖಾ ಶೆಟ್ಟಿ, ಕಾರ್ಯಕ್ರಮದ ನಿರೂಪಣೆಯನ್ನು ಪ್ರೋ. ಎಸ್ ಬಿ ಚವತ್ರಿಮಠ ನೆರವೇರಿಸಿದರು.ಸ್ವಾಗತವನ್ನು ಪ್ರೋ. ವಿನಾಯಕ ಹೊನ್ನಪ್ಪನವರ, ವಂದನೆಯನ್ನು ಪ್ರೋ. ಹರೀಶ ಎಚ್ ಆರ್ ನೆರವೇರಿಸಿದರು.

# ಗಾಂಜಾ ಮಾರಾಟ: ವಿದ್ಯಾರ್ಥಿಗಳ ಬಂಧಿನ

**ಮಂಗಳೂರು:** ಗಾಂಜಾ ಸಂಗ್ರಹಿಸಿದ ಮತ್ತು ಮಾರಾಟ ಮಾಡಲು ಯತ್ನಿಸಿದ ಆರೋಪದ ಮೇಲೆ ಕೇರಳದ ಎರಡನೇ ವರ್ಷದ ಬಿಬಿಎ ವ್ಯಾಸಂಗ ಮಾಡುತ್ತಿದ್ದ 11 ವಿದ್ಯಾರ್ಥಿಗಳನ್ನು ಮಂಗಳೂರಿನಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.ಖಚಿತ ಸುಳಿವಿನ ಮೇರೆಗೆ, ಪಿಎಸ್‌ಐ ಶೀತಲ್ ಅಲಗೂರ್ ನೇತೃತ್ವದ ಮಂಗಳೂರು ದಕ್ಷಿಣ ಪೊಲೀಸರ ತಂಡ ಗುರುವಾರ ಸಂಜೆ ಅತ್ತಾವರದ ಕಪ್ರಿಗುಡ್ಡೆ ಮಸೀದಿ ಬಳಿಯ ಅಪಾರ್ಟ್‌ಮೆಂಟ್ ಮೇಲೆ ದಾಳಿ ನಡೆಸಿತು. ಎಲ್ಲ ಆರೋಪಿಗಳು ಕಾಲೇಜು ಅಧ್ಯಯನಕ್ಕಾಗಿ ನಗರದಲ್ಲಿ ತಂಗಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ದಾಳಿಯಲ್ಲಿ 12.26 ಕೆಜಿ ಗಾಂಜಾ ಪತ್ತೆಯಾಗಿದ್ದು, ಇದನ್ನು ಒಡಿಶಾದಿಂದ ತರಲಾಗಿದೆ. ಬಳಿಕ ಇದನ್ನು ಏಳು ಪೊಟ್ಟಣಗಳಲ್ಲಿ ಪ್ಯಾಕ್ ಮಾಡಲಾಗಿದೆ ಎಂದು ವರದಿಯಾಗಿದೆ.


# ಅಂಜನಾದ್ರಿ ನಮ್ಮ ಭಾಗದಲ್ಲಿ ಪ್ರಸಿದ್ದ ಪ್ರವಾಸಿ ಸ್ಥಳ: ಜನಾರ್ಧನ ರೆಡ್ಡಿ

**ಕೊಪ್ಪಳ:** ಆಂಜನೇಯ ಜನ್ಮಸ್ಥಳವಾದ ಅಂಜನಾದ್ರಿ ನಮ್ಮ ಭಾಗದ ಪ್ರಸಿದ್ಧ ಪ್ರವಾಸಿ ತಾಣವಾಗಿದ್ದು ಇದರ ಸರ್ವತೋಮುಖ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಗಂಗಾವತಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ. ಜನಾರ್ಧನ ರೆಡ್ಡಿ ಹೇಳಿದರು.

ಅವರು ಶುಕ್ರವಾರ ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ಕೊಪ್ಪಳ ಇವರ ಸಹಯೋಗದಲ್ಲಿ ವಿಶ್ವ ಪ್ರವಾಸೋದ್ಯಮ ದಿನದ ಅಂಗವಾಗಿ ಆನೆಗೊಂದಿ ಗ್ರಾಮದ ಗಗನ್ ಮಹಲದಿಂದ ಅಂಜನಾದ್ರಿ ಬೆಟ್ಟದವರೆಗೆ ಹಮ್ಮಿಕೊಂಡಿದ್ದ "ಪ್ಲಾಗ ರನ್" ಪ್ಲಾಸ್ಟಿಕ್ ಬಳಕೆ ಮುಕ್ತ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಪ್ರವಾಸೋದ್ಯಮ ಇಲಾಖೆ ನನ್ನ ಇಷ್ಟದ ಇಲಾಖೆಯಾಗಿದೆ ನಾನು ಈ ಹಿಂದೆ ಪ್ರವಾಸೋದ್ಯಮ ಇಲಾಖೆಯ ಸಚಿವನಾಗಿದ್ದಾಗ ನಮ್ಮ ಭಾಗದಲ್ಲಿ 6 ಜಂಗಲ್ ಲಾಡ್ಜಗಳಿದ್ದವು 19 ಜಂಗಲ್ ಲಾಡ್ಜಗಳನ್ನು ಕಟ್ಟುವ ಕೆಲಸ ಮಾಡಿದೆ. ಹಂಪಿಯಲ್ಲಿ 500 ಕೋಟಿ ಅನುದಾನ ಕೇಂದ್ರ ಮತ್ತು ರಾಜ್ಯ ಸರ್ಕಾರದ ಶೇ. 50 – 50ರ ಅನುಪಾತದಲ್ಲಿ ಹಂಪಿಗೆ ಬರುವ ಪ್ರವಾಸಿಗರಿಗೆ ಅನುಕೂಲವಾಗಲು ಹಂಪಿ, ಹೊಸಪೇಟೆ, ಕಮಲಾಪುರ ತಿರುಗಾಡಲು ಬ್ಯಾಟರಿಚಾಲಿತ ಕಾರುಗಳ ಜೊತೆಗೆ ಇತರೆ ಅಭಿವೃದ್ದಿ ಕಾರ್ಯಗಳನ್ನು ಮಾಡಿದ್ದೆ. 350 ಎಕರೆ ಪ್ರದೇಶದಲ್ಲಿ ಅಟಲ್ ಬಿಹಾರಿ ವಾಜಪೇಯಿ ಜೂ ಪಾರ್ಕ ಮಾಡಲಾಯಿತು. ಪ್ರವಾಸೋದ್ಯಮ ಬೆಳವಣಿಗೆಯಿಂದ ನಮ್ಮ ಭಾಗದ ವ್ಯಾಪಾರಸ್ಥರಿಗೆ ಅನುಕೂಲವಾಯಿತು ಎಂದರು.

ಪ್ರವಾಸೋದ್ಯಮ ಇಲಾಖೆಯಲ್ಲಿ ಗ್ರೀನ್ ಪೊಲೀಸ್ ವ್ಯವಸ್ಥೆ ಪರಿಚಯಿಸಿ ಗೈಡ್ ಹಾಗೂ ಪ್ರವಾಸಿಗರ ರಕ್ಷಣೆ ಒದಗಿಸುವ ವ್ಯವಸ್ಥೆ ಮಾಡಿದ್ದೆ. ವಿಜಯನಗರ




ಸಾಮ್ರಾಜ್ಯ ಅಂದು ಗೋವಾ, ತಮಿಳುನಾಡು, ಓರಿಸ್ಸಾ, ಪಶ್ಚಿಮ ಬಂಗಾಳದವರೆಗೆ ವಿಶಾಲವಾಗಿ ಹರಡಿತ್ತು. ಇಲ್ಲಿ ಹುಟ್ಟಿ ಬೆಳೆದ ನಾವುಗಳು ಪುಣ್ಯವಂತರು. ಅಂಜನಾದ್ರಿಗೆ ತಿರುಪತಿ ಮಾದರಿಯಲ್ಲಿ ಮೆಟ್ಟಿಲು, ಪ್ರದರ್ಶನ ಪಥ, ರಸ್ತೆ ಅಭಿವೃದ್ಧಿ ಮತ್ತು ರಸ್ತೆಯ ಎರಡು ಬದಿಗಳಲ್ಲಿ ಲೈಟಿಂಗ್ ವ್ಯವಸ್ಥೆ ಮಾಡುತ್ತಿದ್ದೆವೆ. ಇದರಿಂದ ಅಂಜನಾದ್ರಿಗೆ ಬರುವ ಭಕ್ತರಿಗೆ ಅನುಕೂಲವಾಗಲಿದೆ. ಎಲ್ಲರಿಗೂ ಪ್ರವಾಸೋದ್ಯಮ ದಿನದ ಶುಭಾಶಯಗಳು ಎಂದು ಹೇಳಿದರು.

ಪ್ಲಾಸ್ಟಿಕ್ ಬಳಕೆ ಮುಕ್ತ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು, ಈ ವರ್ಷದ ವಿಶ್ವ ಪ್ರವಾಸೋದ್ಯಮ ದಿನದ ಸಂದೇಶ ಪ್ರವಾಸೋದ್ಯಮ ಮತ್ತು ಸುಸ್ಥಿರ ಪರಿವರ್ತನೆ ಎಂಬುದಾಗಿದೆ. ಕಿಷ್ಕಿಂದಾ ಭಾಗದಲ್ಲಿ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಪ್ರವಾಸಿಗರು ಬರುತ್ತಾರೆ. ಪರಿಸರಕ್ಕೆ ಹಾನಿಯಾಗಭಾರದು ಮತ್ತು ಇಲ್ಲಿಗೆ ಬರುವ ಪ್ರವಾಸಿಗರಿಗೆ ಒಳ್ಳೆಯ ವಾತಾವರಣ ಇರಬೇಕು ಎನ್ನುವ ಉದ್ದೇಶದಿಂದ ಜನರಲ್ಲಿ ಅರಿವು ಮೂಡಿಸಲು ಪ್ಲಾಸ್ಟಿಕ್ ಬಳಕೆ ಮುಕ್ತ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.


ಕಾರ್ಯಕ್ರಮದ ಕುರಿತು ವಿಶೇಷ ಉಪನ್ಯಾಸ ನೀಡಿದ ಡಾ. ಶರಣಬಸಪ್ಪ ಕೋಲ್ಕರ್ ಅವರು ಮಾತನಾಡಿ, ಪ್ರವಾಸೋದ್ಯಮ ಇಂದು ಕೃಷಿಯಂತೆ ಉದ್ಯಮವಾಗಿ ಪರಿಭಾವಿಸಲಾಗಿದೆ. ಜಗತ್ತಿನಾದ್ಯಂತ ಇದು ತುಂಭಾ ಪ್ರಸಿದ್ಧಿಯನ್ನು ಪಡೆಯುತ್ತಿದೆ. ಇದರಿಂದ ಜನರ ಬೌದ್ದಿಕ ಬೆಳವಣಿಗೆಗೆ ಕಾರಣವಾಗಿದೆ. ದೇಶ ನೋಡು ಕೋಶ ಓದು ಎನ್ನುವಂತೆ ಇದರಿಂದ ಜ್ಞಾನವನ್ನು ಪಡೆಯಬಹುದು. ಬೇರೆ ಬೇರೆ ಸ್ಥಳಗಳ ಸಂಸ್ಕೃತಿ, ಪರಂಪರೆ, ನಂಬಿಕೆ ಮತ್ತು ಜನಾಂಗ ಯಾವ ರೀತಿಯಲ್ಲಿ ಬದುಕಬೇಕು ಎಂಬುದರ ದಾರಿ ತೋರಿಸುತ್ತದೆ. ನಮ್ಮ ಭಾಗದಲ್ಲಿ ನೂರಾರು ಆದಿಮಾನವನ ವಾಸ ಸ್ಥಾನಗಳಿವೆ. ಪಂಪಾ ಕ್ಷೇತ್ರ. ಕಿಷ್ಕಿಂದಾ ಸೇರಿದಂತೆ ಅನೇಕ ಸ್ಥಳಗಳಿವೆ ನಮ್ಮ ಭಾಗದ ಚರಿತ್ರೆ ಜಗತ್ತಿಗೆ ತೋರಿಸಬೇಕಿದೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಮಾತನಾಡಿ, ವಿಶ್ವ ಪ್ರವಾಸೋದ್ಯಮ ದಿನದ ಅಂಗವಾಗಿ ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ಕೊಪ್ಪಳ ಸೇರಿದಂತೆ ವಿವಿಧ ಇಲಾಖೆಯ ಸಹಯೋಗದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮಕ್ಕೆ ವಿವಿಧ ಸಂಘ ಸಂಸ್ಥೆಯವರು ಬಂದಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತೆನೆ.

ಭಾರತದ ನಮ್ಮ ಸಂಸ್ಕೃತಿ ನಾವು ಹೇಗೆ ಅವರನ್ನು ಪ್ರೀತಿ ವಿಶ್ವಾಸದಿಂದ ಕಾಣಬೇಕಿದೆ. ಅವರು ಇತರೆ ಪ್ರವಾಸಿಗರಿಗೆ ಈ ಭಾಗದ ಕುರಿತು ಒಳ್ಳೆಯ ಮಾಹಿತಿ ನೀಡುತ್ತಾರೆ. ನಾವು ಎಲ್ಲೂ ಪ್ಲಾಸ್ಟಿಕ್ ಎಸೆಯಲು ಅವಕಾಶ ಕೊಡಬಾರದು. ನಮ್ಮ ರಾಜ್ಯದ ಪ್ರವಾಸೋದ್ಯಮ ಇಲಾಖೆಯ ಸಂದೇಶ ಒಂದು ರಾಜ್ಯ ಹಲವು ಜಗತ್ತುಗಳು ಎಂಬುದಾಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಆನೆಗೊಂದಿ ಗ್ರಾಮ ಪಂಚಾಯತ ಅಧ್ಯಕ್ಷರಾದ ಹುಲಿಗೆಮ್ಮ ಹೊನ್ನಪ್ಪ ನಾಯಕ್, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ, ಪ್ರಾಚ್ಯವಸ್ತು ಇಲಾಖೆಯ ಅಧಿಕಾರಿ ಸೆಜೇಶ್ವರ, ಆನೆಗೊಂದಿ ರಾಜ ವಶಂಸ್ಥರಾದ ಲಲಿತಾರಾಣಿ ಶ್ರೀ ರಂಗದೇವರಾಯಲು, ಹಾಗೂ ರಾಜಾ ಶ್ರೀ ಕೃಷ್ಣ ದೇವರಾಯ, ಲಕ್ಷ್ಮೀ ಅರುಣಾ ಜನಾರ್ದನ ರೆಡ್ಡಿ, ಪ್ರವಾಸೋದ್ಯಮ ಇಲಾಖೆಯ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜ, ಕನಕಗಿರಿ ತಹಶಿಲ್ದಾರ ವಿಶ್ವನಾಥ ಮುರಡಿ, ಗಂಗಾವತಿ ತಹಶಿಲ್ದಾರ ನಾಗರಾಜ ಮತ್ತು ಕೊಪ್ಪಳ, ಗಂಗಾವತಿ, ಕಿಷ್ಕಿಂದಾ ಚಾರಣ ಬಳಗ, ಗೋ ಗ್ರೀನ್ ಗಂಗಾವತಿ, ಪರಿಸರ ಸೇವಾ ಟ್ರಸ್ಟ್ ಗಂಗಾವತಿ ಪದಾಧಿಕಾರಿಗಳು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಳೆಗೆ ಮನೆ ಕುಸಿದು ಬಾಲಕ ಸಾವು



**ಮಹಾಲಿಂಗಪುರ:** ಎರಡು ದಿನ ಬಿಟ್ಟೂ ಬಿಡದೇ ಅಹೋರಾತ್ರಿ ಸುರಿದ ಮಳೆಗೆ ಪಕ್ಕದ ಮನೆಯ ಗೋಡೆ ಕುಸಿದು ಪಕ್ಕದ ಶೆಡ್‌ನಲ್ಲಿ ಮಲಗಿದ ಬಾಲಕನ ತಲೆಯ ಮೇಲೆ ಕಲ್ಲು ಬಿದ್ದ ಪರಿಣಾಮ ಬಾಲಕ ಮೃತಪಟ್ಟ ಘಟನೆ ಮಹಾಲಿಂಗಪುರದ ಅಂಬೇಡ್ಕರ ವೃತ್ತದ ಬಳಿ ಲಾತೂರ ಓಣಿಯಲ್ಲಿ ಘಟಿಸಿದೆ.

ದರ್ಶನ ನಾಗಪ್ಪ ಲಾತೂರ (11) ಮೃತ ಬಾಲಕ. ಇಕ್ಕಟ್ಟಾದ ಓಣಿಯಲ್ಲಿ ಬಂಧುಗಳ ಮನೆ ಹೊಂದಿಕೊಂಡಿವೆ. ಹಳೇ ಗೋಡೆಗಳಿಗೆ ಹೊಂದಿಕೊಂಡು ಶೇಡ್‌ನಲ್ಲಿ ಪರಿವಾರ ವಾಸಿಸುತ್ತಿತ್ತು. ಶುಕ್ರವಾರ ಇಡೀ ದಿನ ಮತ್ತು ಶನಿವಾರ ಅಹೋರಾತ್ರಿ ಸುರಿದ ಮಳೆಗೆ ಪಕ್ಕದ ಮನೆ ಗೋಡೆ ನೆನೆದಿದೆ. ಶನಿವಾರ ನಸುಕಿನ ಜಾವ ಗೋಡೆ ಕುಸಿದು ಪತ್ರಾಸ್ ಚಾವಣಿ ಮೇಲೆ ಬಿದ್ದಿದೆ. ಕೆಳಗೆ ಮಲಗಿದ್ದ ಬಾಲಕನ ತಲೆ ಮೇಲೆ ಕಲ್ಲು ಬಿದ್ದು ಮೃತಪಟ್ಟಿದ್ದಾನೆ. ಬಾಲಕನ ತಮ್ಮ ಗಾಯಗೊಂಡಿದ್ದು, ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಬಾಲಕನ ತಾಯಿ ರೂಪಾ ಮತ್ತು ಸಹೋದರಿ ಅದೃಷ್ಟವಶಾತ್ ಪಾರಾಗಿದ್ದಾರೆ. ತಂದೆ ನಾಗಪ್ಪ ಮನೆಯಲ್ಲಿರಲಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಠಾಣಾಧಿಕಾರಿ ಕಿರಣ ಸತ್ತಿಗೇರಿ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಪಡೆದು ಕ್ರಮ ಜರುಗಿಸಿದ್ದಾರೆ. ವಿಷಯ ತಿಳಿದು ತಹಸಿಲ್ದಾರ ಮತ್ತು ಶಾಸಕ ಸಿದ್ದು ಸವದಿ ಮೃತ ಬಾಲಕನ ಮನೆಗೆ ಮತ್ತು ಆಸ್ಪತ್ರೆಗೆ ಭೇಟಿ ನೀಡಿ ಸಾಂತ್ವನ ಹೇಳಿದ್ದಾರೆ. ಮೃತರ ಕುಟುಂಬಕ್ಕೆ ಸರಕಾರದಿಂದ 5 ಲಕ್ಷ ಪರಿಹಾರ ಕೊಡಿಸುವುದಾಗಿ ಹೇಳಿ ಸರಕಾರದಿಂದ ಮನೆ ನಿರ್ಮಿಸಿಕೊಡುವಂತೆ ತಹಸಿಲ್ದಾರಗೆ ಆದೇಶ ಮಾಡಿದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016 DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :200, Postal Reg No. PMG/KA/NK/BM/135/25-27 / POST AT Vantamury Colony Post Office